ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 48 RNI Number : KNKAN/25/A2770 22-02-2026 Sunday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :48 ರಾಯಚೂರು 22-02-2026 ರವಿವಾರ ಪುಟ 04 ಬೆಲೆ ರೂ.2/- ಮೊ:8660146563

ಸಿರವಾರ ತಾಲೂಕನ್ನು ಸಿಂಧನೂರಿಗೆ ಸೇರ್ಪಡೆ ವಿರೋಧಿಸಿ 23ರಂದು ಐತಿಹಾಸಿಕ ಪಾದಯಾತ್ರೆ



ಸಿರವಾರ, ಫೆ.21-

ಸಿರವಾರ ತಾಲೂಕನ್ನು ನೂತನ ಜಿಲ್ಲೆಯಾಗಿ ರೂಪುಗೊಳ್ಳಲು ಸಜ್ಜಾಗುತ್ತಿರುವ ಸಿಂಧನೂರಿಗೆ ಸೇರ್ಪಡೆ ಮಾಡುವ ಸರ್ಕಾರದ ಪ್ರಸ್ತಾವನೆಗೆ ತೀವ್ರ ವಿರೋಧ ವ್ಯಕ್ತವಾಗಿದೆ. ಪ್ರಸ್ತುತ ರಾಯಚೂರು ಜಿಲ್ಲೆಗೆ ಒಳಪಡುವ ಸಿರವಾರ ತಾಲೂಕು ಭೌಗೋಳಿಕವಾಗಿ, ಆಡಳಿತಾತ್ಮಕವಾಗಿ ಮತ್ತು ಸಾಮಾಜಿಕವಾಗಿ ರಾಯಚೂರಿನೊಂದಿಗೆ ನಿಕಟ ಸಂಪರ್ಕ ಹೊಂದಿದ್ದು, ಕೇವಲ 36 ಕಿ.ಮೀ ದೂರದಲ್ಲಿದೆ. ಆದರೆ ಸುಮಾರು 80ಕ್ಕೂ ಹೆಚ್ಚು ಕಿ.ಮೀ ದೂರವಿರುವ ಸಿಂಧನೂರಿಗೆ ಸೇರ್ಪಡೆ ಮಾಡುವ ಕ್ರಮವನ್ನು ''ಅವೈಜ್ಞಾನಿಕ ಹಾಗೂ ಜನವಿರೋಧಿ'' ಎಂದು ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಫೆಬ್ರವರಿ 23ರಂದು ಸಿರವಾರ ಪಟ್ಟಣದಲ್ಲಿ ವಿವಿಧ ಸಂಘಟನೆಗಳು, ರೈತರು, ವಿದ್ಯಾರ್ಥಿಗಳು, ಮಹಿಳಾ ಸಂಘಗಳು ಹಾಗೂ ವ್ಯಾಪಾರಸ್ಥರ ನೇತೃತ್ವದಲ್ಲಿ ಭಾರಿ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ.

ಜನಾಭಿಪ್ರಾಯಕ್ಕೆ ಧಕ್ಕೆ; ರಾಜಕೀಯ ಲಾಭಕ್ಕಾಗಿ ನಿರ್ಧಾರವೇ? ಸಾರ್ವಜನಿಕರ ಪ್ರಶ್ನೆ

ಸೇರ್ಪಡೆಗೆ ವಿರೋಧದ ಪ್ರಮುಖ ಅನಾನುಕೂಲಗಳು

★ಅತಿದೂರದ ಆಡಳಿತ ಕೇಂದ್ರ:★ ಈಗಿನ ರಾಯಚೂರಿಗೆ ಸುಲಭವಾಗಿ ತಲುಪಬಹುದಾದರೆ, ಸಿಂಧನೂರಿಗೆ ಸುಮಾರು 80 ಕಿ.ಮೀ ಕ್ಕೂ ಹೆಚ್ಚು ಪ್ರಯಾಣ ಅನಿವಾರ್ಯ. ದಿನನಿತ್ಯದ ಸರ್ಕಾರಿ ಕೆಲಸಗಳಿಗೆ ಜನರಿಗೆ ಸಮಯ ಮತ್ತು ಹಣದ ಹೆಚ್ಚುವರಿ ಭಾರ.

★ಸಾರಿಗೆ ಸೌಲಭ್ಯ ಕೊರತೆ:★ ಸಿಂಧನೂರಿಗೆ ನೇರ ಹಾಗೂ ನಿಯಮಿತ ಬಸ್ ವ್ಯವಸ್ಥೆ ಕಡಿಮೆ. ಗ್ರಾಮೀಣ ಭಾಗದ ಜನರು ಎರಡು-ಮೂರು ಬಸ್ ಬದಲಾಯಿಸಿ ತೆರಳಬೇಕಾದ ಪರಿಸ್ಥಿತಿ.

★ದಾಖಲೆ ಬದಲಾವಣೆಯ ಗೊಂದಲ:★ ಭೂ ದಾಖಲೆ, ಆದಾಯ ಪ್ರಮಾಣ ಪತ್ರ, ಜಾತಿ ಪ್ರಮಾಣ ಪತ್ರ, ಆಧಾರ್, ಮತದಾರರ ಪಟ್ಟಿ ಸೇರಿದಂತೆ ಅನೇಕ ದಾಖಲೆಗಳಲ್ಲಿ ಬದಲಾವಣೆ ಅಗತ್ಯವಾಗುವುದು. ಇದು ಜನರಿಗೆ ತೊಂದರೆ ಹಾಗೂ ಆಡಳಿತದ ಮೇಲಿನ ಒತ್ತಡವನ್ನು ಹೆಚ್ಚಿಸುತ್ತದೆ.

★ನ್ಯಾಯಾಂಗ ಅಲೆದಾಟ:★ ಕೋರ್ಟ್ ಪ್ರಕರಣಗಳು, ದಾಖಲೆ ಪರಿಶೀಲನೆ, ವಕೀಲರ ಸಂಪರ್ಕಎಲ್ಲ ಸಿಂಧನೂರಿನಲ್ಲಿ ನಡೆಯಬೇಕಾದರೆ, ಜನರಿಗೆ ಹೆಚ್ಚುವರಿ ವೆಚ್ಚ ಮತ್ತು ವಿಳಂಬ.

★ಶೈಕ್ಷಣಿಕ ವ್ಯವಹಾರಗಳಲ್ಲಿ ಅಡಚಣೆ:★ ವಿದ್ಯಾರ್ಥಿಗಳ ದಾಖಲಾತಿ, ವರ್ಗಾವಣೆ ಪ್ರಮಾಣ ಪತ್ರ, ಪರೀಕ್ಷಾ ಕೇಂದ್ರಗಳ ಬದಲಾವಣೆಇವೆಲ್ಲ ಗೊಂದಲ ಉಂಟುಮಾಡುವ ಸಾಧ್ಯತೆ.

★ಆರೋಗ್ಯ ಸೇವೆಗಳಿಗೆ ಅಡಚಣೆ:★ ತುರ್ತು ಚಿಕಿತ್ಸೆ , ಜಿಲ್ಲಾ ಆಸ್ಪತ್ರೆ ಸೇವೆಗಳಿಗೆ ದೂರ ಪ್ರಯಾಣ ಅಗತ್ಯ. ಆಂಬ್ಯುಲೆನ್ಸ್ ಸೇವೆಗಳ ವಿಳಂಬದಿಂದ ಜೀವಾಪಾಯದ ಭೀತಿ.

★ಕೃಷಿ ಮತ್ತು ವಾಣಿಜ್ಯ ಹಿನ್ನಡೆ:★ ರೈತರು ಮಾರುಕಟ್ಟೆ, ಕೃಷಿ ಇಲಾಖೆ, ಬ್ಯಾಂಕ್, ಸಹಕಾರಿ ಸಂಘಗಳ ಸೇವೆಗಳಿಗೆ ದೂರ ಪ್ರಯಾಣಿಸಬೇಕಾಗುತ್ತದೆ. ವ್ಯಾಪಾರ ಚಟುವಟಿಕೆಗಳಿಗೆ ಹೊರೆ.

★ಸಾಮಾಜಿಕ-ಸಾಂಸ್ಕೃತಿಕ ಬಾಂಧವ್ಯಕ್ಕೆ ಧಕ್ಕೆ:★ ಸಿರವಾರ ಜನರ ಬಹುತೇಕ ಆಡಳಿತಾತ್ಮಕ, ವಾಣಿಜ್ಯ ಹಾಗೂ ಸಾಮಾಜಿಕ ಸಂಪರ್ಕಗಳು ರಾಯಚೂರಿನೊಂದಿಗೆ ಬೆಸೆದುಕೊಂಡಿವೆ. ದಶಕಗಳಿಂದ ಇರುವ ಸಂಬಂಧ ಕಡಿತಗೊಳ್ಳುವ ಆತಂಕ.

★ಭೂಗೋಳ ಮತ್ತು ಸಂಪರ್ಕ ವ್ಯವಸ್ಥೆಯ ಅಸಮರ್ಪಕತೆ:★ ಸಿರವಾರದಿಂದ ಸಿಂಧನೂರಿಗೆ ರಸ್ತೆ ಸಂಪರ್ಕ ಸಮರ್ಪಕವಾಗಿಲ್ಲ ಎಂಬುದು ಸ್ಥಳೀಯರ ಆರೋಪ. ಮಳೆಗಾಲದಲ್ಲಿ ಸಂಚಾರ ಸಮಸ್ಯೆ ಹೆಚ್ಚಾಗುತ್ತದೆ.

★ಆಡಳಿತಾತ್ಮಕ ವಿಳಂಬದ ಭೀತಿ:★ ಹೊಸ ಜಿಲ್ಲೆ ಸ್ಥಾಪನೆಯ ಪ್ರಕ್ರಿಯೆಯಲ್ಲಿ ಕಚೇರಿ ಸೌಲಭ್ಯಗಳು ಪೂರ್ಣ ಪ್ರಮಾಣದಲ್ಲಿ ಸಜ್ಜಾಗದಿದ್ದರೆ ಜನಸೇವೆಗೆ ವಿಳಂಬ.

★ಸಾರ್ವಜನಿಕ ಅಭಿಪ್ರಾಯದ ನಿರ್ಲಕ್ಷ್ಯ:★ ಈ ನಿರ್ಧಾರ ಕೈಗೊಳ್ಳುವ ಮೊದಲು ಸ್ಥಳೀಯ ಜನರೊಂದಿಗೆ ಸಮಗ್ರ ಚರ್ಚೆ ನಡೆಸಿಲ್ಲ ಎಂಬ ಆಕ್ಷೇಪ.

'' ರಾಜಕೀಯ ಲಾಭಕ್ಕಾಗಿ ನಿರ್ಧಾರ ಬೇಡ'' ಜನರ ಆಗ್ರಹ

ಸಾರ್ವಜನಿಕರು ಹಾಗೂ ಹೋರಾಟ ಸಮಿತಿ ಮುಖಂಡರು, ''ರಾಜಕೀಯ ಲಾಭಕ್ಕಾಗಿ ಈ ರೀತಿಯ ಆಡಳಿತಾತ್ಮಕ ನಿರ್ಧಾರಗಳನ್ನು ತೆಗೆದುಕೊಳ್ಳುವುದು ಸರಿಯಲ್ಲ. ಜನರಿಗೆ ಉಪಯೋಗಕ್ಕಿಂತ ಅನಾನುಕೂಲಗಳು ಹೆಚ್ಚು ಉಂಟಾಗುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ. ಆಡಳಿತ ಸುಲಭವಾಗಬೇಕು ಎಂಬ ಉದ್ದೇಶಕ್ಕಿಂತ, ರಾಜಕೀಯ ಹಿತಾಸಕ್ತಿಗೆ ಪ್ರಾಮುಖ್ಯತೆ ನೀಡಲಾಗುತ್ತಿದೆ ಎಂಬ ಅನುಮಾನ ಜನರಲ್ಲಿ ಮೂಡಿದೆ'' ಎಂದು ಆರೋಪಿಸಿದ್ದಾರೆ.

ಅವರು ಮುಂದುವರೆದು, ''ಯಾವುದೇ ತಾಲೂಕು ಅಥವಾ ಜಿಲ್ಲೆ ಪುನರ್‌ವ್ಯವಸ್ಥೆ ಮಾಡುವ ಮುನ್ನ ಭೌಗೋಳಿಕ, ಸಾಮಾಜಿಕ, ಆರ್ಥಿಕ ಮತ್ತು ಸಾರಿಗೆ ಅಂಶಗಳನ್ನು ಸಮಗ್ರವಾಗಿ ಪರಿಶೀಲಿಸಬೇಕು. ಜನಾಭಿಪ್ರಾಯ ಸಂಗ್ರಹಿಸದೆ ತೆಗೆದುಕೊಳ್ಳುವ ನಿರ್ಧಾರಗಳು ಮುಂದಿನ ದಿನಗಳಲ್ಲಿ ಗಂಭೀರ ಸಮಸ್ಯೆಗಳಿಗೆ ಕಾರಣವಾಗಬಹುದು'' ಎಂದು ಎಚ್ಚರಿಸಿದ್ದಾರೆ.

ಜೊತೆಗೆ,ತಾಲೂಕು ಘೋಷಣೆಯಾಗಿ ದಶಕಗಳಾದರೂ ಅಭಿವೃದ್ಧಿ ಕಾಣದ ಸಿರವಾರಕ್ಕೆ ವಿಶೇಷ ಪ್ಯಾಕೇಜ್ ಘೋಷಿಸಿ, ರಸ್ತೆ, ಆರೋಗ್ಯ, ಶಿಕ್ಷಣ, ಕೈಗಾರಿಕೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಪ್ರಗತಿ ತರಲು ಕ್ರಮ ಕೈಗೊಳ್ಳಬೇಕು.

3ನೇ ಪುಟಕ್ಕೆ

ರಾಯಚೂರು ಮಹಾನಗರ ಪಾಲಿಕೆ ಆಯುಕ್ತರಿಂದ ನಗರ ಸಂಚಾರ: ಕಾಮಗಾರಿಗಳ ಪರಿಶೀಲನೆ

ರಾಯಚೂರು ಫೆಬ್ರವರಿ 21

ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಾಪಾತ್ರ ಅವರು ಫೆ.20ರಂದು ನಗರದ ವಿವಿಧ ಪ್ರದೇಶಗಳಲ್ಲಿ ಸಂಚರಿಸಿ ಪ್ರಗತಿಯಲ್ಲಿರುವ ಮತ್ತು ಪ್ರಸ್ತಾವಿತ ಅಭಿವೃದ್ಧಿ ಕಾಮಗಾರಿಗಳು ಹಾಗೂ ಕಾಮಗಾರಿಗಳ ಸ್ಥಳ ಪರಿಶೀಲನೆ ನಡೆಸಿದರು.



ಈ ವೇಳೆ ಅವರು ಚಾಲ್ತಿಯಲ್ಲಿರುವ ಯೋಜನೆಗಳನ್ನು ವೇಗಗೊಳಿಸು ವುದು ಹಾಗೂ ಭವಿಷ್ಯದ ಅಭಿವೃದ್ಧಿ ಯೋಜನೆಗಳನ್ನು ರೂಪಿಸುವ ಕುರಿತು ಅಧಿಕಾರಿಗಳೊಂದಿಗೆ ಸಮಗ್ರ ಚರ್ಚೆ ನಡೆಸಿ ಅಗತ್ಯ ಮಾರ್ಗದರ್ಶನ ನೀಡಿದರು.

ಆಯುಕ್ತರು ಮೊದಲು ಮಾವಿನ ಕೆರೆ ಪ್ರದೇಶಕ್ಕೆ ಭೇಟಿ ನೀಡಿ ಅಲ್ಲಿನ ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿ ಸಿದರು. ಸಾರ್ವಜನಿಕ ಸ್ಥಳಗಳಲ್ಲಿನ ಅತಿಕ್ರಮಣಗಳನ್ನು ತಕ್ಷಣವೇ ತೆರವುಗೊಳಿಸುವಂತೆ ಸಂಬಧಪಟ್ಟ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಇದರ ಜೊತೆಗೆ ಮಾವಿನಕೆರೆಯ ಉದ್ಯಾನವನ ಅಭಿವೃದ್ಧಿ ಕಾಮಗಾರಿಯನ್ನು ನಿಗದಿತ ಗುಣಮಟ್ಟದೊಂದಿಗೆ ಶೀಘ್ರವಾಗಿ ಪೂರ್ಣಗೊಳಿಸುವಂತೆ ಸಂಬಧಿಸಿದ ಅಧಿಕಾರಿ ಗಳಿಗೆ ನಿರ್ದೇಶನ ನೀಡಿದರು.

ಬಳಿಕ ಇಂದಿರಾ ನಗರದಲ್ಲಿ ನೂತನವಾಗಿ ನಿರ್ಮಿಸಲಾದ ಹೈಟೆಕ್ ಸಾರ್ವಜನಿಕ ಶೌಚಾಲಯಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು ಈ ಸೌಲಭ್ಯವನ್ನು ತ್ವರಿತವಾಗಿ ಪ್ರಾರಂಭಿಸುವ ಮೂಲಕ ಸ್ಥಳೀಯ ನಿವಾಸಿಗಳಿಗೆ ಲಭ್ಯವಾಗುವಂತೆ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ನಂತರ ಸ್ವಚ್ಛತಾ ಕಾರ್ಮಿಕರಿಗಾಗಿ ಮೀಸಲಿಟ್ಟಿರುವ ಸ್ಮಶಾನ ಸ್ಥಳದ ಅಭಿವೃದ್ಧಿ ಕಾಮಗಾರಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅಲ್ಲಿ ಅಗತ್ಯವಿರುವ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಕುರಿತು ಚರ್ಚಿಸಿ, ಈ ನಿಟ್ಟಿನಲ್ಲಿ ಸೂಕ್ತ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಅಂತಿಮವಾಗಿ ಮಹಾತ್ಮ ಗಾಂಧಿ ನಗರ ವಿಕಾಸ ಯೋಜನೆ ಅಡಿಯಲ್ಲಿ ಪ್ರಸ್ತಾಪಿಸಲಾದ ಅಭಿವೃದ್ಧಿ ಕಾಮಗಾರಿಗಳ ವ್ಯಾಪ್ತಿಯಲ್ಲಿ ಹೊಸ ರಸ್ತೆಗಳ ನಿರ್ಮಾಣ ಮತ್ತು ಅಭಿವೃದ್ಧಿಗಾಗಿ ಸ್ಥಳ ಪರಿಶೀಲನೆ ನಡೆಸಿದರು. ಈ ಯೋಜನೆಯಡಿ ಕೈಗೊಳ್ಳಬೇಕಿರುವ ಕಾಮಗಾರಿಗಳಿಗಾಗಿ ಸಮಗ್ರ ಯೋಜನೆಯನ್ನು ರೂಪಿಸಿ ಬೇಗನೇ ಕಾರ್ಯಾರಂಭ ಮಾಡುವಂತೆ ಅಧಿಕಾರಿಗಳಿಗೆ ಮಾರ್ಗದರ್ಶನ ನೀಡಿದರು. ಅಲ್ಲದೆ ನಗರದ ಸಮಗ್ರ ಅಭಿವೃದ್ಧಿ, ಸೌಂದರ್ಯೀಕರಣ ಮತ್ತು ಜನರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ನಿಟ್ಟನಲ್ಲಿ ಮಹಾನಗರ ಪಾಲಿಕೆ ಬದ್ಧವಾಗಿದೆ ಎಂದರು.

ಇದೇ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಉಪ

3ನೇ ಪುಟಕ್ಕೆ

ಹಾಡು ಮುಟ್ಟದ ಗಿಡ ವಿಲ್ಲ ಸರ್ವಜ್ಞ ಹೇಳದ ವಿಷಯವಿಲ್ಲ. ಡಾ ಬಿರಾದಾರ

ರಾಯಚೂರು,ಫೆ.21-

ಸರ್ವಜ್ಞನಿಗೆ ಸರ್ವ ವಿಷಯವನ್ನು ಗೊತ್ತಿದ್ದರೂ ಅದನ್ನು ಯಾರಿಗೂ ತೋರಿಸಿಕೊಡದೆ ಹಲವಾರು ವಚನಗಳನ್ನು



ಅದರಲ್ಲಿ ವಿಶೇಷ ವಚನಗಳನ್ನು ಬರೆವುದರ ಮೂಲಕ ಸಮಾಜದಲ್ಲಿನ ಅಂಕು ಡೊಂಕುಗಳನ್ನು ತಿದ್ದುವ ಮಹತ್ವ ಕಾರ್ಯವನ್ನ ಮಾಡಿದ್ದಾನೆ. ಸಮಾಜದಲ್ಲಿಯ ಡಂಬಾ ಚಾರ. ಅರ್ಥವಿಲ್ಲದ ಪೂಜೆ.ಇವುಗಳ ವಿಷಯ ಕುರಿತು ಉತವಾಗಿ ಮತ್ತು ತೀಕ್ಷಣವಾಗಿ ತನ್ನ ತ್ರಿಪದಿಗಳಲ್ಲಿ ತಿಳಿಸಿದ್ದಾನೆ.ಶಿವನ ಬಗ್ಗೆ. ಗುರುವಿನ ಸ್ಥಾನದ ಬಗ್ಗೆ. ಜಾತಿ.ಮಡಿ.ಮೈಲಿಗೆ ಬಗ್ಗೆ ತಮ್ಮ ವಚನಗಳಲ್ಲಿ ಜನರಿಗೆ ಮನಮುಟ್ಟುವಂತೆ ಸರಳವಾದ ರೀತಿಯಲ್ಲಿ ತಿಳಿಸಿದ್ದಾನೆ. ಮನೆಯಲ್ಲಿ ಹಿರಿಯರು ಹೇಗಿರಬೇಕು.ಕುಟುಂಬದಲ್ಲಿ ಹೆಣ್ಣು ಮಕ್ಕಳಿಗೆ ಗೌರವ ಕೊಡಬೇಕು.ಸಜ್ಜನರ ಸಂಘದಿಂದ ಆಗುವ ಲಾಭಗಳ ಕುರಿತು. ಜೊತೆಗೆ ಹೆಂಡ ಸಾರಾಯಿ ಸೇವನಿಂದ ಕುಟುಂಬದ ಮೇಲೆ ಆಗುತ್ತಿರುವ ಹಾನೆಗಳ ಕುರಿತು ಬಹಳ ಮಾರ್ಮಿಕ ವಾಗಿ ತಮ್ಮ ತ್ರಿಪದಿ ವಚನಗಳಲ್ಲಿ ತಿಳಿಸಿದ್ದಾನೆ. ಸಂಸಾರದಲ್ಲಿ ಸುಖವಾಗಿ ಇರಬೇಕಾದರೆ ಯಾವ ವಿಷಯಗಳನ್ನು ಪಾಲನೆ ಮಾಡಬೇಕು. ಮತ್ತು ಸಾಲವನ್ನು ತೆಗೆದುಕೊಂಡಾಗ ಇರುವ ಮನಸ್ಸು ಕೊಡುವಾಗ ಏಕೆ

3ನೇ ಪುಟಕ್ಕೆ

ಪರೀಕ್ಷೆ ಸಿದ್ಧತೆಯ ಪೂರ್ವಭಾವಿ ಸಭೆ

ಪಿಯು ಪರೀಕ್ಷೆಯು ವ್ಯವಸ್ಥಿತ, ಪಾರದರ್ಶಕವಾಗಿ ನಡೆಯಲಿ: ಅಪರ ಜಿಲ್ಲಾಧಿಕಾರಿ ಶಿವಾನಂದ

ರಾಯಚೂರು ಫೆ.21-

ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳು ಫೆ.28 ರಿಂದ ಆರಂಭವಾಗಿ ಮಾರ್ಚ 17ರವರೆಗೆ ನಡೆಯಲಿದ್ದು, ಪರೀಕ್ಷೆಯನ್ನು ವ್ಯವಸ್ಥಿತವಾಗಿ ಹಾಗೂ ಪಾರದರ್ಶಕವಾಗಿ ನಡೆಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಸಂಬಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.



ಫೆ.21ರ ಶನಿವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ ಸಿದ್ಧತೆ ಕುರಿತು ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳನ್ನು ಯಾವುದೇ ರೀತಿಯ ಗೊಂದಲಕ್ಕೆ ಅವಕಾಶವಿರದಂತೆ, ಸುಗಮ ಹಾಗೂ ಸುವ್ಯವಸ್ಥಿತವಾಗಿ ನಡೆಸಬೇಕು. ಪರೀಕ್ಷೆಗೆ ಮೇಲ್ವಿಚಾರಕರ ನಿಯೋಜನೆ, ಪೊಲೀಸರು ಹಾಗೂ ಆರೋಗ್ಯ ಸಿಬ್ಬಂದಿ ನಿಯೋಜನೆ ಸೇರಿದಂತೆ ಪಿಯು ಪರೀಕ್ಷಾ ಪ್ರಾಧಿಕಾರದ ನಿರ್ದೇಶನವನ್ನು ಚಾಚೂ ತಪ್ಪದೆ ಪಾಲಿಸುವಂತೆ ಸಂಬಧಿಸಿದ ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿಗಳು ಸೂಚಿಸಿದರು.

ಪರೀಕ್ಷಾ ಕೊಠಡಿಗಳಲ್ಲಿ ಸಿಸಿಟಿವಿ ಅಳವಡಿಸುವುದು ಸೇರಿದಂತೆ ಪರೀಕ್ಷಾ ಪಾವಿತ್ರ್ಯತೆಯನ್ನು ಕಾಪಾಡಬೇಕು. ಪರೀಕ್ಷಾ ಕೇಂದ್ರಗಳ ಚಲನವಲನಕ್ಕೆ ಸಂಬಧಿಸಿದತೆ

3ನೇ ಪುಟಕ್ಕೆ

ಕೊಪ್ಪಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಾರ್ವಜನಿಕ ಮಾಹಿತಿ

ಅಧಿಕಾರಿಗಳಿಗೆ ಕಾರ್ಯಾಗಾರ ಹಾಗೂ ಸಂವಾದ ಕಾರ್ಯಕ್ರಮ: ಮಾಹಿತಿ ಹಕ್ಕು ಕಾಯ್ದೆ ಜನಪರ, ಪ್ರಬಲ ಕಾಯ್ದೆಯಾಗಿದೆ

ರಾಯಚೂರು ಫೆಬ್ರವರಿ 21-

ಮಾಹಿತಿ ಹಕ್ಕು ಕಾಯ್ದೆ ಜನಪರ ಮತ್ತು ಪ್ರಬಲ ಕಾಯ್ದೆಯಾಗಿದ್ದು, ಪಾರದರ್ಶಕ ಆಡಳಿತ ವ್ಯವಸ್ಥೆಯನ್ನು ಜಾರಿಗೊಳಿಸುವಲ್ಲಿ ಪ್ರಮುಖವಾಗಿ ಕಾರ್ಯನಿರ್ವಹಿಸುತ್ತದೆ. ಸಾರ್ವಜನಿಕ ಸೇವೆಯಲ್ಲಿರುವವರಿಗೆ ಮಾಹಿತಿ ಹಕ್ಕು ಕಾಯ್ದೆಯು ರಕ್ಷಣೆಯೂ ಹೌದು, ಎಚ್ಚರಿಕೆಯೂ ಹೌದು ಎಂದು ಕರ್ನಾಟಕ ರಾಜ್ಯ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ. ವೆಂಕಟ್ ಸಿಂಗ್ ಹೇಳಿದರು.



ಕೊಪ್ಪಳ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲನಲ್ಲಿ ಫೆ.21ರಂದು ಕೊಪ್ಪಳ ಜಿಲ್ಲೆಯ ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಮಾಹಿತಿ ಹಕ್ಕು ಕಾಯ್ದೆಯ ಕುರಿತು ಹಮ್ಮಿಕೊಂಡಿದ್ದ ಕಾರ್ಯಾಗಾರ ಹಾಗೂ ಸಂವಾದ ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಮಾಹಿತಿ ಹಕ್ಕು ಕಾಯ್ದೆಯ ಮುಖ್ಯ ಉದ್ದೇಶ ಸರ್ಕಾರದ ಆಡಳಿತದಲ್ಲಿ ಸಾರ್ವಜನಿಕರು ಭಾಗವಹಿಸುವುದಾಗಿದೆ. ಸರಕಾರದ ಯೋಜನೆ ಕುರಿತು ಸಾರ್ವಜನಿಕರು ಮಾಹಿತಿ ಪಡೆಯಲು ಈ ಕಾಯ್ದೆಯಡಿ ಅವಕಾಶವಿದೆ. ಇದರಿಂದ ಜನರಿಗೆ ಸರ್ಕಾರದ ಯೋಜನೆಗಳ ಮಾಹಿತಿ ತಿಳಿಯುವುದರ ಜೊತೆಗೆ ಆಡಳಿತದಲ್ಲಿ ಪಾರದರ್ಶಕತೆ ತರಬಹುದಾಗಿದೆ. ಈ ಕಾಯ್ದೆ ಬಂದು 20 ವರ್ಷಗಳಾದರೂ ಬಹಳಷ್ಟು ಅಧಿಕಾರಿಗಳಿಗೆ ಕಾಯ್ದೆ ಅನುಷ್ಠಾನದಲ್ಲಿ ಮಾಹಿತಿ ಕೊರತೆ ಇದೆ. ಹಾಗಾಗಿ ಜಿಲ್ಲಾ ಮತ್ತು ತಾಲ್ಲೂಕು ಹಾಗೂ ಗ್ರಾಮ ಪಂಚಾಯತಿ ಮಟ್ಟದ ಅಧಿಕಾರಿಗಳಿಗೆ ಮಾಹಿತಿ ಹಕ್ಕು ಕಾಯ್ದೆ ಕುರಿತ ಪುಸ್ತಕವನ್ನು ಎಲ್ಲರಿಗೂ ತಲುಪಿಸುವ ಕೆಲಸ ಮಾಡಬೇಕು ಎಂದು ಹೇಳಿದರು.

ಕಲ್ಬುರ್ಗಿ ಪೀಠ ಆರಂಭವಾದ ಬಳಿಕ 16640 ಪ್ರಕರಣ ದಾಖಲಾಗಿ ಇಲ್ಲಿಯವರೆಗೆ 10,423 ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ. ತಾವು ಈ ಕಲಬುರಗಿ ಪೀಠದ ಮಾಹಿತಿ ಆಯುಕ್ತರಾಗಿ ಅಧಿಕಾರ ಸ್ವೀಕರಿಸಿದ 3 ತಿಂಗಳ ಅವಧಿಯಲ್ಲಿ 1,400 ಪ್ರಕರಣಗಳನ್ನು ವಿಚಾರಣೆ ಮಾಡಿ 605 ಪ್ರಕರಣಗಳನ್ನು ವಿಲೇವಾರಿ ಮಾಡಿದ್ದು, 6,655 ಪ್ರಕರಣಗಳು ಇನ್ನೂ ವಿಲೇವಾರಿಗೆ ಬಾಕಿ

3ನೇ ಪುಟಕ್ಕೆ

ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಸಭೆ

ಕೇಂದ್ರ ಪುರಸ್ಕೃತ ಯೋಜನೆಗಳ ಪ್ರಗತಿಗೆ ವೇಗ ನೀಡಿ ಸಂಸದ ಜಿ.ಕುಮಾರ ನಾಯಕ ಕಟ್ಟುನಿಟ್ಟಿನ ನಿರ್ದೇಶನ

ರಾಯಚೂರು ಫೆ.21-

ರೈಲ್ವೆ ಲೈನ್ ನಿರ್ಮಾಣ ಯೋಜನೆ, ಇಂಡಿಯಾ ಪೋಸ್ಟ್, ಬಿಎಸ್‌ಎನ್‌ಎಲ್, ಸರ್ವ ಶಿಕ್ಷಣ ಶಿಕ್ಷಣ ಅಭಿಯಾನ, ಸ್ವಚ್ಛ ಭಾರತ ಮಿಷನ್, ಜಲಜೀವನ ಮಿಷನ್, ಪ್ರಧಾನಮಂತ್ರಿ ಉಜ್ವಲ ಯೋಜನೆ, ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆ, ಸೇರಿದಂತೆ ವಿವಿಧ ಕೇಂದ್ರ, ಪುರಸ್ಕೃತ ಯೋಜನೆಗಳ ಪ್ರಗತಿಗೆ ವೇಗ ನೀಡಬೇಕು ಎಂದು ರಾಯಚೂರು ಲೋಕಸಭಾ ಕ್ಷೇತ್ರದ ಸದಸ್ಯರಾದ ಜಿ. ಕುಮಾರ ನಾಯಕ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ನಗರದ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಫೆ.21ರಂದು ನಡೆದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮೊದಲಿಗೆ ಕೃಷಿ ಇಲಾಖೆಯ ಯೋಜನೆಗಳ ಪ್ರಗತಿಯ ಬಗ್ಗೆ ಸಂಸದರು ಕೇಳಿದರು. ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಭೀಮಾ ಯೋಜನೆಯಡಿ ರಾಯಚೂರು ಜಿಲ್ಲೆಯಲ್ಲಿ 2025ನೇ ಸಾಲಿನ ಮುಂಗಾರಿನಲ್ಲಿ 12,477 ರೈತರು ಮತ್ತು ಹಿಂಗಾರಿನಲ್ಲಿ 6909 ರೈತರು ನೋಂದಣಿ ಮಾಡಿದ್ದಾರೆ. ವಿಮಾ ಸಂಸ್ಥೆಯಿದ ಬೆಳೆವಿಮೆ ಪರಿಹಾರ ಇತ್ಯರ್ಥಪಡಿಸುವ ಕಾರ್ಯ ಪ್ರಗತಿಯಲ್ಲಿದೆ. ರಾಯಚೂರು ಜಿಲ್ಲೆಯಲ್ಲಿ ಒಟ್ಟು 2,34,988 ರೈತರಿಗೆ 736.14 ಕೋಟಿ ರೂ. ಪಿಎಂ ಕಿಸಾನ್ ಯೋಜನೆಯಡಿ ಕೇಂದ್ರ ಸರ್ಕಾರವು ನೆರವು ನೀಡಿದೆ ಎಂದು ಕೃಷಿ ಜಂಟಿ ನಿರ್ದೇಶಕರು ಸಭೆಗೆ ಮಾಹಿತಿ ನೀಡಿದರು. ರಾಯಚೂರು ಫಲವತ್ತಾದ ಮಣ್ಣು ಹೊಂದಿದ ಜಿಲ್ಲೆಯಾಗಿದ್ದು, ರೈತರಿಗೆ ನ್ಯಾಯ ಸಿಗುವ ದಿಶೆಯಲ್ಲಿ ಒಂದು ಜಿಲ್ಲೆ ಒಂದು ಉತ್ಪನ್ನ ಯೋಜನೆಯ ಅನುಷ್ಠಾನಕ್ಕೆ ಹೆಚ್ಚಿನ ಒತ್ತು ಕೊಡಬೇಕು ಎಂದು ಸಂಸದರು ಕೃಷಿ ಅಧಿಕಾರಿಗಳಿಗೆ ಸೂಚನೆ ನೀಡಿದರು. ಒಂದು ಜಿಲ್ಲೆ ಒಂದು ಉತ್ಪನ್ನ ಯೋಜನೆಯಡಿ ರಾಯಚೂರು ಜಿಲ್ಲೆಯಲ್ಲಿ ಒಣಮೆಣಸಿನಕಾಯಿ ಮಾರುಕಟ್ಟೆ ನಿರ್ಮಾಣಕ್ಕಾಗಿ ಆಯ್ಕೆ ಮಾಡಲಾಗಿರುತ್ತದೆ ಎಂದು ಕೃಷಿ ಅಧಿಕಾರಿಗಳು ಸಭೆಗೆ ವಿವರಿಸಿದರು.

ರಾಯಚೂರು ಜಿಲ್ಲೆಯಲ್ಲಿ ರೈಲ್ವಿ ಲೈನ್ ನಿರ್ಮಾಣ ಯೋಜನೆಯ ಪ್ರಗತಿಯ ಬಗ್ಗೆ ಸಂಸದರು ಕೇಳಿದರು. ಮುನಿರಾಬಾದ್-ಮೆಹಬೂಬನಗರ ರೈಲ್ವೆ ಲೈನ್ ನಿರ್ಮಾಣದ ಭೂಸ್ವಾಧೀನಕ್ಕೆ ಸಂಬಧಿಸಿದತೆ ಸಿಂಧನೂರ, ರಾಯಚೂರು, ಮಾನವಿ, ಸಿರವಾರ ತಾಲೂಕಿನ ಕೆಲವು ಹಳ್ಳಿಗಳಲ್ಲಿ ನಡೆದ ಭೂಸ್ವಾಧೀನ ಪ್ರದೇಶದ ವಿಸ್ತೀರ್ಣವನ್ನು ರೈಲ್ವೆ ಇಲಾಖೆಗೆ ಹಸ್ತಾಂತರಿಸಲಾಗಿದೆ. ಕೆಲವು ಕಡೆಗಳಲ್ಲಿ ಹೊಸದಾಗಿ ಪ್ರಸ್ತಾವನೆ ಸಲ್ಲಿಸಿದ್ದು ಭೂಸ್ವಾಧೀನ ಪ್ರಕ್ರಿಯೆಗೆ ಕ್ರಮ ವಹಿಸಲಾಗುತ್ತದೆ. ಗದಗ-ವಾಡಿ ರೈಲ್ವೆ ಯೋಜನೆಗೆ ಸಂಬಧಿಸಿದತೆ ರಾಯಚೂರು ತಾಲೂಕಿನ ಕುರುಬದೊಡ್ಡಿ, ಚಂದ್ರಬಡ, ಸಿಂಗನೋಡಿ ಗ್ರಾಮಗಳಲ್ಲಿ ಹೊಸದಾಗಿ ಕೈಗಾರಿಕಾ ಪ್ರದೇಶ ಮತ್ತು ಸೌರ ವಿದ್ಯುತ್ ಸ್ಥಾಪನೆಗಾಗಿ ಭೂಸ್ವಾಧಿನಪಡಿಸಿಕೊಳ್ಳುವ ಪ್ರಕ್ರಿಯೆ ನಡೆಯುತ್ತಿದೆ ಎಂದು ಎಂದು ರೈಲ್ವೆ ಇಲಾಖೆಯ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಬೆಂಗಳೂರು, ಕಲಬುರಗಿ, ಸೊಲ್ಲಪುರ ಸೇರಿದಂತೆ ಪ್ರಮುಖ ವಾಣಿಜ್ಯ ನಗರಗಳ ಮೂಲಕ ದಕ್ಷಿಣದ ಚೆನ್ನೈದಿಂದ ಉತ್ತರದ ಹೊಸದಿಲ್ಲಿವರೆಗೆ ಪ್ರಮುಖ ರೈಲುಗಳು ರಾಯಚೂರು ಮಾರ್ಗವಾಗಿಯೇ ಸಂಚರಿಸುತ್ತವೆ. ಇದು ನಮ್ಮ ಭಾಗ್ಯ. ಈ ರೈಲ್ವೆ ಲೈನದಲ್ಲಿ ಪ್ರತಿ ದಿನ ಸಾಕಷ್ಟು ಗೂಡ್ಸ್ ರೈಲುಗಳು ಸಂಚರಿಸುತ್ತವೆ. ಕೃಷಿ, ತೋಟಗಾರಿಕೆ, ವಾಣಿಜ್ಯ ಉತ್ಪನ್ನಗಳ ಸರಬರಾಜಿಗೆ ಇದು ಸಾಕಷ್ಟು ಅನುಕೂಲವಾಗಲಿದೆ. ಹಾಗಾಗಿ ರೈಲ್ವೆ ಇಲಾಖೆಗೆ ಸಂಬಧಿಸಿದ ಯಾವುದೇ ಕಾರ್ಯಗಳ ಪ್ರಗತಿಗೆ ಒತ್ತು ಕೊಡಬೇಕು ಎಂದು ಸಂಸದರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ರೈಲ್ವೆ ಯೋಜನೆಗಳ ಅನುಷ್ಠಾನಕ್ಕೆ ಭೂಮಿ ಒದಗಿಸುವ ರೈತರಿಗೆ ಭೂ ಪರಿಹಾರ ಪಾವತಿಯು ಕಾಲಮಿತಿಯೊಳಗೆ ಆಗಬೇಕು. ರೈತರಿಗೆ ನ್ಯಾಯ ಸಿಗುವಂತಾಗಬೇಕು. ಇದಕ್ಕೆ ಅಧಿಕಾರಿಗಳು ಹೆಚ್ಚಿನ ಒತ್ತು ಕೊಡಬೇಕು. ಸಭೆಯಲ್ಲಿ ವರದಿ ಒಪ್ಪಿಸುವುದಷ್ಟೇ ಅಧಿಕಾರಿಗಳ ಕೆಲಸವಲ್ಲ, ಕಾಳಜಿ ಮತ್ತು ಶ್ರದ್ದೆಯಿಂದ ಕಾರ್ಯನಿರ್ವಹಿಸಬೇಕು ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಅಧಿಕಾರಿಗಳಿಗೆ ಇದೆ ವೇಳೆ ಸೂಚನೆ ನೀಡಿದರು.

ಪಿಎಂಶ್ರೀ ಶಾಲೆಗಳಿಗೆ ಮಂಜೂರಾಗಿರುವ ಕಾಮಗಾರಿಗಳ ಬಗ್ಗೆ ಸಂಸದರು ಪರಿಶೀಲಿಸಿದರು. 2024-25ನೇ ಸಾಲಿಗೆ ಪಿಎಂಶ್ರೀ ಶಾಲೆಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಕೋಟಿ ಗೂ ಹೆಚ್ಚು ಅನುದಾನ ಮಂಜೂರಾಗಿದ್ದು, ಪಿಆರ್‌ಇಡಿ, ಲೋಕೋಪಯೋಗಿ ಇಲಾಖೆಗಳಿಂದ ಕೊಠಡಿಗಳ ನಿರ್ಮಾಣ ಕಾರ್ಯ ನಡೆಯುತ್ತಿದೆ. ಅದೇ ರೀತಿ 2025-26ನೇ ಸಾಲಿನಲ್ಲಿ 115 ಲಕ್ಷ ರೂ ವೆಚ್ಚದಲ್ಲಿ 4 ಶಾಲೆಗಳಲ್ಲಿ ಕೊಠಡಿಗಳ ನಿರ್ಮಾಣ ಕಾರ್ಯ ನಡೆಯುತ್ತಿದೆ. 2025-26ನೇ ಸಾಲಿನಲ್ಲಿ ಕೇಂದ್ರ ಅನುಮೋದನೆ ಮಂಡಳಿಯಿದ ಧರ್ತಿ ಅಬಾ ಜನ್ ಜಾತಿಯ ಗ್ರಾಮ ಉತ್ಕರ್ಷ ಅಭಿಯಾನ ಯೋಜನೆಯಡಿ ವಸತಿ ನಿಲಯಗಳ ನಿರ್ಮಾಣಕ್ಕೆ 23 ಕೋಟಿ ರೂ ಮಂಜೂರಾಗಿದೆ. 2025-26ನೇ ಸಾಲಿನಲ್ಲಿ ಕೆಕೆರ್‌ಡಿಬಿಯಿಂದ 35 ಕೆಪಿಎಸ್ ಶಾಲೆಗಳು ಮಂಜೂರಾಗಿವೆ. ಸಮಗ್ರ ಶಿಕ್ಷಣ ಕರ್ನಾಟಕದಿಂದ 2023-24ನೇ ಸಾಲಿನಲ್ಲಿ ಮಂಜೂರಾದ ಪೂರ್ವ ಪ್ರಾಥಮಿಕ ತರಗತಿಗಳನ್ನು 2024-25ನೇ ಸಾಲಿನಲ್ಲಿ 4 ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ತರಗತಿಗಳನ್ನು ಆರಂಭಿಸಲಾಗಿದೆ ಎಂದು ಶಾಲಾ ಶಿಕ್ಷಣ ಇಲಾಖೆಯ ಅಧಿಕಾರಿ ಕೆ.ಡಿ.ಬಡಿಗೇರ ಅವರು ಸಭೆಗೆ ಮಾಹಿತಿ ನೀಡಿದರು.

3ನೇ ಪುಟಕ್ಕೆ

ಮತದಾರರ ಪಟ್ಟಿಗಳ ಸಮಗ್ರ ಪರಿಷ್ಕರಣೆ ಕಾರ್ಯದ ಸಿದ್ದತೆ: ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಸಭೆ

ರಾಜಕೀಯ ಪಕ್ಷಗಳು ಬಿಎಲ್.ಎ.ಗಳನ್ನು ನೇಮಕ ಮಾಡಿ - ಡಾ. ಸುರೇಶ ಬಿ. ಇಟ್ನಾಳ

ಕೊಪ್ಪಳ ಫೆ.21-

ಎಸ್.ಐ.ಆರ್ ಹಿನ್ನೆಲೆಯಲ್ಲಿ ಮತದಾರರ ಪಟ್ಟಿಗಳ ಸಮಗ್ರ ಪರಿಷ್ಕರಣೆಯ ಸಿದ್ದತೆಗಾಗಿ ಜಿಲ್ಲೆಯಲ್ಲಿ ಮ್ಯಾಪಿಂಗ್ ಕಾರ್ಯ ನಡೆಯುತ್ತಿದ್ದು, ರಾಜಕೀಯ ಪಕ್ಷಗಳು ಬಿಎಲ್.ಎ.ಗಳನ್ನು ನೇಮಕ ಮಾಡಬೇಕೆಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಶುಕ್ರವಾರ ಕೊಪ್ಪಳ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮತದಾರರ ಪಟ್ಟಿಗಳ ಸಮಗ್ರ ಪರಿಷ್ಕರಣೆ ಕಾರ್ಯದ ಪೂರ್ವಭಾವಿ ಸಿದ್ದತೆಯ ಕುರಿತು ರಾಜಕೀಯ ಪಕ್ಷಗಳ ಪ್ರತಿನಿಧಿಗಳೊಂದಿಗೆ ಕರೆದ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದರು.

ಎಪ್ರೀಲ್-2026 ರಿಂದ ಎಸ್.ಐ.ಆರ್ ಜಾರಿಯಾಗುವ ಸಾಧ್ಯತೆಯಿದ್ದು, ಅದಕ್ಕೂ ಪೂರ್ವದಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಮ್ಯಾಂಪಿಂಗ್ ಕಾರ್ಯವನ್ನು ಮಾಡುತ್ತಿದ್ದೇವೆ. ಮ್ಯಾಪಿಂಗ್ ಪ್ರೋಜೆನಿ ಆಫ್ ಎಲೆಕ್ಟರ್ಸ್ ಆಧಾರದಮೇಲೆ ಪ್ರಕಟಿಸಲಾದ ಮತದಾರರ ಪಟ್ಟಿಗಳಲ್ಲಿಯ ಮತದಾರರನ್ನು 2002ರ ಮಾತದಾರರ ಪಟ್ಟಗಳೊಂದಿಗೆ ಪರಿಶೀಲಿಸಿ, ಬಿ.ಎಲ್.ಓ ???ಪ್‌ನಲ್ಲಿ ಮ್ಯಾಪಿಂಗ್ ಕಾರ್ಯವನ್ನು ಮತ್ತು 2002ರ ಮತದಾರರ ಪಟ್ಟಿಯಲ್ಲಿ ಇರದೇ ಇರುವ ಮತದಾರರನ್ನು ಪ್ರೋಜೆನಿ ಮಾಡುವ ಮುಖಾಂತರ ಮ್ಯಾಪಿಂಗ್ ಕಾರ್ಯವನ್ನು ಕೈಗೊಳ್ಳಲಾಗುತ್ತಿದೆ ಎಂದರು.

2025ರಂತೆ ಕೊಪ್ಪಳ ಜಿಲ್ಲೆಯಲ್ಲಿ 12,06,287 ಮತದಾರರಿದ್ದು, 1315 ಮತಗಟ್ಟೆಗಳಿವೆ. ಜಿಲ್ಲೆಯಲ್ಲಿ ಇದುವರೆಗೂ ಶೇ. 86.79 ರಷ್ಟು ಮ್ಯಾಪಿಂಗ್ ಆಗಿದ್ದು, ಇದರಲ್ಲಿ ಶೇ. 77ರಷ್ಟು ಜನರು 2002ರ ಮತದಾರರ ಪಟ್ಟಿಯಲ್ಲಿ ಹೆಸರಿರುವ ಅರ್ಹ ಮತದಾರರಾಗಿದ್ದಾರೆ ಮತ್ತು ಉಳಿದವರು ಆ ಅರ್ಹ ಮತದಾರರ ಪ್ರಸ್ತುತ 18 ವರ್ಷ ಪೂರ್ಣಗೊಂಡ ಮಕ್ಕಳು ಒಳಗೊಂಡಿದ್ದಾರೆ. ಒಟ್ಟಾರೆ 10,46,968 ಮತದಾರರ ಮ್ಯಾಪಿಂಗ್ ಮಾಡಲಾಗಿದ್ದು, 1,59,319 ಮತದಾರರ ಮ್ಯಾಪಿಂಗ್ ಬಾಕಿಯಿದೆ. ಇದರಲ್ಲಿ ಕುಷ್ಟಗಿ ವಿಧಾನಸಭಾ ಕ್ಷೇತ್ರದ 35,562 ಮತದಾರರ, ಕನಕಗಿರಿ ವಿಧಾನಸಭಾ ಕ್ಷೇತ್ರದ 26,741 ಮತದಾರರ, ಗಂಗಾವತಿ ವಿಧಾನಸಭಾ ಕ್ಷೇತ್ರದ 36,946 ಮತದಾರರ, ಯಲಬುರ್ಗಾ ವಿಧಾನಸಭಾ ಕ್ಷೇತ್ರದ 24,532 ಮತದಾರರ ಮತ್ತು ಕೊಪ್ಪಳ ವಿಧಾನಸಭಾ ಕ್ಷೇತ್ರದ 35,538 ಮತದಾರರ ಮ್ಯಾಪಿಂಗ್ ಬಾಕಿ ಇರುತ್ತದೆ ಎಂದು ಹೇಳಿದರು.

ರಾಜ್ಯದಲ್ಲಿ ಎಸ್‌ಐಆರ್ ಪೂರ್ವ ತಯಾರಿ ಆರಂಭವಾಗಿ ಅಕ್ಟೋಬರ್-2025 ರಿಂದ ಸಾಕಷ್ಟು ಸಮಯ ಕಳೆದಿದೆ. ರಾಜ್ಯ ಮಟ್ಟದಿಂದ



ಬಿಎಲ್‌ಓ ಮಟ್ಟದವರೆಗೆ ಎಲ್ಲಾ ಅಧಿಕಾರಿಗಳಿಗೆ ಮ್ಯಾಪಿಂಗ್ ಮತ್ತು ಅವರ ಜವಾಬ್ದಾರಿಗಳ ಕುರಿತು ತರಬೇತಿ ನೀಡಲಾಗಿದೆ. ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ರಾಜಕೀಯ ಪಕ್ಷಗಳ ಸಭೆ ನಡೆಸಿ, ಪ್ರಕ್ರಿಯೆಯ ಪಾರದರ್ಶಕತೆ ಬಗ್ಗೆ ಮಾಹಿತಿ ನೀಡಲಾಗಿದೆ. ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಕ್ರಮವಹಿಸಲಾಗಿರುತ್ತದೆ. ಇನ್ನು ಎಸ್‌ಐಆರ್ ಪೂರ್ವ ಪ್ರಕ್ರಿಯೆ ಭಾಗವಾಗಿ ಮೂರು ಹಂತದ ಮ್ಯಾಪಿಂಗ್ ನಡೆಯುತ್ತದೆ. 2002ರ ಪಟ್ಟಿಯಲ್ಲಿ ಹೆಸರು ಹೊಂದಿರುವ ಮತ್ತು ಪ್ರಸ್ತುತ 40 ವರ್ಷಕ್ಕಿಂತ ಹೆಚ್ಚು ವಯಸ್ಸಿನ ಮತದಾರರನ್ನು ಬಿಎಲ್‌ಒಗಳು ಮನೆಮನೆಗೆ ಭೇಟಿ ನೀಡಿ ಪರಿಶೀಲಿಸಿದ ನಂತರ ಮೊಬೈಲ್ ಅಪ್ಲಿಕೇಷನ್ ಮೂಲಕ ದೃಢೀಕರಿಸಿ ಮ್ಯಾಪಿಂಗ್ ಮಾಡುತ್ತಿದ್ದಾರೆ ಎಂದರು.

2002ರ ಪಟ್ಟಿಯಲ್ಲಿ ಹೆಸರು ಇರದೇ ಇರುವ ಯುವ ಮತದಾರರನ್ನು ಅವರ ವಂಶಸ್ಥರೊಂದಿಗೆ (ತಂದೆ, ತಾಯಿ, ತಾತ ಅಥವಾ ಅಜ್ಜಿ) ಮ್ಯಾಪಿಂಗ್ ಮಾಡಲಾಗುತ್ತಿದೆ. ಇದು ಮಗ, ಮಗಳು, ಮೊಮ್ಮಗ ಹಾಗೂ ಮೊಮ್ಮಗಳಿಗೆ (ತೃತಿಯ ಲಿಂಗಿಗಳು ಸೇರಿದಂತೆ) ಅನ್ವಯಿಸುತ್ತದೆ. 2002 ರ ಅವಧಿಯಲ್ಲಿ ಕರ್ನಾಟಕದ ಪಟ್ಟಿಯಲ್ಲಿ ಇಲ್ಲದೆ, ಬೇರೆ ರಾಜ್ಯ ಅಥವಾ ಕೇಂದ್ರಾಡಳಿತ ಪ್ರದೇಶದ ಪಟ್ಟಿಯಲ್ಲಿ ಹೆಸರಿದ್ದ ಮತದಾರರಿಗೂ ಮ್ಯಾಪಿಂಗ್ ಮಾಡಲು ಬಿಎಲ್‌ಓ ಆಪ್‌ನಲ್ಲಿ ಅವಕಾಶ ನೀಡಲಾಗಿದೆ. ಮಾನ್ಯತೆ ಪಡೆದ ರಾಷ್ಟ್ರ, ರಾಜ್ಯ ರಾಜಕೀಯ ಪಕ್ಷದವರು ಬಿಎಲ್‌ಎ-1ರ ಮುಖಾಂತರ ಬಿಎಲ್‌ಎಗಳನ್ನು ನೇಮಕ ಮಾಡಲು ಪ್ರತಿ ಜಿಲ್ಲೆಗೆ, ವಿಧಾನಸಭಾ ಕ್ಷೇತ್ರಕ್ಕೆ ಅಧಿಕೃತ ಪ್ರತಿನಿಧಿಗಳನ್ನು ನೇಮಕ ಮಾಡಬಹುದಾಗಿರುತ್ತದೆ. ಬಿಎಲ್‌ಎ-1 ರವರ ಮುಖಾಂತರ ರಾಜಕೀಯ ಪ್ರತಿನಿಧಿಗಳು ಪ್ರತಿ ಮತಗಟ್ಟೆಗೆ ಬಿಎಲ್‌ಎ-2 ಮುಖಾಂತರ ಬಿಎಲ್‌ಎಗಳನ್ನು ನೇಮಕ ಮಾಡಬಹುದಾಗಿದೆ ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು ಮಾತನಾಡಿ, ಸಾಮಾನ್ಯವಾಗಿ ಒಂದು ಮತಗಟ್ಟೆಗೆ ಒಬ್ಬ ಬಿಎಲ್‌ಎ ರವರನ್ನು ನೇಮಕ ಮಾಡಬೇಕಾಗಿರುತ್ತದೆ. ಒಂದಕ್ಕಿಂತ ಹೆಚ್ಚು ಬೂತ್‌ಗಳಿಗೆ ಒಬ್ಬ ಬಿಎಲ್‌ಎರವನ್ನು ನೇಮಕ ಮಾಡಬೇಕಾದಲ್ಲಿ ಈ ಬೂತ್‌ಗಳು ಒಂದೇ ಮತಗಟ್ಟೆಯ (ಅಟಣಣಜಡಿ ಃಠಣಃ ತಿಣಃ ಠಟಜ ಟಠಭಿಚಿಣಠಟ) ವ್ಯಾಪ್ತಿಯೊಳಗೆ ಒಳಪಡಬೇಕಾಗಿರುತ್ತದೆ. ಮತಗಟ್ಟೆಗಳು ನೇಮುಗೊಂಡ ಬಿಎಲ್‌ಎ ರವರು ಸಾಮಾನ್ಯವಾಗಿ ಆ ಮತಗಟ್ಟೆಯ ಮತದಾರರಾಗಿರಬೇಕಾಗಿರುತ್ತದೆ. ಆ ಮತಗಟ್ಟೆಯಲ್ಲಿ ನೋಂದಣಿಯಾಗದೇ ಇರುವ ಬಿಎಲ್‌ಎಗಳು ಲಭ್ಯವಿಲ್ಲದ ಸಂದರ್ಭದಲ್ಲಿ ಆ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ನೋಂದಾಯಿತ ಮತದಾರರನ್ನು ಬಿಎಲ್‌ಎ ಎಂದು ನೇಮಕ ಮಾಡಬಹುದಾಗಿರುತ್ತದೆ ಎಂದರು.

2002 ರಲ್ಲಿಯ ಮತದಾರರ ಪಟ್ಟಿಯಲ್ಲಿರುವ ಮತದಾರರ ನಮೂದುಗಳನ್ನು ಪರಿಶೀಲಿಸಲು https://ceo.karnataka.gov.in/search/kn ಹಾಗೂ https://voters.eci.gov.in/searchInSIR/S2UA4DPDF-JK4QWODSE ನಲ್ಲಿ ಅವಕಾಶವನ್ನು ಕಲ್ಪಿಸಲಾಗಿರುತ್ತದೆ. ಕೊಪ್ಪಳ ಜಿಲ್ಲೆಯ 5 ವಿಧಾನಸಭಾ ಕ್ಷೇತ್ರಗಳಿಗೆ ಸಂಬಂಧಿಸಿದಂತೆ ನೇಮಕ ಮಾಡಲಾಗಿರುವ ಬೂತ್ ಮಟ್ಟದ ಅಧಿಕಾರಿಗಳ ವಿವರಗಳನ್ನು https://ceo.karnataka.gov.in/113/gallery/en ರ ಮೂಲಕ ಹಾಗೂ ECI NET App ಮೂಲಕ ಪಡೆಯಬಹುದಾಗಿರುತ್ತದೆ. ಪ್ರಸ್ತುತ ಇರುವ ಮತದಾರರ ಪಟ್ಟಿಗಳಲ್ಲಿ ಭಾವಚಿತ್ರವು ಸರಿಯಾಗಿ ಮುದ್ರಣವಾಗದಿದ್ದಲ್ಲಿ ಮತ್ತು ಇತರೆ ನಮೂದುಗಳು ಸರಿಯಾಗಿ ಇರದೇ ಇದ್ದಲ್ಲಿ ಸೂಕ್ತ ಭಾವಚಿತ್ರದೊಂದಿಗೆ ನಮೂನೆ 8 ಹಾಗೂ ಇತರೆ ದೋಷಗಳಿದ್ದಲ್ಲಿ ಸೂಕ್ತ ದಾಖಲೆಗಳನ್ನು ಸರಿಪಡಿಸಿಕೊಳ್ಳುವ ಪ್ರಕ್ರಿಯೆಯು ಜಾರಿಯಲ್ಲಿದ್ದು, ಈ ಕುರಿತು ರಾಜಕೀಯ ಪಕ್ಷಗಳು ಗಮನ ಹರಿಸುವುದು ಅತ್ಯವಶ್ಯಕವಾಗಿದೆ ಎಂದು ಹೇಳಿದರು.

ಸಭೆಯಲ್ಲಿ ಕೊಪ್ಪಳ ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ್ ಮಾಲಗಿತ್ತಿ, ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಟಿ.ಕೃಷ್ಣಮೂರ್ತಿ, ಆಹಾರ ಇಲಾಖೆ ಉಪನಿರ್ದೇಶಕ ಸೂರ್ಯಕುಮಾರ, ಜಿಲ್ಲಾ ಚುನಾವಣಾ ಶಾಖೆಯ ತಹಶಿಲ್ದಾರ ರವಿಕುಮಾರ ವಸ್ತ್ರದ್, ಶಿರಸ್ತೆದಾರ ನಾಗರಾಜ್, ರಾಜಕೀಯ ಪಕ್ಷಗಳ ಪ್ರತಿನಿಧಿಗಳಾದ ಕೃಷ್ಣ ಇಟ್ಟಂಗಿ, ಸೋಮನಗೌಡ, ಕೃಷ್ಣ ಶೆಟ್ಟರ್, ಸೈಯದ್ ನಾಸೀರ ಹುಸೈನಿ, ಅಮರೇಶ್ ಮುರಳಿ, ಮೈಲಾರಪ್ಪ ಹಾಗೂ ಮತ್ತಿತರರು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

ಸಂತ ಕವಿ ಸರ್ವಜ್ಞ ಜಯಂತಿ: ಜಿಲ್ಲಾಡಳಿತದಿಂದ ಪುಷ್ಪನಮನ ಸಲ್ಲಿಕೆ



ಕೊಪ್ಪಳ ಫೆ.21-

ಕೊಪ್ಪಳ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಸಂತ ಕವಿ ಸರ್ವಜ್ಞ ಜಯಂತಿಯನ್ನು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಸರಳವಾಗಿ ಆಚರಿಸಲಾಯಿತು.

ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ ಅವರು ಸಂತ ಕವಿ ಸರ್ವಜ್ಞ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸುವ ಮೂಲಕ ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ ನಿರ್ಮಲಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕರ್ಣಕುಮಾರ ಸೇರಿದಂತೆ ಜಿಲ್ಲಾಡಳಿತ ಭವನದ ಇತರೆ ವಿವಿಧ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಸಂತಕವಿ ಸರ್ವಜ್ಞ ಜಯಂತಿ ಆಚರಣೆ



ಬೀದರ, ಫೆ.21-

ಸಂತಕವಿ ಸರ್ವಜ್ಞ ಜಯಂತಿ ಅಂಗವಾಗಿ ಜಿಲ್ಲಾಧಿಕಾರಿಗಳ ಕಾರ್ಯಾಲಯದಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಬಿ.ಕರಾಳೆ ಅವರಿಂದು ಸಂತಕವಿ ಸರ್ವಜ್ಞ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಸಮಾಜದ ಮುಖಂಡರು ಸೇರಿದಂತೆ ಇತರರು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳ ಪ್ರತಿಭೆ ಗುರುತಿಸಿ ಪ್ರೋತ್ಸಾಹಿಸಿ - ಬಸವರಾಜ ಹೂಗಾರ್

ಕಲಬುರಗಿ,ಫೆ.21-

ವಿದ್ಯಾರ್ಥಿಗಳು ಕೇವಲ ಅಂಕಗಳ ಬೆನ್ನತ್ತದೆ, ತಮ್ಮಲ್ಲಿರುವ ಸುಪ್ತ ಕಲಾ ಪ್ರತಿಭೆಯನ್ನು ಬೆಳೆಸಿಕೊಳ್ಳಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕಲಬುರಗಿ ವಲಯ ಜಂಟಿ ನಿರ್ದೇಶಕ ಬಸವರಾಜ ಹೂಗಾರ್ ಅವರು ಹೇಳಿದರು.

ನಗರದಲ್ಲಿ ಶುಕ್ರವಾರ ಎಸ್.ಎಂ. ಪಂಡಿತ್ ರಂಗಮಂದಿರದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ವಿಶೇಷ ಘಟಕ ಯೋಜನೆಯಡಿ ಕಲಿಕಾ ತರಬೇತಿ ಪಡೆದ ಡಾ. ಬಿ.ಆರ್ ಅಂಬೇಡ್ಕರ್ ಸರಕಾರಿ ಮೆಟ್ರಿಕ್ ನಂತರ ಬಾಲಕರ ವಸತಿ ನಿಲಯ ವಿದ್ಯಾರ್ಥಿನಿಯರಿಂದ ಸುಗಮ ಸಂಗೀತ ಗಾಯಕ ಕಾರ್ಯಕ್ರಮ ಹಾಗೂ ಗಿರಿಜನ ಉಪಯೋಜನೆಯಡಿ ಕಲಿಕಾ ತರಬೇತಿ ಪಡೆದ ಸರಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯದ ವಿದ್ಯಾರ್ಥಿನಿಯರಿಂದ ಜಾನಪದ ಗಾಯನ ಕಾರ್ಯಕ್ರಮ ಉದ್ಘಟಿಸಿ ಮಾತನಾಡಿದರು.

ಇತ್ತೀಚಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಪೋಷಕರು ಮತ್ತು



ಶಿಕ್ಷಣ ವ್ಯವಸ್ಥೆ ಮಕ್ಕಳನ್ನು ಕೇವಲ ಅಂಕಗಳಿಗಾಗಿ ಒತ್ತಡಕ್ಕೆ ಸಿಲುಕಿಸುತ್ತಿದೆ. ಇತ್ತೀಚೆಗೆ ಜೆ.ಇ.ಇ ಪರೀಕ್ಷೆಯಲ್ಲಿ 300ಕ್ಕೆ 300 ಅಂಕ ಪಡೆದ ವಿದ್ಯಾರ್ಥಿಯೊಬ್ಬನ ಉದಾಹರಣೆ ನೀಡಿದ ಅವರು, ಅಪಾರ ಅಂಕ ಗಳಿಸಿದರೂ ಸಂಭ್ರಮಿಸಲು ತಿಳಿಯದಷ್ಟು ಯಾಂತ್ರಿಕವಾಗುತ್ತಿರುವ ಬದುಕು ಆತಂಕಕಾರಿ ಎಂದು ಕಳವಳ ವ್ಯಕ್ತಪಡಿಸಿದರು.

ಬದುಕಿನಲ್ಲಿ ಎಷ್ಟೇ ಒತ್ತಡಗಳಿದ್ದರೂ ಅದನ್ನು ಎದುರಿಸುವ ಶಕ್ತಿಯನ್ನು ಸಂಗೀತ ಮತ್ತು ಕಲೆ ನೀಡುತ್ತದೆ. ಕಲೆ ಇಲ್ಲದ ಮನುಷ್ಯನ ಬದುಕು ಬರಡಾಗುತ್ತದೆ. ಸಂಗೀತಗಾರ ಅಥವಾ ಕಲಾವಿದ ಸಮಾಜವನ್ನು ನೋಡುವ ದೃಷ್ಟಿಕೋನವೇ ಭಿನ್ನವಾಗಿರುತ್ತದೆ. ಶಿಬಿರದಲ್ಲಿ ಕಲಿತದ್ದನ್ನು ಇಲ್ಲಿಗೇ ಬಿಡದೆ ಪ್ರತಿದಿನ ಅಭ್ಯಾಸ ಮಾಡಿ ಬೆಳೆಸಿಕೊಳ್ಳಬೇಕು ಎಂದು ಅವರು ವಿದ್ಯಾರ್ಥಿಗಳಿಗೆ ತಿಳಿಸಿದರು.

ಡಾ. ಬಿಆರ್ ಅಂಬೇಡ್ಕರ್ ಸರಕಾರಿ ಮೆಟ್ರಿಕ ನಂತರದ ಬಾಲಕಿಯರ ವಸತಿ ನಿಲಯ ಪಾಲಕಿ ಸಂಗೀತ ಜಿ. ಅಕ್ಕಾ ಅವರು ಮಾತನಾಡಿ ಸಂಗೀತ ತರಬೇತಿ ಪಡೆದ ವಿದ್ಯಾರ್ಥಿನಿಯರು ಮುಂಬರುವ ದಿನಗಳಲ್ಲಿ ಯಾವುದೇ ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ಸಿದ್ಧರಿದ್ದಾರೆ. ವಿದ್ಯಾರ್ಥಿನಿಯರ ಸುಪ್ತ ಪ್ರತಿಭೆಗೆ ಸೂಕ್ತ ವೇದಿಕೆ ಕಲ್ಪಿಸಿಕೊಡುವ ಭರವಸೆಯನ್ನು ನೀಡಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ಜಗದೀಶ್ವರಿ ಅ. ನಾಸಿ, ಸರಕಾರಿ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯ ಪಾಲಕ ಸೈದಾ ಬಾಗವನ್, ಸಿದ್ದಾರ್ಥ್ ಚಿಮ್ಮುಯಿದ್ಲಾಯಿ, ಯಲ್ಲಾಲಿಂಗ ಡಾಂಗೆ ಉಪಸ್ಥಿತರಿದ್ದರು.

ಬಳ್ಳಾರಿ: ಸಂಗನಕಲ್ಲಿನ ಗುಡ್ಡಕ್ಕೆ ಜಿಲ್ಲಾಧಿಕಾರಿ ಚಾರಣ

ಪ್ರವಾಸೋದ್ಯಮ ಅಭಿವೃದ್ಧಿಗೆ ಒತ್ತು: ಡಿಸಿ ನಾಗೇಂದ್ರ ಪ್ರಸಾದ್.ಕೆ

ಬಳ್ಳಾರಿ,ಫೆ.21-

ಜಿಲ್ಲೆಯ ಐತಿಹಾಸಿಕ ಹಾಗೂ ಸಾಂಪ್ರದಾಯಿಕ ಮಹತ್ವ ಹೊಂದಿರುವ ಪ್ರಸಿದ್ಧ ಪ್ರವಾಸಿ ತಾಣವಾದ ಸಂಗನಕಲ್ಲಿನ ಹೀರೆಗುಡ್ಡಕ್ಕೆ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಗುರುವಾರ ಮುಂಜಾನೆ ಚಾರಣ ಮಾಡಿ, ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಸಂಗನಕಲ್ಲು ಬಳ್ಳಾರಿ ಜಿಲ್ಲೆಯ ಅತ್ಯಂತ ಪ್ರಮುಖ ಐತಿಹಾಸಿಕ ತಾಣಗಳಲ್ಲಿ ಒಂದಾಗಿದ್ದು, ಸಾವಿರಾರು ವರ್ಷಗಳಿಗೂ ಹೆಚ್ಚು ಹಿಂದೆ ಈ ಕಲ್ಲಿನ ಬೆಟ್ಟಗಳಲ್ಲಿ ವಾಸಿಸುತ್ತಿದ್ದ ನವಶಿಲಾಯುಗದ ಮಾನವರ ಜೀವನದ ಅಪೂರ್ವ ನೋಟಗಳನ್ನು ನೀಡುತ್ತದೆ. ಇದರ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲಾಗುವುದು ಎಂದು ಹೇಳಿದರು.

ಹಿರೇಗುಡ್ಡದ ಮೇಲ್ಭಾಗದಲ್ಲಿರುವ ಅಪರೂಪದ ಶಿಲಾ ಕೆತ್ತನೆಗಳು ಮತ್ತು ರೇಖಾಚಿತ್ರಗಳನ್ನು ವೀಕ್ಷಿಸಲಾಗಿದೆ. ಇವುಗಳು ನವಶಿಲಾಯುಗದ ಕಾಲಕ್ಕೆ ಸೇರಿವೆ ಎಂದು ಗುರುತಿಸಲಾಗಿದ್ದು, ಇವುಗಳ ಐತಿಹಾಸಿಕ ಪ್ರಾಮುಖ್ಯತೆಯನ್ನು ಕಾಪಾಡುವುದು ಪ್ರಮುಖ ಆದ್ಯತೆಯಾಗಿದೆ ಎಂದರು.

ಈ ತಾಣವನ್ನು ಪ್ರವಾಸಿ ಸ್ನೇಹಿಯಾಗಿಸಲು ಮತ್ತು ಇಲ್ಲಿನ ಐತಿಹಾಸಿಕ ಪರಂಪರೆಯನ್ನು ಸಂರಕ್ಷಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ ಚರ್ಚಿಸಲಾಗುವುದು ಎಂದು



ತಿಳಿಸಿದ ಜಿಲ್ಲಾಧಿಕಾರಿಯವರು, ಇಲ್ಲಿ ನಡೆದಿರುವ ವೈಜ್ಞಾನಿಕ ಸಂಶೋಧನೆಗಳು ನಮ್ಮ ಪೂರ್ವಜರ ಜೀವನಶೈಲಿ ಮತ್ತು ಇತಿಹಾಸದ ಮೇಲೆ ಬೆಳಕು ಚೆಲ್ಲುವಲ್ಲಿ ಪ್ರಮುಖ ಪಾತ್ರ ವಹಿಸಿವೆ ಎಂದು ಅಭಿಪ್ರಾಯಪಟ್ಟರು.

ಜಿಲ್ಲಾಡಳಿತದಿಂದ ಈ ಭೇಟಿಯು ಸಂಗನಕಲ್ಲು ಪ್ರದೇಶವು ಮುಂದಿನ ದಿನಗಳಲ್ಲಿ ಪ್ರಮುಖ ಪ್ರವಾಸಿ ಕೇಂದ್ರವಾಗಿ ಹೊರಹೊಮ್ಮಲು ಸಹಕಾರಿಯಾಗಲಿದೆ ಎಂಬ ನಿರೀಕ್ಷೆಯಿದೆ ಎಂದರು.

ಅಭಿವೃದ್ಧಿಯ ಹೆಸರಿನಲ್ಲಿ ಯಾವುದೇ ಕೃತಕ ವಸ್ತುಗಳನ್ನು ಬಳಸದೆ, ಈ ತಾಣದ ನೈಸರ್ಗಿಕ ಪರಿಸರವನ್ನು ಹಾಗೆಯೇ ಉಳಿಸಿಕೊಂಡು ಪ್ರವಾಸಿಗರಿಗೆ ಅನುಕೂಲ ಮಾಡಿಕೊಡಲು ನಿರ್ಧರಿಸಲಾಗುವುದು. ಸಂಶೋಧಕರು, ಸಂಶೋಧನಾ ವಿದ್ಯಾರ್ಥಿಗಳು ಮತ್ತು ಪ್ರವಾಸಿಗರ ಹಿತದೃಷ್ಟಿಯಿಂದ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ತಾಣಕ್ಕೆ ತಲುಪಲು ಸುಸಜ್ಜಿತವಾದ ಕಾಲುದಾರಿ, ಮಾಹಿತಿ ಫಲಕಗಳು ಮತ್ತು ಅಗತ್ಯ ಮಾರ್ಗದರ್ಶನ ಸೌಲಭ್ಯಗಳನ್ನು ಒದಗಿಸಲು ಯೋಜಿಸಲಾಗುವುದು ಎಂದರು.

ಈ ತಾಣವು ಈ ಹಿಂದೆ ಅಷ್ಟಾಗಿ ಬೆಳಕಿಗೆ ಬಂದಿರಲಿಲ್ಲ. ಸ್ಥಳ ಪರಿಶೀಲನೆಯು ಅತ್ಯಂತ ಅರ್ಥಪೂರ್ಣವಾಗಿದ್ದು, ಈ ಪ್ರದೇಶವನ್ನು ಮುಂದಿನ ದಿನಗಳಲ್ಲಿ ಯಾವ ರೀತಿ ಅಭಿವೃದ್ಧಿಪಡಿಸಬೇಕು ಮತ್ತು ಪ್ರವಾಸಿಗರನ್ನು ಹೇಗೆ ಆಕರ್ಷಿಸಬೇಕು ಎಂಬ ಯೋಜನೆ ರೂಪಿಸುವುದರ ಕುರಿತು ಒಂದು ಸ್ಪಷ್ಟವಾದ ಚಿತ್ರಣ ದೊರೆತಿದೆ.

ಮೂಲಭೂತ ಸೌಕರ್ಯಗಳ ಸದ್ಬಳಕೆ ಮತ್ತು ಮುಂದಿನ ಅಭಿವೃದ್ಧಿ ಕಾರ್ಯಗಳ ಕುರಿತು ನೀಲಿನಕ್ಷೆ ಸಿದ್ಧಪಡಿಸಲಾಗುವುದು. ಈ ಕ್ರಮಗಳಿಂದಾಗಿ ಸ್ಥಳೀಯ ಪ್ರವಾಸೋದ್ಯಮಕ್ಕೆ ಹೆಚ್ಚಿನ ಬಲ ಸಿಗಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಆಗಮಿಸುವಂತೆ ಹಾಗೂ ಇದಕ್ಕೆ ಅಗತ್ಯ ಸೌಲಭ್ಯ, ಸಹಕಾರ ಜಿಲ್ಲಾಡಳಿತದಿಂದ ಒದಗಿಸಲಾಗುವುದು ಎಂದು ಹೇಳಿದರು.

ಈ ಪ್ರದೇಶದಲ್ಲಿ ಸಂಶೋಧನೆ ನಡೆಸಿ ಇಲ್ಲಿನ ಐತಿಹಾಸಿಕ ಮಹತ್ವವನ್ನು ಪರಿಚಯಿಸಿದ ಇತಿಹಾಸ ತಜ್ಞ ಪ್ರೊ.ಕೋರಿಶೆಟ್ಟರ್, ಸದಸ್ಯ ಅಹಿರಾಜ್ ಮತ್ತು ಅವರ ತಂಡದ ಶ್ರಮವನ್ನು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಶ್ಲಾಘಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್, ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್. ಎನ್., ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ., ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕ ಪ್ರಭುಲಿಂಗ ತಳಕೇರಿ, ಸಿಬ್ಬಂದಿ ಶ್ರೀಹರಿ ಸೇರಿದಂತೆ ಮತ್ತೀತರರು ಇದ್ದರು.

ಹೆಚ್ಚಿನ ಜನರಿರುವ ಪ್ರದೇಶಗಳಲ್ಲಿ ಗ್ಯಾರಂಟಿ ಯೋಜನೆಗಳ ಜಾಗೃತಿ ಮೂಡಿಸಿ - ರೆಡ್ಡಿ ಶ್ರೀನಿವಾಸ

ಕೊಪ್ಪಳ ಫೆ.21-

ಹೆಚ್ಚಿನ ಜನರಿರುವ ಪ್ರದೇಶಗಳಲ್ಲಿ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಗಳಾದ ಶಕ್ತಿ, ಅನ್ನಭಾಗ್ಯ, ಗೃಹಜ್ಯೋತಿ, ಗೃಹಲಕ್ಷ್ಮೀ ಹಾಗೂ ಯುವನಿಧಿ ಸೇರಿ ಪಂಚ ಗ್ಯಾರಂಟಿ ಯೋಜನೆಗಳ ಪ್ರಚಾರ ಹಮ್ಮಿಕೊಳ್ಳುವ ಮೂಲಕ ಮತ್ತಷ್ಟು ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಹೇಳಿದರು.

ಅವರು ಶುಕ್ರವಾರ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಾದ ಶಕ್ತಿ, ಅನ್ನಭಾಗ್ಯ, ಗೃಹಜ್ಯೋತಿ, ಗೃಹಲಕ್ಷ್ಮೀ ಹಾಗೂ ಯುವನಿಧಿ ಯೋಜನೆ ಕುರಿತಂತೆ ಎಲ್‌ಇಡಿ ವಾಹನದ ಮೂಲಕ ಕಿರುಚಿತ್ರಗಳ ಪ್ರದರ್ಶನ, ಸಂಗೀತ, ಬೀದಿ ನಾಟಕದಿಂದ ಜನಸಾಮಾನ್ಯರಿಗೆ ಮಾಹಿತಿ ಹಾಗೂ ಪ್ರಚಾರ ನೀಡಲು ಕೊಪ್ಪಳ ಜಿಲ್ಲೆಯಲ್ಲಿ ಹಮ್ಮಿಕೊಂಡಿರುವ ಪ್ರಚಾರ ವಾಹನ ಹಾಗೂ ಕಲಾ ಜಾಥಾ ಕಾರ್ಯಕ್ರಮಕ್ಕೆ ಕೊಪ್ಪಳ ಜಿಲ್ಲಾಡಳಿತ ಭವನದ ಆವರಣದಲ್ಲಿ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿ, ಮಾತನಾಡಿದರು.

ರಾಜ್ಯದಲ್ಲಿ ಪಂಚ ಗ್ಯಾರಂಟಿ ಯೋಜನೆಗಳು ಅಚ್ಚುಕಟ್ಟಾಗಿ ನಡೆಯುತ್ತಿದ್ದು, ಎಲ್ಲಾ ಅರ್ಹ ಫಲಾನುಭವಿಗಳಿಗೆ ನೇರವಾಗಿ ಈ ಯೋಜನೆಗಳ ಲಾಭವನ್ನು




ತಲುಪಿಸುವಂತಹ ಕೆಲಸ ನಮ್ಮ ಸರ್ಕಾರದಿಂದ ಆಗುತ್ತಿದೆ. ಈ ಎಲ್ಲಾ ಐದು ಯೋಜನೆಗಳ ಬಗ್ಗೆ ಪ್ರತಿಯೊಂದು ಗ್ರಾಮ ಮತ್ತು ಪಟ್ಟಣಗಳಲ್ಲಿ ಪ್ರಚಾರ ಆಗಬೇಕೆಂದು ಸರ್ಕಾರವು ಪ್ರಚಾರ ವಾಹನಗಳ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸುತ್ತಿದೆ. ಈ ಕಾರ್ಯಕ್ರಮದ ಮೂಲಕ ಪಂಚ ಗ್ಯಾರಂಟಿ ಯೋಜನೆಗಳಿಂದ ಜನರಿಗೆ ಸಿಗುತ್ತಿರುವ ಲಾಭಗಳ ಕುರಿತು ಜನರಿಗೆ ಅರ್ಥವಾಗುವ ರೀತಿಯಲ್ಲಿ ಕಲಾವಿದರು ಮಾಹಿತಿ ನೀಡಿ, ಐದು ಗ್ಯಾರಂಟಿ ಯೋಜನೆಗಳ ಪ್ರಚಾರ ಕಾರ್ಯಕ್ರಮವು ಜಿಲ್ಲೆಯಲ್ಲಿ ಅಚ್ಚುಕಟ್ಟಾಗಿ ನಡೆಸಬೇಕೆಂದರು.

ಕೊಪ್ಪಳ ಜಿಲ್ಲೆಯಲ್ಲಿ ಪಂಚ ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನ ಮಾಡಲಾಗುತ್ತಿದ್ದು, ಗೃಹಲಕ್ಷ್ಮೀ ಯೋಜನೆಯಡಿ ಸುಮಾರು 3 ಲಕ್ಷ 19 ಸಾವಿರಕ್ಕೂ ಅಧಿಕ ಫಲಾನುಭವಿಗಳು ಈ ಯೋಜನೆಯ ಸೌಲಭ್ಯ ಪಡೆದುಕೊಳ್ಳುತ್ತಿದ್ದಾರೆ. ಇಲ್ಲಿಯವರೆಗೆ 1581 ಕೋಟಿ ರೂ.ಗಳನ್ನು ಗೃಹಲಕ್ಷ್ಮೀ ಫಲಾನುಭವಿಗಳಿಗೆ ನೀಡಲಾಗಿದೆ. ಶಕ್ತಿ ಯೋಜನೆಯಡಿ ಇಲ್ಲಿಯವರೆಗೆ ಜಿಲ್ಲೆಯಲ್ಲಿ ಸುಮಾರು 11 ಕೋಟಿ ಮಹಿಳಾ ಫಲಾನುಭವಿಗಳು ಉಚಿತ ಬಸ್ ಪ್ರಯಾಣದ ಸೌಲಭ್ಯವನ್ನು ಪಡೆದುಕೊಂಡಿದ್ದಾರೆ. ಅನ್ನಭಾಗ್ಯ ಯೋಜನೆಯು ಪಡಿತರ ಚೀಟಿದಾರರಿಗೆ ತುಂಬಾ ಅನುಕೂಲವಾಗಿದೆ. ಯುವನಿಧಿಯಡಿ 13 ಸಾವಿರಕ್ಕೂ ಅಧಿಕ ಫಲಾನುಭವಿಗಳಿಗೆ ನಿರುದ್ಯೋಗ ಭತ್ಯೆ ಸಿಗುತ್ತಿದೆ. ಗೃಹಜ್ಯೋತಿಯಡಿ ಜಿಲ್ಲೆಯ ಶೇ. 98.5 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಹೇಳಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಮಂಜುನಾಥ ಗೊಂಡಬಾಳ ಅವರು ಮಾತನಾಡಿ, ಪಂಚ ಗ್ಯಾರಂಟಿ ಯೋಜನೆಗಳ ಮೂಲಕ ಜನರನ್ನು ವಿಶೇಷವಾಗಿ ಮಹಿಳೆಯರನ್ನು ಸಬಲೀಕರಣ ಮಾಡುವ ಮತ್ತು ಸ್ವಾವಲಂಬನೆಯತ್ತ ತೆಗೆದುಕೊಂಡು ಹೋಗುವ ಕೆಲಸವಾಗುತ್ತಿದೆ. ಈ ಯೋಜನೆಗಳಿಗಾಗಿ ಸರ್ಕಾರವು 52 ಸಾವಿರ ಕೋಟಿ ರೂ.ಗಳನ್ನು ಪ್ರತಿವರ್ಷ ಮೀಸಲಿಟ್ಟು, ಬಡವರಿಗೆ, ಮಹಿಳೆಯರಿಗೆ ಆರ್ಥಿಕ ಧನ ಸಹಾಯವನ್ನು ಮಾಡಲಾಗುತ್ತಿದೆ. ಯಾವುದೇ ಒಂದು ಮಾನವನ ಸಬಲೀಕರಣವಾಗಬೇಕಾದರೆ, ಕನಿಷ್ಠ ಮೂಲಭೂತ ಬದುಕುವ ಹಕ್ಕನ್ನು ಕೊಡಬೇಕೆಂದು ಸಂವಿಧಾನ ಹೇಳುತ್ತದೆ. ಅಂತಹ ಹಕ್ಕನ್ನು ಗ್ಯಾರಂಟಿ ಯೋಜನೆಗಳ ಮೂಲಕ ನಮ್ಮ ಸರ್ಕಾರ ನೀಡುತ್ತಿದೆ. ಈ ಎಲ್ಲಾ ಯೋಜನೆಗಳ ಮೂಲಕ ಯುವ ಜನರಿಗೆ ಮಹಿಳೆಯರಿಗೆ ಮತ್ತು ಎಲ್ಲರಿಗೂ ಶಕ್ತಿ ಕೊಡುವ ಕೆಲಸ ಆಗುತ್ತಿದೆ. ಇಂತಹ ಯೋಜನೆಗಳನ್ನು ಮತ್ತಷ್ಟು ಜನರಿಗೆ ತಲುಪಿಸುವ ಮತ್ತು ಅವುಗಳ ಬಗ್ಗೆ ಮಾಹಿತಿ ಒದಗಿಸುವ ಕೆಲಸ ಈ ಪ್ರಚಾರ ಕಾರ್ಯಕ್ರಮದ ಮೂಲಕ ಆಗಲಿ ಎಂದರು.

ಈ ಸಂದರ್ಭದಲ್ಲಿ ಕೊಪ್ಪಳ ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸದಸ್ಯರಾದ ಮಾನ್ವಿ ಪಾಶಾ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ. ಸುರೇಶ್ ಜಿ., ಕಾರಟಗಿ ತಾ.ಪಂ ಕೆ.ಡಿ.ಪಿ ಸದಸ್ಯರಾದ ದಾವಲಸಾಬ್, ದೇಸಾಯಿ ಕ್ಯಾಂಪ್ ಗ್ರಾ.ಪಂ ಸದಸ್ಯರಾದ ಮಹೇಬೂಬ್, ಕಲಾವಿದ ಭಾಷು ಹಿರೇಮನಿ, ರಮೇಶ ಸಿಂಧನೂರು, ವಾರ್ತಾ ಇಲಾಖೆಯ ಸಿಬ್ಬಂದಿಗಳಾದ ಎನ್.ತಿಪ್ಪಯ್ಯ ನಾಯ್ಡು, ಆರೀಫ್ ಅಹ್ಮದ್, ಶಿಬಿರಾರ್ಥಿಗಳಾದ ಪ್ರಕಾಶ ಹಾಗೂ ಕಿರಣ ಸೇರಿದಂತೆ ಇತರೆ ಸಿಬ್ಬಂದಿಗಳು ಮತ್ತು ಚಿಕ್ಕಮ್ಯಾಗೇರಿಯ ರಂಗಚೇತನ ಸಾಂಸ್ಕೃತಿ ಕಲಾ ಸಂಸ್ಥೆಯ ಕಲಾವಿದರಾದ ಕಾಳೇಶ್, ಶರಣಪ್ಪ ಮೇಟಿ, ವೀರಯ್ಯ, ಸುಲೋಚನಾ, ಗೌರಮ್ಮ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



ಮೂರು ಸಾಲಿನ ತ್ರಿಪದಿ ವಚನಗಳ ಮೂಲಕ ಜಗದ ಸಾರ ತಿಳಿಸಿದ ಸರ್ವಜ್ಞ

ಯಾದಗಿರಿ : ಫೆ.21-

ತ್ರಿಪದಿ ಎಂಬ ಮೂರು ಸಾಲಿನ ವಚನಗಳ ಮೂಲಕ ಜಗದ ಸಾರ ತಿಳಿಸಿದ ಸರ್ವಜ್ಞ ಅವರು ಶ್ರೇಷ್ಠ ಜ್ಞಾನಿ ಯಾಗಿದ್ದರೆಂದು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಬಾಬುರಾವ ಕಾಡ್ಲೂರ್ ಹೇಳಿದರು.

ಜಿಲ್ಲಾಡಳಿತ, ಜಿಪಂ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಯಂತ್ಯೋತ್ಸವ ಸಮಿತಿ ಸಂಯುಕ್ತವಾಗಿ ಇಲ್ಲಿನ ಜಿಲ್ಲಾ ಕನ್ನಡ ಸಾಹಿತ್ಯ ಭವನದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಸಂತಕವಿ ಸರ್ವಜ್ಞ ಅವರ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಹಾವೇರಿ ಜಿಲ್ಲೆಯವರಾದ ಪುಷ್ಪದತ್ತ ಎಂಬ ಮೊದಲ ಹೆಸರಿನ ಇವರು ನಂತರ ವಚನಗಳ ರಚನೆ ಮೂಲಕ ಸರ್ವಜ್ಞನೆಂದು ಪ್ರಸಿದ್ಧಿಯಾದರು. ಬಾಲ್ಯದಲ್ಲಿಯೇ ಅಗಾಧವಾದ ಪಾಂಡಿತ್ಯವನ್ನು ಶಿವನ ವರಪ್ರಸಾದದಿಂದ ಪಡೆದಿದ್ದರೆಂದರು. ಸರ್ವಜ್ಞ ರಚಿಸಿದ ಸುಮಾರು 7070 ತ್ರಿಪದಿ ವಚನಗಳು ಲಭ್ಯವಾಗಿದೆಯೆಂಬುವುದು ತಜ್ಞರ ಅಭಿಪ್ರಾಯವಾಗಿದೆ. ಅವರ ಜೀವನ ಆದರ್ಶಗಳನ್ನು ಎಲ್ಲರೂ ಅಳವಡಿಸಿಕೊಳ್ಳಬೇಕೆಂದು ಕಾಡ್ಲೂರ ಹೇಳಿದರು. ಸರ್ವಜ್ಞ ಭವನಕ್ಕೆ ನಿವೇಶನ ಕೇಳಿದ ಹಿನ್ನಲೆಯಲ್ಲಿ ನಿವೇಶನ ನೀಡುವ ಭರವಸೆ ಬಾಬುರಾವ ಕಾಡ್ಲೂರ ನೀಡಿದರು.

ವಿಶೇಷ ಉಪನ್ಯಾಸ ನೀಡಿದ ಅಯ್ಯಮ್ಮ ಜೇಗಾಂ ಸೌರಾಷ್ಟ್ರಹಳ್ಳಿ ಅವರು, ಸರ್ವಜ್ಞ ಎಂದರೆ ಸಂಸ್ಕೃತದಲ್ಲಿ ಎಲ್ಲವನ್ನೂ ತಿಳಿದವರು ಎಂದರ್ಥ. ಇವರು ಕನ್ನಡದ ತ್ರಿಪದಿ ಸಾಹಿತ್ಯದ ಪ್ರಮುಖ ಕವಿ. ಪ್ರಮುಖವಾಗಿ ತ್ರಿಪದಿಗಳೆಂಬ ಮೂರು ಸಾಲಿನ ವಚನಗಳನ್ನು ರಚಿಸಿರುವ ಮೂಲಕ ಅಲ್ಪ ಶಬ್ದಗಳಲ್ಲಿ ಅಗಾಧವಾದುದನ್ನೂ ತಿಳಿಸಿದ ಪರಮಜ್ಞಾನಿ ಎಂದರು. ಇವರು ಜೀವಿಸಿದ್ದ ಕಾಲ ಸುಮಾರು 17ನೇ ಶತಮಾನದ ಆದಿಭಾಗ ಎಂದು ಪ್ರತಿಪಾದಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ತಹಸೀಲ್ದಾರ ಸುರೇಶ ಅಂಲಗಿ, ಯುವ ಕ್ರೀಡಾ ಇಲಾಖೆ ಅಧಿಕಾರಿ ರಾಜು ಭಾವಿಹಳ್ಳಿ, ಕುಂಬಾರ ಸಮಾಜದ ಜಿಲ್ಲಾಧ್ಯಕ್ಷ ದೇವಿಂದ್ರಪ್ಪ ದರ್ಶನಾಪುರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಉತ್ತರಾದೇವಿ ಮಠಪತಿ ಇದ್ದರು.

ಒಂದನೇಯ ಪುಟದಿಂದ

ಸಿರವಾರ ತಾಲೂಕನ್ನು ಸಿಂಧನೂರಿಗೆ ಸೇರ್ಪಡೆ ವಿರೋಧಿಸಿ 23ರಂದು ಐತಿಹಾಸಿಕ ಪಾದಯಾತ್ರೆ

ಸೇರ್ಪಡೆ ಎಂಬ ನಿರ್ಧಾರದಿಂದ ಸಮಸ್ಯೆಗಳು ಹೆಚ್ಚುವ ಸಾಧ್ಯತೆ ಇದೆ'' ಎಂದು ಒತ್ತಾಯಿಸಿದ್ದಾರೆ.

ಶಾಂತಿಯುತ ಹೋರಾಟಕ್ಕೆ ಸಜ್ಜು

ಫೆಬ್ರವರಿ 23ರಂದು ನಡೆಯಲಿರುವ ಪಾದಯಾತ್ರೆಯಲ್ಲಿ ಸಾವಿರಾರು ಮಂದಿ ಭಾಗವಹಿಸುವ ನಿರೀಕ್ಷೆಯಿದ್ದು, ಶಾಂತಿಯುತವಾಗಿ ತಮ್ಮ ಬೇಡಿಕೆಯನ್ನು ಸರ್ಕಾರದ ಗಮನಕ್ಕೆ ತರುವುದಾಗಿ ಆಯೋಜಕರು ತಿಳಿಸಿದ್ದಾರೆ.

ಸಿರವಾರ ತಾಲೂಕನ್ನು ರಾಯಚೂರು ಜಿಲ್ಲೆಯಲ್ಲೇ ಉಳಿಸಬೇಕೆಂಬುದು ಹೋರಾಟಗಾರರ ಪ್ರಮುಖ ಬೇಡಿಕೆಯಾಗಿದ್ದು, ಸರ್ಕಾರ ಜನಾಭಿಪ್ರಾಯವನ್ನು ಪರಿಗಣಿಸಿ ಮರುಪರಿಶೀಲನೆ ಮಾಡಬೇಕೆಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

ರಾಯಚೂರು ಮಹಾನಗರ ಪಾಲಿಕೆ ಆಯುಕ್ತರಿಂದ ನಗರ ಸಂಚಾರ: ಕಾಮಗಾರಿಗಳ ಪರಿಶೀಲನೆ

ಆಯುಕ್ತರಾದ ಭರತ್ ಕುಮಾರ್, ಕಂದಾಯ ವಿಭಾಗದ ಉಪ ಆಯುಕ್ತರಾದ ಬಿ.ಶರಣಪ್ಪ, ಪಾಲಿಕೆಯ ಕಾರ್ಯನಿರ್ವಾಹಕ ಅಭಿಯಂತರರು, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಸೇರಿದಂತೆ ವಿವಿಧ ವಿಭಾಗದ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಇದ್ದರು.

ಹಾಡು ಮುಟ್ಟದ ಗಿಡ ವಿಲ್ಲ ಸರ್ವಜ್ಞ ಹೇಳದ ವಿಷಯವಿಲ್ಲ. ಡಾ ಬಿರಾದಾರ

ಇರುವುದಿಲ್ಲ.ಎಂಬುದನ್ನು ತನ್ನ ತಿಪದಿಗಳಲ್ಲಿ ಅರ್ಥಪೂರ್ಣವಾಗಿ ತಿಳಿಸಿದ್ದಾನೆ ಕ.ನ್ನಡ ಸಾಹಿತ್ಯದಲ್ಲಿ ತಿಪದಿಗಳಿಗೆ ಶಾಶ್ವತವಾಗಿ ಸ್ಥಾನ ಕಲ್ಪಿಸಿಕೊಟ್ಟ ಶ್ರೇಯಸ್ಸು ಸರ್ವಜ್ಞ ಕವಿಗೆ ಸಲ್ಲುತ್ತದೆ.ಈ ಕವಿಯ ವಚನಕಾರ ಪರಂಪರೆಗೆ ಸೇರಿದವ ರಾಗಿದ್ದು.ಆಧ್ಯಾತ್ಮಿಕ ವಿಷಯಗಳನ್ನು ಸರಳಗನ್ನಡದಲ್ಲಿ ವಿವರಿಸಿದ್ದಾರೆ.ಧರ್ಮ. ಅರ್ಥ. ಕಾಮ. ಮೋಕ್ಷ ಜೊತೆಗೆ ಮೂಡನಂಬಿಕೆ. ಕೆಟ್ಟ ಸಂಪ್ರದಾಯ ಅಂಶಗಳನ್ನು ಬಹಳ ಅರ್ಥಗರ್ಭಿತವಾಗಿ ತಮ್ಮ ತ್ರಿಪದಿಗಳಲ್ಲಿ ತಿಳಿಸಿದ್ದಾರೆ.ಆಶು ಕವಿ.ಎಂದೇ ಪ್ರಸಿದ್ಧಿಯಾದ ಸರ್ವಜ್ಞನು ಹಲವಾರು ವಚನಗಳನ್ನು ರಚನೆ ಮಾಡಿ ಸಮಾಜದ ಅಂಕು ಡೊಂಕು ಗಳನ್ನ ತಿದ್ದುವ ಮಹತ್ವ ಕಾರ್ಯವನ್ನ ಮಾಡಿದ್ದಾನೆ. ಸರ್ವ ವಿಷಯದ ಬಗ್ಗೆ ವಚನಗಳ ರಚನೆ ಮಾಡಿದ್ದರಿಂದ ತ್ರಿಪದಿಗಳಲ್ಲಿ ತಿಳಿಸಿದ್ದರಿಂದ ಆಡು ಮುಟ್ಟದ ಗಿಡವಿಲ್ಲ ಸರ್ ವಿಷಯವಿಲ್ಲ ಎಂದು ಹೇಳಬಹುದು ಎಂದು ರಾಯಚೂರು ತಾಲೂಕಿನ ಸರಕಾರಿ ಪ್ರೌಢಶಾಲೆ,ಉಡಮ ಗಲ ಖಾನಾಪುರದಲ್ಲಿ ನಡೆದ ತ್ರಿಪದಿ ಕವಿ ಸರ್ವಜ್ಞ ಜಯಂತಿಯ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಮಾಲಾರ್ಪಣೆಯ ನಂತರ ಶಾಲಾ ಕನ್ನಡ ಕಲಾ ಶಿಕ್ಷಕರು ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಸಹ ಕಾರ್ಯದರ್ಶಿಯಾದ ಡಾ. ದಂಡಪ್ಪ ಬಿರಾದಾರ ಮಾತನಾಡಿದರು. ಶಾಲಾ ಮುಖ್ಯ ಗುರುಗಳು ವೀರೇಶ್ ಅಂಗಡಿ ಅವರು ಮಾತನಾಡುತ್ತ.ನಮ್ಮ ಶಾಲೆಯ ಕನ್ನಡ ಕಲಾ ಶಿಕ್ಷಕರಾದ ಬಿರಾದಾರ್ ಸರ್ ಅವರು ಸರ್ವಜ್ಞನ ವಚನಗಳನ್ನು ಬಹಳ ಮಾರ್ಮಿಕವಾಗಿ ಅಷ್ಟೇ ಅರ್ಥಗರ್ಭಿತವಾಗಿ ಹೇಳಿ ಅವುಗಳ ವಿಷಯದ ವಿವರಣೆಯನ್ನು ಮನಮುಟ್ಟುವಂತೆ ತಮ್ಮೆಲ್ಲರಿಗೂ ತಿಳಿಸಿದ್ದಾರೆ.ಜೊತೆಗೆ ಅವರು ಮಕ್ಕಳ ಮೂಲಕ ವಚನಗಳನ್ನು ಹೇಳಿಸಿ ಅವರ ವಿಚಾರವನ್ನು ತಿಳಿದುಕೊಳ್ಳಲು ವಿದ್ಯಾರ್ಥಿಗಳಿಗೆ ಸಹಾಯ ಮಾಡಿದ್ದಾರೆ.ಅವರು ಯಾವುದೇ ಒಂದು ಜಯಂತಿ ಇದ್ದರೆ ಅದರ ಸಂಪೂರ್ಣ ಸಿದ್ಧತೆಯನ್ನು ಮಾಡಿಕೊಂಡು ಬರುತ್ತಾರೆ. ವಿದ್ಯಾರ್ಥಿಗಳೆ ಸರ್ವಜ್ಞನ ಪ್ರತಿಯೊಂದು ವಚನಗಳನ್ನ ತಾವು ಅರ್ಥವಾಗಿ ಅಭ್ಯಾಸ ಮಾಡಿ ತಿಳಿದುಕೊಂಡು ತಮ್ಮ ಜೀವನದಲ್ಲಿ ಯಶಸ್ವಿ ಕಾಣೆರೆಂದು ಹೇಳಿದರು.ಈ ಸಂದರ್ಭದಲ್ಲಿ ಶಾಲಾ ಶಿಕ್ಷಕರಾದ ಪಾಂಡುರಂಗ ದೇಸಾಯಿ.ವೀಣಾ ಕುಲಕರ್ಣಿ ಶಿವಲೀಲಾ ನಫಿಜಾ ಅಂಜುಮ ಸಾವಿತ್ರಿ. ಸೇರಿದಂತೆ ಇನ್ನಿತರ ಇದ್ದರು.ಕುಮಾರಿ ಚಂದನ. ಮನುಶ್ರೀ ಭಾವನ ಪೂರ್ಣಿಮಾ ಸರ್ವಜ್ಞ ವಚನಗಳನ್ನು ಹೇಳಿದರು. ಶಾಲಾ ಸಿಬ್ಬಂದಿ ನೀಲಕಂಠ ಕಾರ್ಯಕ್ರಮ ಸಿದ್ಧತೆ ಮಾಡಿದನು ಈ ಸಂದರ್ಭದಲ್ಲಿ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಪರೀಕ್ಷೆ ಸಿದ್ಧತೆಯ ಪೂರ್ವಭಾವಿ ಸಭೆ ಪಿಯು ಪರೀಕ್ಷೆಯು ವ್ಯವಸ್ಥಿತ, ಪಾರದರ್ಶಕವಾಗಿ ನಡೆಯಲಿ: ಅಪರ ಜಿಲ್ಲಾಧಿಕಾರಿ ಶಿವಾನಂದ

ವೆಬ್‌ಕಾಸ್ಟಿಂಗ್ ವ್ಯವಸ್ಥೆ ಮಾಡಬೇಕು. ವಿದ್ಯಾರ್ಥಿಗಳು ನೋಂದಣಿ ಸಂಖ್ಯೆ ಹಾಗೂ ಕೊಠಡಿ ಸಂಖ್ಯೆ ಖಾತರಿ ಪಡಿಸಿಕೊಳ್ಳಲು ಪರೀಕ್ಷಾ ಕೇಂದ್ರದಲ್ಲಿ ಮಾಹಿತಿ ಒದಗಿಸುವಂತಾಗಬೇಕು ಎಂದರು.

ಪರೀಕ್ಷಾ ದಿನಗಳಲ್ಲಿ ಅಗತ್ಯ ವಾಹನ ನಿಯೋಜಿಸುವುದು ಜೊತೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗದತೆ ನೋಡಿಕೊಳ್ಳುವುದು, ಆರೋಗ್ಯ ಇಲಾಖೆಯಿಂದ ಶುಶ್ರೂಷಕರನ್ನು ನೇಮಿಸುವಂತೆ ಸಂಬಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಈ ವೇಳೆ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಅವರು ಮಾತನಾಡಿ, ಪರೀಕ್ಷಾ ದಿನದಂದು ಪರೀಕ್ಷಾ ಕೇಂದ್ರದ ಸುತ್ತಲಿನ 200 ಮೀಟರ್ ವ್ಯಾಪ್ತಿಯಲ್ಲಿ ಪ್ರತಿಬಂಧಕ ಜಾರಿಗೊಳಿಸಲಾಗುತ್ತದೆ. ಹಾಗೆಯೇ ಪರೀಕ್ಷಾ ದಿನಗಳಂದು ಜೆರಾಕ್ಸ್ ಅಂಗಡಿಗಳನ್ನು ಸಹ ಮುಚ್ಚಿಸಲಾಗುತ್ತದೆ ಎಂದರು.

ಈ ವೇಳೆ ಪದವಿ ಪೂರ್ವ ಕಾಲೇಜು ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಸೋಮುಶೇಖರಪ್ಪ ಹೊಕ್ರಾಣಿ ಅವರು ಮಾತನಾಡಿ, ಜಿಲ್ಲೆಯಲ್ಲಿ ಈ ಬಾರಿ 22,442 ವಿದ್ಯಾರ್ಥಿಗಳು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆ ಬರೆಯಲಿದ್ದು, ಮೊದಲ ಬಾರಿಗೆ 18,419 ವಿದ್ಯಾರ್ಥಿಗಳು ಪರೀಕ್ಷೆ ಬರೆಯುತ್ತಿದ್ದಾರೆ. 560 ಖಾಸಗಿಯಾಗಿ ಹಾಗೂ 3,450 ಪುನರಾವರ್ತಿತ ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದು, ಜಿಲ್ಲೆಯ 43 ಕೇಂದ್ರಗಳಲ್ಲಿ ದ್ವಿತೀಯ ಪಿಯು ಪರೀಕ್ಷೆ ನಡೆಯಲಿದೆ ಎಂದರು.

ಪರೀಕ್ಷೆ ಕೇಂದ್ರಗಳು: ರಾಯಚೂರು ತಾಲೂಕಿನಲ್ಲಿ 13, ಲಿಂಗಸುಗೂರು 07, ದೇವದುರ್ಗ 05, ಸಿಂಧನೂರು 09, ಮಾನವಿ 05, ಮಸ್ಕಿ 02, ಸಿರವಾರ 02 ಸೇರಿದಂತೆ ಒಟ್ಟು 43 ಪರೀಕ್ಷೆ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ.

ಇದೇ ಸಂದರ್ಭದಲ್ಲಿ ಜಿಲ್ಲೆಯ ವಿವಿಧ ತಾಲೂಕಿನ ತಹಶಿಲ್ದಾರರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ವಿವಿಧ ಕಾಲೇಜಿನ ಪ್ರಾಂಶುಪಾಲರು, ಹಿರಿಯ ಉಪನ್ಯಾಸಕರು ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆಯ ವಿವಿಧ ಅಧಿಕಾರಿಗಳು, ಸಿಬ್ಬಂದಿ ಸಭೆಯಲ್ಲಿ ಇದ್ದರು.

ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ ಸಭೆ ಕೇಂದ್ರ ಪುರಸ್ಕೃತ ಯೋಜನೆಗಳ ಪ್ರಗತಿಗೆ ವೇಗ ನೀಡಿ ಸಂಸದ ಜಿ.ಕುಮಾರ ನಾಯಕ ಕಟ್ಟುನಿಟ್ಟಿನ ನಿರ್ದೇಶನ

ಬಿಎಸ್‌ಎನ್‌ಎಲ್ ಯೋಜನೆಗಳ ಬಗ್ಗೆ ಸಂಸದರು ಕೇಳಿದರು. ಬಿಎಸ್‌ಎನ್‌ಎಲ್ ಅಡಿಯಲ್ಲಿ 4ಜಿ ಮೊಬೈಲ್ ಟವರ್‌ಗಳನ್ನು ಸ್ಥಾಪಿಸಲಾಗುತ್ತಿದೆ. ಈಗಾಗಲೇ ರಾಯಚೂರು ಜಿಲ್ಲೆಯಲ್ಲಿ ಪ್ರಸ್ತುತ 95 ಗ್ರಾಮ ಪಂಚಾಯತ್‌ಗಳಲ್ಲಿ ಇಂಟರ್‌ನೆಟ್ ಕಾರ್ಯನಿರ್ವಹಿಸುತ್ತಿದ್ದು, ಹಂತ ಹಂತವಾಗಿ ಎಲ್ಲಾ 191 ಗ್ರಾಮ ಪಂಚಾಯತ್‌ಗಳಿಗೆ ಇಂಟರ್‌ನೆಟ್ ಸಂಪರ್ಕ ನೀಡಲಾಗುತ್ತದೆ. ಮುಂದಿನ ಮೊಬೈಲ್ ವಿಸ್ತರಣಾ ಹಂತದಲ್ಲಿ, ಇನ್ನೂ ಮೊಬೈಲ್ ಸಂಪರ್ಕ ಅಥವಾ ಇಂಟರನೆಟ್ ಸೌಲಭ್ಯವಿಲ್ಲದ ಗ್ರಾಮಗಳಿಗೆ 4ಜಿ ಸೇವೆಗಳು ಒದಗಿಸುವ ಯೋಜನೆ ರೂಪಿಸಲಾಗಿದೆ ಎಂದು ಬಿಎಸ್‌ಎನ್‌ಎಲ್ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ತೀವ್ರ ಅಸಮಾಧಾನ: ಸರ್ಕಾರದ ವಿವಿಧ ಕಾರ್ಯಕ್ರಮಗಳಿಗೆ ಫಲಾನುಭವಿಗಳಾದವರಿಗೆ ಸಾಲ ಸೌಕರ್ಯ ಮಂಜೂರಿ ಮಾಡಲು ಸಿ-ಬಿಲ್ ಸ್ಕೋರ್ ಏಕೆ ಕೇಳುತ್ತೀರಿ? ಎಂದು ಬ್ಯಾಂಕಿನ ಅಧಿಕಾರಿಗಳ ಕಾರ್ಯವೈಖರಿಯ ಬಗ್ಗೆ ಸಂಸದರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು. ಕಡು ಬಡವರು, ಮಧ್ಯಮ ವರ್ಗದ ಜನರನ್ನು ಬ್ಯಾಂಕುಗಳಿಗೆ ಅಲೆದಾಡಿಸದೇ ಸರ್ಕಾರದ ಯೋಜನೆಯ ಫಲಾನುಭವಿ ಎಂಬುದನ್ನು ಖಚಿತಪಡಿಸಿಕೊಂಡು ಸಾಲಸೌಕರ್ಯ ನೀಡಲು ಎಲ್ಲ ಬ್ಯಾಂಕಿನ ಮ್ಯಾನೇಜರಗಳಿಗೆ ಆದೇಶ ಮಾಡಬೇಕು ಎಂದು ಸಂಸದರು ಲೀಡ್ ಬ್ಯಾಂಕಿನ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಜನತೆಗೆ ನೀರು ಪೂರೈಸಿ: ಜಲಜೀವನ ಮಿಷನ್ ಯೋಜನೆ ಅನುಷ್ಠಾನದ ಚರ್ಚೆ ವೇಳೆ ರಾಯಚೂರು ಗ್ರಾಮೀಣ ಶಾಸಕರಾದ ಬಸನಗೌಡ ದದ್ದಲ್ ಅವರು ಮಾತನಾಡಿ, ಜನತೆಗೆ ನೀರು ಪೂರೈಸುವ ಕಾರ್ಯವಾಗಬೇಕು. ನೀರು ಪೂರೈಸದಿದ್ದರೆ ಜನ ಬೀದಿಗಿಳಿದು ಪ್ರತಿಭಟಿಸುತ್ತಾರೆ ಎಂಬುದರ ಬಗ್ಗೆ ಅರಿವಿರಬೇಕು. ನಾವು ಜನರ ಭಾವನೆಗಳಿಗೆ ಸ್ಪಂದನೆ ನೀಡಬೇಕು. ಜಿಲ್ಲಾ ಪಂಚಾಯತ್ ಸಿಇಓ ಅವರು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳೊಂದಿಗೆ ಕಾಲಕಾಲಕ್ಕೆ ಸಭೆ ನಡೆಸಿ ಕುಡಿಯುವ ನೀರಿನ ಯೋಜನೆಗಳ ಅನುಷ್ಠಾನಕ್ಕೆ ಹೆಚ್ಚಿನ ಆದ್ಯತೆ ಕೊಡಬೇಕು ಎಂದು ತಿಳಿಸಿದರು.

ತನಿಖೆಗೆ ಒತ್ತಾಯ: ಜಲಜೀವನ ಮಿಷನ್ ಯೋಜನೆಯ ಕಾಮಗಾರಿಗಳ ಬಗ್ಗೆ ಸಭೆಯಲ್ಲಿ ಸುದೀರ್ಘ ಚರ್ಚೆ ನಡೆಯಿತು. ಜಲಜೀವನ ಮಿಷನ್ ಯೋಜನೆ ಸಂಪೂರ್ಣ ಫೇಲ್ ಆಗಿದೆ. ಕಳಪೆ ಕಾಮಗಾರಿಯ ಬಗ್ಗೆ ತನಿಖೆಗೆ ಆದೇಶ ಮಾಡಬೇಕು ಎಂದು ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ ನಾಯಕ ಅವರು ಸಭೆಯಲ್ಲಿ ಆಗ್ರಹಿಸಿದರು.

ಅಧಿಕಾರಿಗಳಿಗೆ ನಿರ್ದೇಶನ: ರಾಯಚೂರು ಜಿಲ್ಲೆಯ ಎಲ್ಲ ಗ್ರಾಮೀಣ ಜನ ವಸತಿಗಳಿಗೆ ಹಾಗೂ 7 ನಗರ ಸ್ಥಳೀಯ ಸಂಸ್ಥೆಗಳಾದ ಮಾನ್ವಿ, ಮಸ್ಕಿ, ಕವಿತಾಳ, ತುರವಿಹಾಳ, ಬಳಗಾನೂರ, ಸಿರವಾರ ಮತ್ತು ಹಟ್ಟಿಗಳಿಗೆ ಡಿಬಿಓಟಿ ಆಧಾರದ ಮೇಲೆ ಬಹುಗ್ರಾಮ ಕುಡಿಯುವ ನೀರು ಸರಬರಾಜು ಯೋಜನೆಯನ್ನು ಜಲಜೀವನ ಮಿಷನ್ ಯೋಜನೆಯಡಿ ನಬಾರ್ಡ ಹಾಗೂ ಯುಡಿಡಿ ಅನುದಾನ ನೆರವಿನೊಂದಿಗೆ ಸಂಯೋಜಿತಗೊಳಿಸಿ ಅನುಷ್ಠಾನಗೊಳಿಸುವ ಕಾರ್ಯವು ವೇಗವಾಗಿ ನಡೆಯುವಂತೆ ನೋಡಿಕೊಳ್ಳಬೇಕು ಎಂದು ಸಂಸದರು ಇದೆ ವೇಳೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಬಿಸಿಲಿನ ಪ್ರಖರತೆ ಹಿನ್ನೆಲೆ; ಸಾರ್ವಜನಿಕರು ಆರೋಗ್ಯದ ಬಗ್ಗೆ ಕಾಳಜಿ ವಹಿಸಲು ಡಿಹೆಚ್‌ಓ ಡಾ.ಯಲ್ಲಾ ರಮೇಶ್ ಬಾಬು ಸಲಹೆ



ಬಳ್ಳಾರಿ,ಫೆ.21-

ಬೇಸಿಗೆ ಆರಂಭವಾಗಲಿದ್ದು, ಬಿಸಲಿನ ತಾಪಮಾನದ ಅಲೆ ಹೆಚ್ಚಾಗುವ ಸಂಭವವಿದೆ ಎಂದು ಭಾರತೀಯ ಹವಮಾನ ಇಲಾಖೆಯ ಮುನ್ಸೂಚನೆ ಇರುವುದರಿಂದ ಆರೋಗ್ಯದ ಮೇಲೆ ಬೀರುವ ದುಷ್ಪರಿಣಾಮ ಹಾಗೂ ಅವುಗಳ ಮುಂಜಾಗ್ರತಾ ಕ್ರಮಗಳ ಬಗ್ಗೆ ಸಾರ್ವಜನಿಕರು ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಸಲಹೆ ನೀಡಿದ್ದಾರೆ.

ಸಾರ್ವಜನಿಕರು ಬಿಸಿಲಿನ ತಾಪಮಾನದಿಂದ ಹೇಗೆ ರಕ್ಷಿಸಿಕೊಳ್ಳಬೇಕು ಮತ್ತು ಬಿಸಿಲಿನ ಬೇಗೆಯಿಂದ ಮನುಷ್ಯ ಶಾಖಾಘಾತಕ್ಕೊಳಗಾದಾಗ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಈ ಕೆಳಕಂಡಂತೆ ತಿಳಿಸಿದ್ದಾರೆ.

ಏನು ಮಾಡಬೇಕು: ಸಡಿಲವಾದ, ತೆಳು ಬಣ್ಣದ ಹತ್ತಿಯ ಬಟ್ಟೆ ಧರಿಸಬೇಕು. ಕೈಗೆಟುಕುವಂತೆ ಕುಡಿಯುವ ನೀರನ್ನು ಇಟ್ಟುಕೊಳ್ಳಿ. ಆಗಾಗ್ಗೆ ನಿಧಾನವಾಗಿ ಧಾರಳವಾಗಿ ಉಪ್ಪು, ಸಕ್ಕರೆ ಮಿಶ್ರಿತ ನೀರನ್ನು ಕುಡಿಯಿರಿ. ಹಣ್ಣಿನ ರಸ, ಪಾನಕಗಳನ್ನು ಕುಡಿಯಿರಿ. ಹತ್ತಿಯ ನುಣುಪಾದ ಬಟ್ಟೆ, ಟಿಶ್ಯೂ ಕರವಸ್ತ್ರದಿಂದ ಬೆವರನ್ನು ಒರೆಸಿರಿ. ನೀರು, ಮಜ್ಜಿಗೆ, ಎಳೆನೀರು ಕುಡಿಯಬಹುದು.

ಬೆಚ್ಚಗಿನ, ಮಸಾಲೆ ರಹಿತ, ಶುದ್ಧ ಸಾತ್ವಿಕ ಆಹಾರ ಸೇವಿಸಬೇಕು. ಗಾಳಿಯಾಡುವಂತಹ ಪಾದರಕ್ಷೆ ಧರಿಸಿರಿ. ಮನೆಯಿಂದ ಹೊರಗಡೆ ಹೋಗುವಾಗ ಜೊತೆಯಲ್ಲಿ ತಪ್ಪದೇ ಶುದ್ಧ ಕುಡಿಯುವ ನೀರನ್ನು ತೆಗೆದುಕೊಂಡು ಹೋಗಬೇಕು ಎಂದು ಹೇಳಿದ್ದಾರೆ.

ವ್ಯಕ್ತಿ ತೊದಲು ಮಾತು ಅಥವಾ ಅರ್ಥರಹಿತವಾಗಿ ಬಡಬಡಿಸಿದ್ದಲ್ಲಿ, ಕೂಡಲೇ ನೆರಳಿನ ಪ್ರದೇಶಕ್ಕೆ ಸ್ಥಳಾಂತರಿಸಿರಿ. ಕೆಳಗೆ ಮಲಗಿಸಿ, ಕಾಲುಗಳನ್ನು ಮೇಲಕೆತ್ತಿ ಆರೈಕೆ ಮಾಡಿ. ಆತ/ ಆಕೆಯ ಹಣೆ, ಕತ್ತು, ಪಾದ ತೊಡೆಯ ಸಂದುಗಳನ್ನು ಒದ್ದೆ ಬಟ್ಟೆಯಿಂದ ಒರೆಸಿರಿ (ತಂಪಾದ ಅಥವಾ ಐಸ್ ನೀರಿನಿಂದ ಒರೆಸಬೇಡಿ) ಚರ್ಮ ಕೆಂಪಾದರೆ, ಬೆವರು ಕಡಿಮೆಯಾದರೆ, ದೇಹದ ಉಷ್ಣತೆ ಜಾಸ್ತಿಯಾದರೆ, ದೀರ್ಘವಾದ ತೀವ್ರ ಉಸಿರಾಟವಿದ್ದಲ್ಲಿ ತುರ್ತಾಗಿ ವೈದ್ಯರನ್ನು ಸಂಪರ್ಕಿಸಬೇಕು. ಇಲ್ಲವೇ 104ಕ್ಕೆ ಕರೆ ಮಾಡಬೇಕು.

ಬೇಸಿಗೆಯಲ್ಲಿ ಕಲುಷಿತ ನೀರಿನ ಸೇವನೆಯಿಂದ ಸಂಭಾವ್ಯ ವಾಂತಿ-ಬೇಧಿ ಪ್ರಕರಣಗಳು ಉಂಟಾಗುವ ಹಿನ್ನಲೆಯಲ್ಲಿ ಶುದ್ಧೀಕರಿಸಿದ ನೀರು ಅಥವಾ ನೀರು ಶುದ್ದೀಕರಣ ಘಟಕದ ನೀರನ್ನು ಕುಡಿಯಲು ಬಳಸಬೇಕು ಎಂದು ಅವರು ತಿಳಿಸಿದ್ದಾರೆ.

ಕೈಗಳನ್ನು ಸಾಬೂನು ಮತ್ತು ನೀರಿನಿಂದ 45 ಸೆಕೆಂಡ್‌ಗಳ ಕಾಲ ತೊಳೆದ ನಂತರ ಆಹಾರ ಸೇವಿಸಬೇಕು.

ನೀರಿನ ಸಂಗ್ರಹಣಗಳ ಮೇಲೆ ತಪ್ಪದೇ ಮುಚ್ಚಳ ಮುಚ್ಚಬೇಕು. ಮಲ, ಮೂತ್ರ ವಿಸರ್ಜನೆಗಾಗಿ ಶೌಚಾಲಯ ಬಳಸಬೇಕು. ಸುರಕ್ಷಿತ ಆಹಾರ ಮಾತ್ರ ಸೇವಿಸಿ, ಆದಷ್ಟು ಮನೆಯಲ್ಲಿ ತಯಾರಿಸಿದ ಆಹಾರಕ್ಕೆ ಆದ್ಯತೆ ನೀಡಿರಿ ಎಂದು ಅವರು ಮನವಿ ಮಾಡಿದ್ದಾರೆ.

ಏನು ಮಾಡಬಾರದು:

ಬಿಗಿಯಾದ, ಗಾಢ ಬಣ್ಣದ, ಸಿಂಥೆಟಿಕ್ ಬಟ್ಟೆ ಧರಿಸಬಾರದು. ಕುಷನ್‌ಯುಕ್ತ ಕುರ್ಚಿಯಲ್ಲಿ ಕೂಡಬಾರದು. ಸೋಡಾ ಇತ್ಯಾದಿ ಕಾರ್ಬೋನೇಟೆಡ್ ತಂಪು ಪಾನಿಯಗಳನ್ನು ಕುಡಿಯಬೇಡಿ (ಬಾಯಾರಿಕೆಯಾದಾಗ ಕಡ್ಡಾಯವಾಗಿ ನೀರು ಕುಡಿಯಬೇಕು). ಬೆವರನ್ನು ಒರೆಸಲು ಒರಟಾದ ಬಟ್ಟೆಯನ್ನು ಉಪಯೋಗಿಸಬೇಡಿ. ಕಾಫಿ, ಟೀ, ಅತಿ ಸಕ್ಕರೆ ಅಂಶವುಳ್ಳ ಪಾನೀಯ ಅತಿಯಾಗಿ ಸೇವಿಸಬಾರದು. ಬಿಸಿಯಾದ ಮಸಾಲೆಯುಕ್ತ ಆಹಾರ ತಿನ್ನಬಾರದು. ಮಾಂಸಹಾರ ಸೇವನೆ ಮತ್ತು ಮಧ್ಯಪಾನ ವರ್ಜಿಸಿಬೇಕು.

ಬಿಗಿಯಾದ ಗಾಳಿಯಾಡದ ಪಾದರಕ್ಷೆ ಅಥವಾ ಶೂ ಧರಿಸಬೇಡಿ. ಉಷ್ಣತೆಯಿಂದ ಸುಸ್ತಾದಾಗ ತುಂಬಾ ತಣ್ಣಗಿನ ಅಥವಾ ಶೀತಲೀಕರಿಸಿದ ನೀರಿನಿಂದ ಒರೆಸಿಕೊಳ್ಳಬೇಡಿ (ಇದರಿಂದ ದೇಹದ ಹೊರಪದರದಲ್ಲಿನ ರಕ್ತನಾಳಗಳು ಸಂಕುಚಿತಗೊಂಡು ದೇಹದ ಒಳಗಿನ ಉಷ್ಣತೆ ದೇಹದೊಳಗೆ ಬಂಧಿತವಾಗಿ ಅಂಗಾಂಗಗಳು ನಿಷ್ಕ್ರಿಯಗೊಂಡು ಹೆಚ್ಚಿನ ...ಯಾಗುವ ಸಂಭವವಿರುತ್ತದೆ).

ಬೇಸಿಗೆಯಲ್ಲಿ ಕಲುಷಿತ ನೀರಿನ ಸೇವನೆಯಿಂದ ಸಂಭಾವ್ಯ ...-ಬೇಧಿ ಪ್ರಕರಣಗಳು ಉಂಟಾಗುವ ಹಿನ್ನಲೆಯಲ್ಲಿ ಶುದ್ಧೀಕರಿಸದೇ ...ವ ನೀರನ್ನು ಮತ್ತು ಕೆರೆ, ಕುಂಟೆಗಳ ನೀರನ್ನು ನೇರವಾಗಿ ...ಯಬಾರದು. ಕೈಗಳನ್ನು ತೊಳೆದುಕೊಳ್ಳದೇ ಆಹಾರವನ್ನು ಸೇವಿಸಬೇಡಿ, ...ರ ಸಂಗ್ರಹಣಗಳ ಮೇಲೆ ತಪ್ಪದೇ ಮುಚ್ಚಳ ಮುಚ್ಚಬೇಕು. ಬಯಲು ...ಶಗಳಲ್ಲಿ ಮಲ, ಮೂತ್ರ ವಿಸರ್ಜನೆ ಮಾಡಬಾರದು. ರಸ್ತೆ ಬದಿ ...ಟ್ಟ ಆಹಾರ ಪದಾರ್ಥ ಮತ್ತು ಕತ್ತರಿಸಿಟ್ಟ ಹಣ್ಣುಗಳನ್ನು ತಿನ್ನಬಾರದು. ...ರಿಸಿದ ಆಹಾರವನ್ನು ಮುಚ್ಚಳದಿಂದ ಮುಚ್ಚಬೇಕು ಎಂದು ...ದ್ದಾರೆ.

...ಶಾಖಾಘಾತದ ಲಕ್ಷಣಗಳು:

...ಅತಿಹೆಚ್ಚು ಬಿಸಿಲಿನ ತಾಪಮಾನದಿಂದ ಮನುಷ್ಯನು ಶಾಖಾಘಾತಕ್ಕೆ ...ಗುವ ಸಂಭವವಿರುತ್ತದೆ. ಅದರಲ್ಲಿ ಮುಖ್ಯವಾಗಿ ಸಂಭ್ರಾಂತಿ, ಅಸಂಗತ ಮಾತು, ವ್ಯತ್ಯಸ್ಥ ಪ್ರಜ್ಞೆ ಶಾಖಾಘಾತದ ಲಕ್ಷಣಗಳಾಗಿವೆ.

ಶಾಖಾಘಾತಕ್ಕೆ ಚಿಕಿತ್ಸೆ: ಮನುಷ್ಯನು ಬಿಸಿಲಿನ ಬೇಗೆಯಿಂದ ಶಾಖಾಘಾತಕ್ಕೊಳಗದಾಗ ನೆರಳಿರುವೆಡೆಗೆ ಸ್ಥಳಾಂತರಿಸಬೇಕು. ವ್ಯಕ್ತಿಯ ವಸ್ತ್ರಗಳನ್ನು ಸಡಿಲಗೊಳಿಸಿ, ಅಂಗಾತ ಮಲಗಿಸಿ, ಕಾಲುಗಳನ್ನು ಎತ್ತರಿಸಿ, ಸಾಮಾನ್ಯ ನೀರಿನಿಂದ ದೇಹವನ್ನು ಒರೆಸಬೇಕು. ಇಲ್ಲವೇ ಹತ್ತಿರದ ವೈದ್ಯರನ್ನು ಕರೆಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕೊಪ್ಪಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಕಾರ್ಯಾಗಾರ ಹಾಗೂ ಸಂವಾದ ಕಾರ್ಯಕ್ರಮ: ಮಾಹಿತಿ ಹಕ್ಕು ಕಾಯ್ದೆ ಜನಪರ, ಪ್ರಬಲ ಕಾಯ್ದೆಯಾಗಿದೆ

ಇದ್ದು, ಆದ್ಯತೆ ಮೇರೆಗೆ ಸೋಮವಾರದಿಂದ ಶುಕ್ರವಾರ ರ್ಜಿಗಳನ್ನು ವಿಲೇವಾರಿ ಮಾಡಲಾಗುತ್ತಿದೆ ಎಂದು ಅವರು ತಿಳಿಸಿದರು.

ಕೊಪ್ಪಳ ಜಿಲ್ಲೆಯಲ್ಲಿ 764 ಪ್ರಕರಣಗಳು ಬಾಕಿ ಇವೆ. ಕಲ್ಯಾಣ ಕರ್ನಾಟಕದ ಜಿಲ್ಲೆಗಳಲ್ಲಿ ರಾಯಚೂರು ಜಿಲ್ಲೆಯಲ್ಲಿ ಅತಿ ಹೆಚ್ಚು ಮತ್ತು ಬೀದರ ಜಿಲ್ಲೆಯಲ್ಲಿ ಅತಿ ಕಡಿಮೆ ಪ್ರಕರಣಗಳು ಇವೆ. ಇದುವರೆಗೂ ದ್ವಿತೀಯ ಮೇಲ್ಮನವಿ ವಿಚಾರಣೆಗೆ ಅರ್ಜಿದಾರರು ಹಾಗೂ ಅಧಿಕಾರಿಗಳು ಬೆಂಗಳೂರಿಗೆ ಹೋಗಬೇಕಿತ್ತು. ಆದರೆ ಫೆಬ್ರವರಿಯಿಂದ ಆಯೋಗದ ಕಲಬುರಗಿ ಪೀಠದಲ್ಲಿ ದ್ವಿತೀಯ ಮೇಲ್ಮನವಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಕಲ್ಯಾಣ ಕರ್ನಾಟಕದ ಎಲ್ಲ 7 ಜಿಲ್ಲೆಗಳ ಜನರಿಗೆ ಇದರಿಂದ ಅನುಕೂಲವಾಗಲಿದೆ ಎಂದು ಅವರು ಹೇಳಿದರು.

ಕರ್ನಾಟಕ ರಾಜ್ಯ ಮಾಹಿತಿ ಆಯೋಗ ಬೆಂಗಳೂರು ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಡಾ. ಹರೀಶಕುಮಾರ ಅವರು ಮಾತನಾಡಿ, ಮಾಹಿತಿ ಹಕ್ಕು ಕಾಯ್ದೆಯು ಸ್ವತಂತ್ರ, ಭಾರತದಲ್ಲಿ ಅತ್ಯಂತ ಕ್ರಾಂತಿಕಾರಕ ಕಾಯ್ದೆಯಾಗಿದೆ. ಸರ್ಕಾರದ ಯೋಜನೆಗಳು, ಸೌಲಭ್ಯಗಳ ಹಿತಾಸಕ್ತಿಗೆ ಸಂಬಧಿಸಿದತೆ ಮಾಹಿತಿ ಪಡೆಯುವುದು ದೇಶದ ಪ್ರತಿಯೊಬ್ಬ ಪ್ರಜೆಗಳ ಮೂಲಭೂತ ಹಕ್ಕಾಗಿದೆ. ದೇಶದ ಶಾಸಕಾಂಗ, ಕಾರ್ಯಾಂಗ ಮತ್ತು ನ್ಯಾಯಾಂಗ ವ್ಯವಸ್ಥೆ ದಾರಿತಪ್ಪಿದಾಗ ಅಂತಿಮ ನಿರ್ಣಾಯಕರು ಜನರೇ ಆಗಿರುತ್ತಾರೆ. ಜನರಿಗಾಗಿ ತಂದ ಕಾಯ್ದೆ, ಕಾನೂನುಗಳ ಪಾಲಕರು ಅವರೇ ಆಗಿದ್ದಾರೆ. ಪ್ರಜಾಪ್ರಭುತ್ವ ಪ್ರಬಲವಾಗಬೇಕು. ಜನರಿಗೆ ಸರ್ಕಾರದ ಮಹಿತಿ ಲಭ್ಯವಾಗಬೇಕು ಎಂಬ ಉದ್ದೇಶದಿಂದ ನಮ್ಮ ದೇಶದಲ್ಲಿ 2005ರ ಅಕ್ಟೋಬರ್ 5 ರಂದು ಜಾರಿಗೆ ಬಂದ ಆರ್.ಟಿ.ಐ ಕಾಯ್ದೆಯನ್ನು ಅನುಷ್ಠಾನಗೊಳಿಸಿದ ಮೊಟ್ಟ ಮೊದಲ ರಾಜ್ಯ ನಮ್ಮ ಕರ್ನಾಟಕವಾಗಿದೆ ಎಂದರು.

ಮಾಹಿತಿ ಹಕ್ಕು ಕಾಯ್ದೆಯ ಬಗ್ಗೆ ಅಧಿಕಾರಿಗಳಲ್ಲಿ ಭಯದ ವಾತಾವರಣವಿದ್ದು, ಭಯ ಪಡುವ ಅವಶ್ಯಕತೆ ಇಲ್ಲ. ಈ ಕಾಯ್ದೆಯು ಬಹಳ ಸುಲಭ ಮತ್ತು ಸಂಕೀರ್ಣವಾಗಿದೆ. ಮೊದಲು ಅಧಿಕಾರಿಗಳಲ್ಲಿ ಆರ್.ಟಿ.ಐ ಕುರಿತು ಸ್ಪಷ್ಟ ಅರಿವಿರಬೇಕು. ಇದರ ಬಗ್ಗೆ ಯಾವುದೇ ಅಲಕ್ಷ್ಯ ಬೇಡ. ಸಾರ್ವಜನಿಕ ಮಾಹಿತಿ ಅಧಿಕಾರಿಗಳು ನಿಗದಿತ ಕಾಲವಧಿಯೊಳಗೆ ಸಾರ್ವಜನಿಕರಿಗೆ ಮಾಹಿತಿ ನೀಡಲು ಕ್ರಮ ವಹಿಸಬೇಕು. ಆರ್.ಟಿ.ಐ ಅಡಿ ಸ್ವೀಕೃತವಾಗುವ ಅರ್ಜಿಗಳ ಪೈಕಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್, ಕಂದಾಯ ಮತ್ತು ಲೋಕೋಪಯೋಗಿ ಇಲಾಖೆಗಳ ಅರ್ಜಿಗಳೇ ಹೆಚ್ಚಾಗಿವೆ. ಇದರಲ್ಲಿ ಶೇ.30 ರಷ್ಟು ಅರ್ಜಿಗಳು ಗ್ರಾಮ ಪಂಚಾಯಿತಿಗಳಿಗೆ ಸಂಬಧಿಸಿದ ಮಾಹಿತಿ ಒಳಗೊಂಡಿವೆ. ಇತ್ತೀಚಿಗೆ ಪೊಲೀಸ್ ಇಲಾಖೆಯಲ್ಲಿಯೂ ಅರ್ಜಿಗಳು ಸ್ವೀಕೃತವಾಗುತ್ತಿದ್ದು, ಮಾನವ ಹಕ್ಕುಗಳ ಉಲ್ಲಂಘನೆ ಸಂದರ್ಭದಲ್ಲಿ 24 ಗಂಟೆಯೊಳಗೆ ಮಾಹಿತಿ ನೀಡಬೇಕು. ಕಾಯ್ದೆಯನ್ನು ಸಮರ್ಪಕವಾಗಿ ಅನುಷ್ಠಾನ ಮಾಡುವ ಮೂಲಕ ದೇಶದ ಪ್ರಜಾಪ್ರಭುತ್ವ ವ್ಯವಸ್ಥೆಯನ್ನು ಮತ್ತಷ್ಟು ಗಟ್ಟಿಗೊಳಿಸಲು ಎಲ್ಲಾ ಅಧಿಕಾರಿಗಳು ಶ್ರಮಿಸಬೇಕು ಎಂದು ಹೇಳಿದರು.

ಕರ್ನಾಟಕ ರಾಜ್ಯ ಮಾಹಿತಿ ಆಯೋಗ ಬೆಂಗಳೂರು ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬದ್ರುದ್ದೀನ್ ಕೆ. ಅವರು ಮಾತನಾಡಿ, ಅಧಿಕಾರಿಗಳು ತಮ್ಮ ಸೇವಾವಧಿಯಲ್ಲಿ ಮಾಹಿತಿ ಹಕ್ಕು ಕಾಯ್ದೆಯನ್ನು ಸಮರ್ಪಕವಾಗಿ ನಿರ್ವಹಿಸಿದರೆ ಅದು ನಿವೃತ್ತಿ ನಂತರವೂ ನಿಮ್ಮ ಸಹಾಯಕ್ಕೆ ಬರುತ್ತದೆ. ಅಧಿಕಾರಿಗಳು ಆತ್ಮವಿಶ್ವಾಸದಿಂದಿರಬೇಕು. ಪಾರದರ್ಶಕ ಆಡಳಿತವಿದ್ದಾಗ ಆತ್ಮವಿಶ್ವಾಸ ಸಹಜವಾಗಿಯೇ ಬರುತ್ತದೆ. ಮಾಹಿತಿ ಹಕ್ಕು ಕಾಯ್ದೆಯನ್ನು ಸರಿಯಾಗಿ ಅರ್ಥೈಸಿಕೊಳ್ಳಿ. ಕೊಡಬಹುದಾದ ಹಾಗೂ ಕೊಡಲಾಗದ ಮಾಹಿತಿ ಯಾವುದು ಎಂಬುದನ್ನು ತಿಳಿದುಕೊಳ್ಳಿ. ಅರ್ಜಿ ಬಂದ ಕೂಡಲೇ ಗಾಬರಿಯಾಗುವ ಬದಲು ಅರ್ಜಿಯಲ್ಲಿನ ಮಾಹಿತಿ ನಿಮ್ಮಲ್ಲಿ ಲಭ್ಯವಿದೆಯೋ ಇಲ್ಲವೋ ಎಂಬುದನ್ನು ಪರಿಶೀಲಿಸಿ ಸೂಕ್ತ ಮಾಹಿತಿ ಅಥವಾ ಹಿಂಬರಹವನ್ನು ನೀಡಿ. ಮಾಹಿತಿ ನೀಡಲು 30 ದಿನಗಳ ಅವಧಿಯನ್ನು ನಿಗದಿಪಡಿಸಲಾಗಿದ್ದು, ಕೊನೆಯ ದಿನದವರೆಗೂ ಕಾಯದೆ, ಅರ್ಜಿಗಳನ್ನು ಬೇಗ ವಿಲೇವಾರಿ ಮಾಡಿ. ಇದರಿಂದ ಅನಗತ್ಯ ಒತ್ತಡ ತಪ್ಪುತ್ತದೆ. ಮಾಹಿತಿ ಹಕ್ಕಿಗೆ ಸಂಬಧಿಸಿದ ಯಾವುದೇ ಮಾಹಿತಿ ಅಥವಾ ವಿಷಯವನ್ನು ದಾಖಲೆ ಅಥವಾ ಪತ್ರ ಮುಖೇನ ನೀಡಿ. ಎಲ್ಲ ಇಲಾಖೆಗಳ ಸರ್ವಜನಿಕ ಮಾಹಿತಿ ಅಧಿಕಾರಿಗಳು ಇಲಾಖೆಗೆ ಸಂಬಧಿಸಿದ ಮಾಹಿತಿಯನ್ನು ಕಾಯ್ದೆಯ 4(1)(ಎ) ಮತ್ತು 4(1)(ಬಿ)ಯಲ್ಲಿ ವಿಂಗಡಿಸಿ, ಇಲಾಖೆಯ ವೆಬ್‌ಸೈಟಗೆ ಅಪ್ಲೋಡ್ ಮಾಡಿ. ಇದರಿಂದ ಶೇ.80 ರಷ್ಟು ಕೆಲಸ ಹಾಗೂ ಒತ್ತಡ ಕಡಿಮೆಯಾಗುತ್ತದೆ. ಮಾಹಿತಿ ಹಕ್ಕಿಗೆ ಸಂಬಧಿಸಿದ ಅರ್ಜಿ ಕುರಿತು ಯಾವುದೇ ಅಲಕ್ಷ್ಯ ಅಥವಾ ಅನಗತ್ಯ ವಿಳಂಬ ಮಾಡಬೇಡಿ. ಇಲಾಖೆಗಳ ಮೇಲಧಿಕಾರಿಗಳು ಪ್ರತಿ ಮೂರು ತಿಂಗಳಿಗೊಮ್ಮೆ ಅಧೀನ ಕಚೇರಿಯ ಪರಿಶೀಲನೆ ನಡೆಸಿ, ಯಾವುದೇ ಅರ್ಜಿ ಬಾಕಿ ಇರದಂತೆ ಖಚಿತಪಡಿಸಿಕೊಳ್ಳಿ ಎಂದು ಅವರು ಹೇಳಿದರು.

ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ಮಾತನಾಡಿ, ಮಾಹಿತಿ ಹಕ್ಕು ಕಾಯ್ದೆಯಿಂದ ಆಡಳಿತದಲ್ಲಿ ಪಾರದರ್ಶಕತೆ ಬರುವುದರ ಜೊತೆಗೆ ವ್ಯವಸ್ಥೆಯಲ್ಲಿನ ಲೋಪ-ದೋಷಗಳನ್ನು ಸರಿಪಡಿಸಲು ಅನುಕೂಲವಾಗಿದೆ. ಅಧಿಕಾರಿಗಳು ಮಾಹಿತಿ ಹಕ್ಕಿನ ಕುರಿತು ಸರಿಯಾಗಿ ತಿಳಿದುಕೊಳ್ಳಬೇಕು. ತಮಗೆ ಮಾಹಿತಿ ಕೊರತೆ ಇದ್ದರೆ ಈ ಕುರಿತು ಮಾಹಿತಿ ಒಳಗೊಂಡ ಪುಸ್ತಕಗಳನ್ನು ಖರೀದಿಸಿಕೊಂಡು ಓದಿ ತಿಳಿದುಕೊಳ್ಳಬೇಕು. ತಮ್ಮ ಕಛೇರಿಯಲ್ಲಿ ಮಾಹಿತಿ ಹಕ್ಕಿಗೆ ಸಂಬಧಿಸಿದ ಯಾವುದೇ ಅರ್ಜಿಗಳು ಬಂದಿದ್ದರೆ ಅವುಗಳನ್ನು ಆದಷ್ಟು ಬೇಗನೆ ವಿಲೇವಾರಿ ಮಾಡಬೇಕು. ಎಲ್ಲಾ ಕಛೇರಿಗಳಲ್ಲಿ ಸಾರ್ವಜನಿಕ ಮಾಹಿತಿ ಅಧಿಕಾರಿ ಮತ್ತು ಪ್ರಥಮ ಮೇಲ್ಮನವಿ ಪ್ರಾಧಿಕಾರಿ ಯಾರು ಎನ್ನುವ ಕುರಿತು ಬೋರ್ಡಗಳನ್ನು ತಮ್ಮ ಕಚೇರಿಗಳಲ್ಲಿ ಕಡ್ಡಾಯವಾಗಿ ಹಾಕಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ಧಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಜಿ.ಪಂ ಉಪಕಾರ್ಯದರ್ಶಿ ಟಿ.ಕೃಷ್ಣಮೂರ್ತಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಕರ್ನಾಟಕ ರಾಜ್ಯ ಮಾಹಿತಿ ಆಯೋಗದ ರಾಜ್ಯ ಮಾಹಿತಿ ಆಯುಕ್ತರು ಸಾರ್ವಜನಿಕ ಮಾಹಿತಿ ಅಧಿಕಾರಿಗಳೊಂದಿಗೆ ಮಾಹಿತಿ ಹಕ್ಕು ಕಾಯ್ದೆಯ ಕುರಿತು ಸಂವಾದ ನಡೆಸಿದರು. ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಚಾರ್ಯರಾದ ಕೃಷ್ಣಮೂರ್ತಿ ದೇಸಾಯಿ ಅವರು ಕಾರ್ಯಕ್ರಮ ನಿರೂಪಿಸಿದರು. ಕಾರ್ಯಾಗಾರದಲ್ಲಿ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಸಾರ್ವಜನಿಕ ಮಾಹಿತಿ ಅಧಿಕಾರಿಗಳು ಭಾಗವಹಿಸಿದ್ದರು.

ಚಿತ್ತೂರು ಜಿಲ್ಲೆಯಲ್ಲಿ ಹಕ್ಕಿ ಜ್ವರ ಪತ್ತೆ: ಕೊಪ್ಪಳ ಜಿಲ್ಲೆಯಲ್ಲಿ ತೀವ್ರ ನಿಗಾ ವಹಿಸಲು ಸೂಚನೆ ಕೋಳಿ ಫಾರಂ ಮಾಲೀಕರು , ಅಧಿಕಾರಿಗಳು ಎಚ್ಚರಿಕೆ ವಹಿಸಿ:ಡಿಸಿ



ಕೊಪ್ಪಳ, ಫೆ.21-

ಪಕ್ಕದ ಆಂಧ್ರ ಪ್ರದೇಶದ ಚಿತ್ತೂರು ಜಿಲ್ಲೆಯಲ್ಲಿ ಕೋಳಿ ಶೀತ ಜ್ವರ (ಹಕ್ಕಿ ಜ್ವರ) ಪ್ರಕರಣ ಧೃಡಪಟ್ಟಿರುವ ಹಿನ್ನೆಲೆಯಲ್ಲಿ, ಕೊಪ್ಪಳ ಜಿಲ್ಲೆಯಲ್ಲಿ ಮುಂಜಾಗ್ರತಾ ಕ್ರಮ ಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಿ. ಕೋಳಿ ಫಾರಂ ಮಾಲೀಕರು ಹಾಗೂ ಸಂಬಂಧಿಸಿದ ಅಧಿಕಾರಿಗಳು ಎಚ್ಚರಿಕೆಯಿಂದ ಕಾರ್ಯನಿರ್ವ ಹಿಸಿ ಎಂದು ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ್ ಅವರು ಸೂಚನೆ ನೀಡಿದರು.

ಶುಕ್ರವಾರದಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯಿಂದ ಕೋಳಿ ಶೀತ ಜ್ವರದ ರೋಗೋದ್ರೇಕದ ಕುರಿತು ಮುಂಜಾಗ್ರತೆ ವಹಿಸುವ ಕುರಿತು ಆಯೋಜಿಸಲಾಗಿದ್ದ ಜಿಲ್ಲಾ ಮಟ್ಟದ ಪ್ರಾಣಿ ಜನ್ಯ ರೋಗಗಳ ತುರ್ತು ನಿರ್ವಹಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾ ಡಿದರು.

ಕೊಪ್ಪಳ ಜಿಲ್ಲೆಯಲ್ಲಿ ಒಟ್ಟು 25 ಮೊಟ್ಟೆ ಉತ್ಪಾದನಾ ಕೋಳಿ ಫಾರಂಗಳು ಹಾಗೂ 14 ಮಾಂಸ ಉತ್ಪಾದನಾ ಕೋಳಿ ಫಾರಂಗಳು ಕಾರ್ಯನಿರ್ವಹಿಸುತ್ತಿದ್ದು, ಕೋಳಿ ಶೀತ ಜ್ವರ ಹರಡುವಿಕೆ ತಡೆಯಲು ತೀವ್ರ ನಿಗಾವಹಿಸು ವುದು ಅತ್ಯಗತ್ಯವಾಗಿದೆ. ಪಕ್ಕದ ರಾಜ್ಯದಲ್ಲಿ ರೋಗೋದ್ರೇಕ ಕಂಡುಬಂದಿರುವುದರಿಂದ, ಜಿಲ್ಲೆಯ ಪಶುವೈದ್ಯಕೀಯ ಇಲಾಖೆ, ಸ್ಥಳೀಯ ಸಂಸ್ಥೆಗಳು ಹಾಗೂ ಕೋಳಿ ಫಾರಂ ಮಾಲೀಕರು ಪೂರ್ಣ ಎಚ್ಚರಿಕೆಯಿಂದ ಕಾರ್ಯ ನಿರ್ವಹಿಸಬೇಕು ಎಂದು ಸೂಚಿಸಿದರು.

ಕೋಳಿಗಳಲ್ಲಿ ಅಸಹಜ ಸಾವಿನ ಪ್ರಕರ'ಣಗಳು ಕಂಡುಬಂದರೆ ತಕ್ಷಣವೇ ಹತ್ತಿರದ ಪಶುವೈದ್ಯಾಧಿಕಾರಿಗಳಿಗೆ ಮಾಹಿತಿ ನೀಡಬೇಕು. ರೋಗಪೀಡಿತ ಕೋಳಿಗಳನ್ನು ಆರೋಗ್ಯಕರ ಕೋಳಿಗಳಿಂದ ಬೇರ್ಪಡಿ ಸುವುದು ಮತ್ತು ಸತ್ತ ಕೋಳಿಗಳನ್ನು ಸುರಕ್ಷಿತ ವಾಗಿ ಹೂತು ಹಾಕುವ ಕ್ರಮಗಳನ್ನು ಅನುಸ ರಿಸುವುದು ಕಡ್ಡಾಯವಾಗಿದೆ. ಜನವಸತಿ ಪ್ರದೇಶದಿಂದ ಕೋಳಿ ಫಾರಂಗಳನ್ನು ದೂರವಿಡುವುದು ಹಾಗೂ ಜನರು ಕೋಳಿ ಮತ್ತು ಅದರ ಉತ್ಪನ್ನಗಳನ್ನು ಮುಟ್ಟಿದ ನಂತರ ಸಾಬೂನಿನಿಂದ ಕೈ ತೊಳೆಯುವುದು ಅತ್ಯಂತ ಮುಖ್ಯವಾಗಿದೆ ಎಂದು ಅವರು ಹೇಳಿದರು.

ಕೋಳಿ ಮಾಂಸ ಮತ್ತು ಮೊಟ್ಟೆಗಳನ್ನು ಕನಿಷ್ಠ 70 ಡಿಗ್ರಿ ಸೆಂಟಿಗ್ರೇಡ್ ಉಷ್ಣಾಂಶದಲ್ಲಿ ಹತ್ತು ನಿಮಿಷಗಳ ಕಾಲ ಚೆನ್ನಾಗಿ ಬೇಯಿಸಿ ಸೇವಿಸುವುದರಿಂದ ಯಾವುದೇ ಸೋಂಕಿನ ಅಪಾಯ ತಪ್ಪಿಸಬಹುದು. ಸಾರ್ವಜನಿಕರು ಯಾವುದೇ ರೀತಿಯ ಆತಂಕಕ್ಕೊಳಗಾಗದೆ ಮುಂಜಾಗ್ರತಾ ಕ್ರಮಗಳನ್ನು ಪಾಲಿಸುವಂತೆ ಅವರು ಮನವಿ ಮಾಡಿದರು.

ಕೋಳಿ ಫಾರಂ ಮಾಲೀಕರಿಗೆ ವಿಶೇಷ ಸೂಚನೆ ನೀಡಿದ ಜಿಲ್ಲಾಧಿಕಾರಿಗಳು, ಕೋಳಿ ಗಳಲ್ಲಿ ರೋಗ ಲಕ್ಷಣಗಳು ಕಂಡುಬಂದರೆ ಅಥವಾ ಹೆಚ್ಚಿನ ಸಂಖ್ಯೆಯಲ್ಲಿ ಸಾವಿನ ಪ್ರಕರಣಗಳು ಸಂಭವಿಸಿದರೆ ತಕ್ಷಣವೇ ಪಶುವೈದ್ಯ ಇಲಾಖೆಗೆ ಮಾಹಿತಿ ನೀಡಬೇಕು. ಫಾರಂ ಪ್ರದೇಶಕ್ಕೆ ವಲಸೆ ಪಕ್ಷಿಗಳು ಪ್ರವೇಶಿಸದಂತೆ ಕ್ರಮ ಕೈಗೊಳ್ಳಬೇಕು ಮತ್ತು ಫಾರಂ ಕೆಲಸಗಾರರಲ್ಲಿ ರೋಗದ ಬಗ್ಗೆ ಅರಿವು ಮೂಡಿಸಬೇಕು ಎಂದು ಹೇಳಿದರು.

ಗ್ರಾಮಗಳಲ್ಲಿ ಕೋಳಿಗಳು ಅಥವಾ ವಲಸೆ ಪಕ್ಷಿಗಳು ಅಸಹಜವಾಗಿ ಸತ್ತರೆ ತಕ್ಷಣವೇ ಪಶುವೈದ್ಯ ಇಲಾಖೆಗೆ ಮಾಹಿತಿ ನೀಡಬೇಕು. ಕೆರೆ, ಕಟ್ಟೆ, ನದಿ ಹಾಗೂ ನೀರಿನ ತೊರೆಗಳಲ್ಲಿ ಸತ್ತ ಪಕ್ಷಿಗಳು ಕಂಡುಬಂದರೆ ಕೂಡಲೇ ವರದಿ ಮಾಡಬೇಕು ಎಂದು ಅವರು ತಿಳಿಸಿದರು. ಗ್ರಾಮ ಪ್ರತಿನಿಧಿಗಳು ಮತ್ತು ಸಾರ್ವಜನಿಕರು ಈ ಬಗ್ಗೆ ಜಾಗೃತರಾಗಿದ್ದು, ರೋಗ ನಿಯಂತ್ರಣಕ್ಕೆ ಸಹಕರಿಸಬೇಕು ಎಂದು ಕರೆ ನೀಡಿದರು.

ಹಕ್ಕಿ ಜ್ವರ ಅನುಮಾನ ಉಂಟಾದಲ್ಲಿ 24 ಗಂಟೆಗಳೊಳಗೆ ಪಶುವೈದ್ಯರ ತಂಡಗಳನ್ನು ರಚಿಸಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು. ಅಗತ್ಯವಿದ್ದಲ್ಲಿ ಹಿಕ್ಕೆ, ರಕ್ತ ಹಾಗೂ ಸತ್ತ ಕೋಳಿಗಳ ಮಾದರಿಗಳನ್ನು ಸಂಗ್ರಹಿಸಿ ಭೋಪಾಲ್‌ನ ರಾಷ್ಟ್ರೀಯ ಉನ್ನತ ಭದ್ರತಾ ಪ್ರಾಣಿ ರೋಗ ಸಂಶೋಧನಾ ಸಂಸ್ಥೆಗೆ ಕಳುಹಿಸಿ ಪರೀಕ್ಷೆ ನಡೆಸಲಾಗುವುದು ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್.ಅರಸಿದ್ಧಿ, ಡಿಎಫ್‌ಓ ನಿರ್ಮಲಾ, ಕೊಪ್ಪಳ ಪಶು ಪಾಲನಾ ಮತ್ತು ಪಶು ವೈದ್ಯ ಸೇವಾ ಇಲಾಖೆಯ ಉಪನಿರ್ದೇಶಕರು(ಆಡಳಿತ)ಡಾ. ಪಿ.ಎಂ.ಮಲ್ಲಯ್ಯ,

ಕೊಪ್ಪಳ ಪಶು ಪಾಲನಾ ಮತ್ತು ಪಶು ವ್ಯದ್ಯ ಸೇವಾ ಇಲಾಖೆಯ ಉಪನಿರ್ದೇಶಕರು (ಪಾಲಿಕ್ಲಿ ನಿಕ)ಡಾ. ಶರಣಬಸಪ್ಪ ರೋಣ, ಕಾರಟಗಿ ಪಶು ಚಿಕಿತ್ಸಾಲಯ ಬೆನ್ನೂರ ಪಶು ವೈದ್ಯಾ ಧಿಕಾರಿ ಡಾ.ಲಕ್ಮಣ ನಾಯ್ಕ, ಯಲಬುರ್ಗಾ ಮುಖ್ಯ ಪಶು ವೈದ್ಯಾಧಿಕಾರಿ(ಆಡಳಿತ) ಡಾ. ಪ್ರಕಾಶ ಚೂರಿ ಹಾಗೂ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಮಿತಿಯ ಸದಸ್ಯರುಗಳು ಮತ್ತು ಕೊಪ್ಪಳ ಜಿಲ್ಲೆಯ ಕೋಳಿ ಫಾರಂಗಳ ಮಾಲೀಕರು ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ನ್ಯಾಯಾಧೀಶರು ಲಿಂಗ ಸಂವೇದನೆ ಕಲಿಯಬೇಕಾದ ತುರ್ತು!



ನ್ಯಾಯದ ಬದ್ಧತೆಯು ತಾಂತ್ರಿಕ ನಿಷ್ಠೆಯ ಮೇಲೆ ಮಾತ್ರ ನಿಂತಿಲ್ಲ, ಬದಲಾಗಿ ಅದರ ಎಲ್ಲ ಸಂಕೀರ್ಣತೆಯನ್ನೂ ಗುರುತಿಸುವ ಇಚ್ಛಾಶಕ್ತಿಯ ಮೇಲೆ ನಿಂತಿದೆ. ಇದು ಕೇವಲ ಕಾನೂನು ಜ್ಞಾನದ ಮೇಲೆ ಅಲ್ಲ, ಮಾನವೀಯತೆ, ಸಮಾನತೆ ಹಾಗೂ ಸಂತ್ರಸ್ತರ ಮಾನಸಿಕ ಸ್ಥಿತಿಯನ್ನು ಅರ್ಥಮಾಡಿಕೊಳ್ಳುವ ಸಾಮರ್ಥ್ಯವನ್ನು ಅವಲಂಬಿಸಿದೆ.

2004ರಲ್ಲಿ ನಡೆದ ಅತ್ಯಾಚಾರ ಪ್ರಕರಣವನ್ನು ಅತ್ಯಾಚಾರಕ್ಕೆ ಯತ್ನ ಪ್ರಕರಣವೆಂದು ಛತ್ತೀಸ್‌ಗಢ ಹೈಕೋರ್ಟ್ ಬದಲಾಯಿಸಿದೆ. ಸಂತ್ರಸ್ತೆಯ ಕನ್ಯಾಪೊರೆ ಹರಿಯದಿರುವುದು, ಆಕೆಯ ಜನನಾಂಗದ ಒಳಗಲ್ಲದೆ, ಹೊರಗೆ ವೀರ್ಯ ಸ್ಖಲನ ಮಾಡುವುದು ಅತ್ಯಾಚಾರಕ್ಕೆ ಯತ್ನಿಸಿದ ಪ್ರಕರಣವೇ ಹೊರತು, ನಿಜವಾದ ಅತ್ಯಾಚಾರವಲ್ಲ ಎಂದು ಹೈಕೋರ್ಟ್ ನ್ಯಾಯಮೂರ್ತಿ ನರೇಂದ್ರ ಕುಮಾರ್ ವ್ಯಾಸ್ ಅವರ ಪೀಠ ತೀರ್ಪಿತ್ತಿದೆ. ಅಪರಾಧಿಗೆ ಅತ್ಯಾಚಾರ ಪ್ರಕರಣದಲ್ಲಿ ವಿಧಿಸಲಾಗಿದ್ದ 7 ವರ್ಷಗಳ ಶಿಕ್ಷೆಯನ್ನು, ಅತ್ಯಾಚಾರಕ್ಕೆ ಯತ್ನವೆಂದು ಹೇಳಿ, ಶಿಕ್ಷೆಯನ್ನು ಮೂರೂವರೆ ವರ್ಷಕ್ಕೆ ಕಡಿತಗೊಳಿಸಿದೆ.

ಒಳನುಗ್ಗುವಿಕೆಯನ್ನು ಕಾರಣವಾಗಿಟ್ಟುಕೊಂಡು ಅತ್ಯಾಚಾರ ಮತ್ತು ಅಪರಾಧದ ವ್ಯಾಖ್ಯಾನವನ್ನೇ ಬದಲಿಸಿದ ಈ ತೀರ್ಪು ಭಾರತದ ನ್ಯಾಯಶಾಸ್ತ್ರವನ್ನು ಅಕ್ಷರಶಃ ಆಘಾತಗೊಳಿಸಿದೆ. ಹಲವು ದಶಕಗಳಿಂದ ಅತ್ಯಾಚಾರ ಪ್ರಕರಣಗಳಲ್ಲಿ ನಿಧಾನಗತಿ ಮತ್ತು ಕಷ್ಟದಿಂದ ಸಾಧಿಸಿದ್ದ ನ್ಯಾಯದ ಹಾದಿಯ ಪ್ರಗತಿಗೆ ಹಿನ್ನಡೆಯುಂಟುಮಾಡಿದೆ.

ಈ ಹಿಂದೆ ಇದ್ದ ಮತ್ತು ಈಗ ಬಿಎನ್‌ಎಸ್‌ಗೆ ಬದಲಾದ ಭಾರತೀಯ ದಂಡ ಸಂಹಿತೆಯ ಸೆಕ್ಷನ್ 375 ಅಡಿಯಲ್ಲಿ ಅತ್ಯಾಚಾರದ ವ್ಯಾಖ್ಯಾನವನ್ನು ಛತ್ತೀಸ್‌ಗಢ ಹೈಕೋರ್ಟ್ ತೀರ್ಪು ಮತ್ತೆ ಸಂಕುಚಿತಗೊಳಿಸಿದೆ. ಈ ಸೆಕ್ಷನ್‌ಗೆ 2013ರಲ್ಲಿ ತರಲಾದ ತಿದ್ದುಪಡಿಗಳಿಗೂ ಮೊದಲು ಇದ್ದ ಕಾನೂನನ್ನು ಹೈಕೋರ್ಟ್ ಅನ್ವಯಿಸಿದೆ.

2012ರ ಡಿಸೆಂಬರ್‌ನಲ್ಲಿ ದೆಹಲಿಯಲ್ಲಿ ನಡೆದ ಭಯಾನಕ ನಿರ್ಭಯಾ ಸಾಮೂಹಿಕ ಅತ್ಯಾಚಾರ ಕೃತ್ಯ ಮತ್ತು ವಿಕೃತಿ ಮೆರೆದಿದ್ದ ಕಾಮಪಿಪಾಸುಗಳ ವಿರುದ್ಧ ದೇಶಾದ್ಯಂತ ಭುಗಿಲೆದ್ದ ಪ್ರತಿಭಟನೆಗಳ ನಂತರ, ನ್ಯಾಯಮೂರ್ತಿ ಜೆ ಎಸ್ ವರ್ಮಾ ಸಮಿತಿಯು ಅತ್ಯಾಚಾರದ ವ್ಯಾಖ್ಯಾನವನ್ನು ಮರುರೂಪಿಸಲು ಶಿಫಾರಸು ಮಾಡಿತ್ತು. ಆ ಶಿಫಾರಸುಗಳ ಆಧಾರದ ಮೇಲೆ ಸಾರ್ವಜನಿಕ ಮತ್ತು ಕಾನೂನು ತಿಳಿವಳಿಕೆಯನ್ನು ಮರುರೂಪಿಸಲಾಯಿತು. ಕ್ರಿಮಿನಲ್ ಕಾನೂನು (ತಿದ್ದುಪಡಿ) ಕಾಯ್ದೆ-2013ರ ಅಡಿಯಲ್ಲಿ, ಮಹಿಳೆಯ ಜನನಾಂಗಕ್ಕೆ ಶಿಶ್ನವಲ್ಲದೆ ಬೇರೆ ಯಾವುದೇ ವಸ್ತು ಅಥವಾ ಬೆರಳು ಸೇರಿದಂತೆ ದೇಹದ ಅಂಗವನ್ನು ಬಲವಂತವಾಗಿ ಹಾಕುವುದು ಕೂಡ ಅತ್ಯಾಚಾರವೇ ಆಗಿದೆ. ಮಹಿಳೆಯು ದೈಹಿಕವಾಗಿ ಪ್ರತಿರೋಧ ತೋರಲಿಲ್ಲ ಎಂಬ ಕಾರಣಕ್ಕೆ ಅದನ್ನು ಸಮ್ಮತಿ ಎಂದು ಪರಿಗಣಿಸಲೂ ಸಾಧ್ಯವಿಲ್ಲ ಎಂದು ಸ್ಪಷ್ಟವಾಗಿ ಹೇಳಲಾಗಿದೆ. ಆದರೆ, ಈ ವ್ಯಾಖ್ಯಾನಗಳನ್ನು ಕಡೆಗಣಿಸಿರುವ ಅಥವಾ ಮರೆತಿರುವ ಛತ್ತೀಸ್‌ಗಢ ಹೈಕೋರ್ಟ್, ಹಳತಾದ ವ್ಯಾಖ್ಯಾನಗಳನ್ನೇ ಉಲ್ಲೇಖಿಸಿ, ಕೃತ್ಯದಲ್ಲಿ ಕುತರ್ಕ ಹುಡುಕಿ ಪ್ರಕರಣವನ್ನು ತಲೆಕೆಳಗಾಗಿ ವ್ಯಾಖ್ಯಾನಿಸಿದೆ.

ಈ ತರ್ಕವು ನ್ಯಾಯಾಧೀಶರಲ್ಲಿರುವ ಲಿಂಗ ಸೂಕ್ಷ್ಮತೆ ಮತ್ತು ಲಿಂಗಾಧಾರಿತ ದೌರ್ಜನ್ಯಗಳ ವಿಚಾರದಲ್ಲಿನ ಸಂವೇದನೆಯ ಕೊರತೆಯನ್ನು ಪ್ರತಿಬಿಂಬಿಸುತ್ತದೆ. ನ್ಯಾಯಾಧೀಶರು, ಇಂತಹ ಅಸೂಕ್ಷ್ಮತೆಯಿಂದ ತೀರ್ಪು ನೀಡಿರುವುದು ಇದೇ ಮೊದಲೇನೂ ಅಲ್ಲ.

ಇತ್ತೀಚೆಗೆ, ಅಲಹಾಬಾದ್ ಹೈಕೋರ್ಟ್ ಕೂಡ, ಮಹಿಳೆಯರ ಸ್ತನಗಳನ್ನು ಹಿಡಿಯುವುದು ಮತ್ತು ಪೈಜಾಮದ ಲಾಡಿಯನ್ನು ಎಳೆಯುವುದು/ಬಿಚ್ಚುವುದು ಅತ್ಯಾಚಾರಕ್ಕೆ ಯತ್ನವಲ್ಲ ಎಂದು ಅವಿವೇಕದ ತೀರ್ಪು ನೀಡಿತು. ಈ ತೀರ್ಪನ್ನು ಅತ್ಯಂತ ಆಘಾತಕಾರಿ ಎಂದು ಬಣ್ಣಿಸಿದ ಸುಪ್ರೀಂ ಕೋರ್ಟ್, ತೀರ್ಪನ್ನು ರದ್ದುಗೊಳಿಸಿತು.

ಇದೇ ಅಲಹಾಬಾದ್ ಹೈಕೋರ್ಟ್, 2025ರ ಏಪ್ರಿಲ್‌ನಲ್ಲಿ, ವಿದ್ಯಾರ್ಥಿನಿಯ ಅತ್ಯಾಚಾರ ಪ್ರಕರಣದಲ್ಲಿ ಸಂತ್ರಸ್ತೆಯನ್ನೇ ದೂಷಿಸಿತು. ಸಂತ್ರಸ್ತೆಯು ಎಂಎ ವಿದ್ಯಾರ್ಥಿನಿ ಆಗಿರುವುದರಿಂದ, ಆಕೆ ತನ್ನ ನಲ್ಲಿ ಹೇಳಿರುವ ಕ್ರಿಯೆಯ ನೈತಿಕತೆ ಮತ್ತು ಮಹತ್ವವನ್ನು ಅರ್ಥಮಾಡಿಕೊಳ್ಳಲು ಸಮರ್ಥಳಾಗಿದ್ದಳು. ಆಕೆ ಮಾಡುತ್ತಿರುವ ಆರೋಪಗಳನ್ನು ಸತ್ಯವೆಂದು ಒಪ್ಪಿಕೊಂಡರೂ ಸಹ, ಆಕೆ ತಾನೇ ತೊಂದರೆಗೆ ಆಹ್ವಾನ ನೀಡಿದ್ದಾಳೆ. ಆದ್ದರಿಂದ, ಆಕೆಯೇ ಪ್ರಕರಣದ ಜವಾಬ್ದಾರಿ ವಹಿಸಬೇಕು ಎಂದು ಅಸೂಕ್ಷ್ಮತೆ ಮೆರೆಯಿತು. ಇದನ್ನೂ ಸುಪ್ರೀಂ ಕೋರ್ಟ್, ವಿಕಾರ/ವಿಕೃತ ಮಾತುಗಳು ಎಂದು ಜರಿಯಿತು.

2017ರಲ್ಲಿ, ಅತ್ಯಾಚಾರ ಪ್ರಕರಣವೊಂದರಲ್ಲಿ ದೆಹಲಿ ಹೈಕೋರ್ಟ್, ಮಹಿಳೆಯರ ವರ್ತನೆಯಲ್ಲಿ ದುರ್ಬಲತೆ ಇಲ್ಲವೆಂದಿದ್ದರೆ, ಆಕೆ ಕೃತ್ಯಕ್ಕೆ ಸಮ್ಮತಿಸಿದ್ದಾಳೆ ಎಂದರ್ಥ ಎಂದಿತು. ಆರೋಪಿಯನ್ನು ನಿರ್ದೋಷಿಯೆಂದು ಘೋಷಿಸಿತು. ಅಂತೆಯೇ, 2021ರಲ್ಲಿ ಪೋಕ್ಸೋ ಪ್ರಕರಣದ ವಿಚಾರಣೆ ನಡೆಸಿದ್ದ ಬಾಂಬೆ ಹೈಕೋರ್ಟ್, ಮೈಗೆ ಮೈ ಸೋಕದಿದ್ದರೆ ( ) ಅದು ಅಪರಾಧವಲ್ಲ ಎಂದು ತನ್ನ ಕುರುಡನ್ನು ಪ್ರದರ್ಶಿಸಿತು. ಈ ತೀರ್ಪನ್ನೂ ಸುಪ್ರೀಂ ಕೋರ್ಟ್ ರದ್ದುಗೊಳಿಸಿತು. ಇನ್ನೂ, ಕೆಲವು ನ್ಯಾಯಾಲಯಗಳು ಅತ್ಯಾಚಾರಗಳಿಗೆ ಸಂತ್ರಸ್ತೆಯರ ವರ್ತನೆ, ಉಡುಪು, ಸಮಯಗಳೂ ಕಾರಣವೆಂದು ಬಲಿಪಶುಗಳನ್ನೇ ಅಪರಾಧಿ ಸ್ಥಾನದಲ್ಲಿ ನಿಲ್ಲಿಸಿರುವ ಉದಾಹರಣೆಗಳೂ ಇವೆ.

ಭಾರತದಲ್ಲಿ ಲಿಂಗ ನ್ಯಾಯದ ವ್ಯಾಪ್ತಿಯು ಎಂದಿಗೂ ಸಮನಾಗಿರಲಿಲ್ಲ. ಸಂತ್ರಸ್ತೆಯರನ್ನು ಪೊಲೀಸರು, ನ್ಯಾಯವಾದಿಗಳು ಹಾಗೂ ನ್ಯಾಯಮೂರ್ತಿಗಳು ನೋಡುವ, ಪರಿಶೀಲಿಸುವ, ವಿಚಾರಿಸುವ ರೀತಿಯೇ ಹಲವು ಸಂದರ್ಭಗಳಲ್ಲಿ ಆಘಾತಕಾರಿಯಾಗಿರುತ್ತವೆ. ಹಲವು ಸಂದರ್ಭಗಳಲ್ಲಿ, ಸಂತ್ರಸ್ತೆಯರನ್ನೇ ನೈತಿಕತೆಯ ತೀರ್ಪಿಗೆ ಗುರಿಯಾಗಿಸಲು, ಪ್ರಕರಣದಲ್ಲಿ ಕೂದಲು ಸೀಳುವ ತಾಂತ್ರಿಕತೆಗೆ ಅಂಟಿಕೊಳ್ಳುವುದೂ ಇದೆ. ಇದೆಲ್ಲವೂ, ಮೊಂಡುತನದಿಂದ ಬೆಳೆದುಬಂದಿರುವ ಪಿತೃಪ್ರಧಾನ ವ್ಯವಸ್ಥೆಯ ಬಳುವಳಿಗಳು.

ಆದ್ದರಿಂದಲೇ, ಲೈಂಗಿಕ ಹಿಂಸಾಚಾರವು ಅನೇಕ ಮುಖಗಳನ್ನು ಧರಿಸಿ, ಸಮಾಜದೊಳಗೆ ರಾಜಾರೋಷವಾಗಿ ಮೆರೆದಿದೆ. ಅತ್ಯಾಚಾರ ಕೃತ್ಯಗಳ ಸಂಖ್ಯೆ ಹೆಚ್ಚುತ್ತಲೇ ಇದೆ. ಕಳೆದ ಐದಾರು ವರ್ಷಗಳಲ್ಲಿ ಪ್ರತಿ ವರ್ಷವೂ 30,000ಕ್ಕಿಂತ ಹೆಚ್ಚು ಅತ್ಯಾಚಾರ ಮತ್ತು 4 ಲಕ್ಷಕ್ಕಿಂತ ಹೆಚ್ಚು ಮಹಿಳಾ ದೌರ್ಜನ್ಯದ ಪ್ರಕರಣಗಳು ದಾಖಲಾಗಿವೆ. ಆದರೆ, ದಂಡನೆಯ ಪ್ರಮಾಣವು 27%ಕ್ಕಿಂತ ಕಡಿಮೆ ಇದೆ.

ಮಹಿಳೆಯರ ಮೇಲಿನ ದೌರ್ಜನ್ಯಗಳು ಹೆಚ್ಚುತ್ತಿರುವಾಗ, ಅವುಗಳನ್ನು ತಡೆಯಲು ಮತ್ತು ಸಂತ್ರಸ್ತೆಯರಿಗೆ ನ್ಯಾಯ ಒದಗಿಸಬೇಕೆಂದರೆ, ನ್ಯಾಯದಾನ ಮಾಡುವ ಸ್ಥಾನದಲ್ಲಿರುವವರಲ್ಲಿ ಲಿಂಗ ಸಂವೇದನೆ ಮತ್ತು ಸೂಕ್ಷ್ಮತೆ ಬೆಳೆಸಿಕೊಳ್ಳುವುದು ಅತ್ಯಂತ ಮಹತ್ವದ ಅಂಶಗಳಾಗಿವೆ. ನ್ಯಾಯದ ಬದ್ಧತೆಯು ತಾಂತ್ರಿಕ ನಿಷ್ಠೆಯ ಮೇಲೆ ಮಾತ್ರ ನಿಂತಿಲ್ಲ, ಬದಲಾಗಿ ಅದರ ಎಲ್ಲ ಸಂಕೀರ್ಣತೆಯನ್ನೂ ಗುರುತಿಸುವ ಇಚ್ಛಾಶಕ್ತಿಯ ಮೇಲೆ ನಿಂತಿದೆ. ಇದು ಕೇವಲ ಕಾನೂನು ಜ್ಞಾನದ ಮೇಲೆ ಅಲ್ಲ, ಮಾನವೀಯತೆ, ಸಮಾನತೆ ಹಾಗೂ ಸಂತ್ರಸ್ತೆಯರ ಮಾನಸಿಕ ಸ್ಥಿತಿಯನ್ನು ಅರ್ಥಮಾಡಿಕೊಳ್ಳುವ ಸಾಮರ್ಥ್ಯವನ್ನು ಅವಲಂಬಿಸಿದೆ.

ನ್ಯಾಯಾಧೀಶರು ಕೇವಲ ಕಾನೂನು ಅನ್ವಯಿಸುವವರು ಅಲ್ಲ, ನ್ಯಾಯ ನೀಡಿಕೆಯ ಪ್ರತಿರೂಪಗಳೂ ಆಗಿದ್ದಾರೆ. ಲಿಂಗ ಸಂವೇದನೆ ಮತ್ತು ಸೂಕ್ಷ್ಮತೆ ಇಲ್ಲದಿದ್ದರೆ ನ್ಯಾಯ ಅಪೂರ್ಣವಾಗುತ್ತದೆ. ನ್ಯಾಯಾಧೀಶರಲ್ಲಿ ಲಿಂಗ ಸೂಕ್ಷ್ಮತೆಯನ್ನು ಬೆಳೆಸಲು ಸುಪ್ರೀಂ ಕೋರ್ಟ್ ನಾನಾ ರೀತಿಯ ಕ್ರಮಗಳನ್ನು ಕೈಗೊಳ್ಳುತ್ತಿದೆ. ಪ್ರತಿ ತೀರ್ಪಿನಲ್ಲಿ ಸಂವೇದನೆ, ಸೂಕ್ಷ್ಮತೆ, ಕರುಣೆ ಹಾಗೂ ಸಮಾನತೆಯ ಮನೋಭಾವ ಪ್ರತಿಬಿಂಬಿತವಾದರೆ ಮಾತ್ರ ನಿಜವಾದ ನ್ಯಾಯ ಸಾಧ್ಯವಾಗುತ್ತದೆ!



ನುಗಡೋಣಿ ಕ್ಯಾಂಪ್ ಸಚಿವ- ಶಾಸಕರಿಂದ ಕೋದಂಡ ರಾಮ ದೇವಸ್ಥಾನ ಉದ್ಘಾಟನೆ

ಸಿರವಾರ.ಫೆ.21-

ತಾಲೂಕಿನ ನುಗಡೋಣಿ ಕ್ಯಾಂಪ್ ನಲ್ಲಿ ಕೋದಂಡರಾಮ್ ನೂತನ ದೇವಸ್ಥಾನ ಲೋಕಾರ್ಪಣೆ ಶುಕ್ರವಾರ ವಿಜ್ಞಾನ ತಂತ್ರಜ್ಞಾನ ಹಾಗೂ ಸಣ್ಣ ನೀರಾವರಿ ಸಚಿವರಾದ ಎನ್.ಎಸ್.ಭೋಸರಾಜು ಮತ್ತು ಶಾಸಕರಾದ ಜಿ.ಹಂಪಯ್ಯನಾಯಕ ಇಬ್ಬರು ಉದ್ಘಾಟಿಸಿದರು. ನಂತರ ಮಾತನಾಡಿದ ಸಚಿವರು ಈ ಭಾಗದ ಗ್ರಾಮಸ್ಥರ, ದಾನಿಗಳ ಸಹಾಯದಿಂದ ದೇವಸ್ಥಾನವನ್ನು ಉತ್ತಮ ಹಾಗೂ ಸುಂದರವಾಗಿ ನಿರ್ಮಿಸಲಾಗಿದೆ. ಜನರಿಗೆ ಅನುಕೂಲವಾಗಲಿದೆ ಇದರ ಸದುಪಯೋಗ ಪಡಿಸಿಕೊಳ್ಳಿ ಎಂದರು.

ಬೆಳಗ್ಗೆಯಿಂದಲೇ ಮೂರ್ತಿಗಳ ಪ್ರತಿಷ್ಠಾನ, ಹೋಮ, ಹವನ, ವಿಶೇಷವಾದ ಪೂಜೆ,ಜರುಗಿತು. ಮಹಿಳೆಯರು ನೃತ್ಯ, ಕೊಲಾಟ ಮಾಡಿದರು. ನಂತರ ಭಕ್ತರಿಗೆ ಪ್ರಸಾದ ವ್ಯವಸ್ಥೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾನ್ವಿ ಶಾಸಕ ಹಂಪಯ್ಯ ನಾಯಕ, ಮಾಜಿ ಶಾಸಕ ಗಂಗಾಧರ ನಾಯಕ, ಜಿ.ಪಂ.ಮಾಜಿ ಸದಸ್ಯ ಗಂಗಣ್ಣ ನಾಯಕ, ಶರಣಪ್ಪ ನಾಯಕ ಗುಡದಿನ್ನಿ, ಬ್ರಿಜೇಶ್ ಪಾಟೀಲ, ತಹಸೀಲ್ದಾರ ಅಶೋಕ ಪವಾರ, ಶಿವರಾಜ ನಾಯಕ, ಸಿರವಾರ ಪಟ್ಟಣ ಪಂಚಾಯತಿ ಅಧ್ಯಕ್ಷ ಹಾಜಿ ಚೌದ್ರಿ, ಮಾಜಿ ಅಧ್ಯಕ್ಷ ಭೂಪನಗೌಡ, ದಾನನಗೌಡ, ಚುಕ್ಕಿ ಶಿವಕುಮಾರ್, ಶಿವಕುಮಾರಗೌಡ ಎನ್.ಹೊಸೂರು, ಶಿವಶರಣ ಸಾಹುಕಾರ್ ಅರಕೇರಿ,ಎನ್. ರೇಣುಕಾ, ಶರಣು ಸಾಹುಕಾರ್ ಚಿಂಚರಕಿ, ಬಂಡೆಯ್ಯಸ್ವಾಮಿ, ರವಿಕುಮಾರ್, ಪ್ರವೀಣ್ ಭೀರಪ್ಪ ಬಲ್ಲಟಿಗಿ, ಪ.ಪಂಚಾಯತಿ, ಗ್ರಾ.ಪಂ ಸದಸ್ಯರು, ಜನಪ್ರತಿನಿಧಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಸೇರಿದಂತೆ ಅನೇಕರು ಭಾಗವಹಿಸಿದ್ದರು.

ರಾತ್ರಿ ವಿಶೇಷ ತರಗತಿಗೆ ತಹಸೀಲ್ದಾರ ಭೇಟಿ

ಪರೀಕ್ಷೆ ಎಂಬ ಭಯ ಬೇಡ - ಅಶೋಕಪವಾರ



ಸಿರವಾರ.ಫೆ.21-

ವಿದ್ಯಾರ್ಥಿ ಜೀವನದಲ್ಲಿ 10ನೇ ತರಗತಿ ಪ್ರಮುಖ ಹಂತವಾಗಿದೆ. ಇಲ್ಲಿಯವರೆಗೂ ಹೇಗೆ ಅಭ್ಯಾಸ ಮಾಡಿದಿರಿ ಅದೇ ರೀತಿ ಮುಂದಿನ 1 ತಿಂಗಳುಗಳ ಸಮಯ ವ್ಯರ್ಥ ಮಾಡದೆ ಇಷ್ಟಪಟ್ಟು ಅಭ್ಯಾಸ ಮಾಡಿದರೆ ಅದಿಕ ಅಂಕ ಪಡೆಯಬಹುದು ಎಂದು ತಹಸೀಲ್ದಾರ ಅಶೋಕಪವಾರ ಕಿವಿ ಹೇಳಿದರು.

ಪಟ್ಟಣದ ಸರ್ಕಾರಿ ಬಾಲಕರ ಪ್ರೌಢಶಾಲೆಯಲ್ಲಿ ವಿಶೇಷ ತರಗತಿ (ಸಾಯಂಕಾಲ 6:00 ಯಿಂದ 9:00 ವರೆಗೆ) ಆಗಮಿಸಿ ವಿಕ್ಷಣೆ ಮಾಡಿ ಸಲಹೆ ಸೂಚನೆ ನೀಡಿದರು. ಪ.ಪಂಚಾಯತಿ ಮುಖ್ಯಾಧಿಕಾರಿ ಸುರೇಶ ಶೇಟ್ಟಿ ಮಾತನಾಡಿ ಪಠ್ಯದಲ್ಲಿರುವ ವಿಷಯದ ಬಗ್ಗೆ ಪ್ರಶ್ನೆಗಳನ್ನು ಕೇಳುತ್ತಾರೆ ಇತ್ತರೆ ವಿಷಯದ ಬಗ್ಗೆ ಗಮನ ಕೊಡದೆ ಪಠ್ಯೆಯಲ್ಲಿರುವ ವಿಷಯಗಳನ್ನು ನಿಮ್ಮ ನಿಮ್ಮಲಿ ಚರ್ಚೆ ಮಾಡಿದರೆ ವಿಷಯ ಮನನವಾಗುತ್ತದೆ.

ಪರೀಕ್ಷೆಯಲ್ಲಿ ಬರೆಯಲು ಸರಳವಾಗುತ್ತದೆ ಎಂದು ವಿದ್ಯಾರ್ಥಿಗಳಿಗಾಗಿ ಅಭ್ಯಾಸ ಸಮಯದಲ್ಲಿ ಮಕ್ಕಳಿಗೆ 10ನೇ ತರಗತಿ ಪರೀಕ್ಷೆಯನ್ನು ಎದುರಿಸುವುದು ಹೇಗೆ ಹಾಗೂ ಯಶಸ್ಸನ್ನು ಗಳಿಸುವುದು ಹೇಗೆ ಎಂಬುವುದರ ಕುರಿತು ವಿವರವಾಗಿ ಹೇಳಿದರು.

ಈ ಸಂದರ್ಭದಲ್ಲಿ ಶಿಶು ಅಭಿವೃದ್ಧಿ ಯೋಜನೆ ಅಧಿಕಾರಿ ಗೋಕುಲ್ ಸಾಬ್ ಹಾಗೂ ಸಮೂಹ ಸಂಪೂರ್ಣ ಮೂಲ ವ್ಯಕ್ತಿ ಮಹೇಶ್, ಶಿಕ್ಷಕರಾದ ಮಂಜುನಾಥ ಹಾಗೂ ವೆಂಕಟೇಶ, ಸರ್ಕಾರಿ ನೌಕರರ ಸಂಘ ನಿರ್ದೇಶಕರಾದ ಚನ್ನವೀರಯ್ಯ, ಮುಖ್ಯ ಗುರುಗಳಾದ ರಾಜಸಾಬ್, ಎನ್ ಪಿ ಎಸ್ ಅಧ್ಯಕ್ಷರಾದ ಬಸವರಾಜ್ ಹಾಜರಿದ್ದರು,

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಸಿರವಾರ ತಾಲೂಕ ಸಿಂಧನೂರು ಜಿಲ್ಲೆಸೇರಿಸುವ ವದಂತಿ. ಫೆ. 23 ರಂದು ಪಕ್ಷಾತೀತವಾಗಿ ಹೋರಾಟ.

ಸಿರವಾರ.ಫೆ.21-

ರಾಯಚೂರು ಜಿಲ್ಲೆಯಿಂದ ಸಿಂಧನೂರು ತಾಲೂಕನ್ನು ವಿಭಜಿಸಿ ಜಿಲ್ಲೆಯಾಗಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇದ್ದೂ ಈ ಜಿಲ್ಲೆಗೆ ಸಿರವಾರ ತಾಲೂಕನ್ನು ಸೇರ್ಪಡೆ ಮಾಡಲಾಗುತ್ತಿದೆ ಎಂಬ ವದಂತಿ ಹಿನ್ನೆಲೆಯಲ್ಲಿ ಸಿರವಾರ ಪಟ್ಟಣದಲ್ಲಿ ಪೆ.23 ಸೋಮವಾರ ದಂದು ಈಶ್ವರ ದೇವಸ್ಥಾನದಿಂದ ಮುಖ್ಯರಸ್ತೆಯ ಮಾರ್ಗವಾಗಿ ತಹಸೀಲ್ದಾರ ಕಛೇರಿಯ ವರೆಗೂ ಕಾಲ್ನಡಿಗೆಯಲ್ಲಿ ಪ್ರತಿಭಟನೆ ಮಾಡಿ ಸರ್ಕಾರಕ್ಕೆ, ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರ ನೀಡಲಾಗುವುದು. ಹಿರಿಯ ಮುಖಂಡರಾದ ಜೆ.ಶರಣಪ್ಪಗೌಡ ಮತ್ತು ಚುಕ್ಕಿ ಸೂಗಪ್ಪ ಸಾಹುಕಾರ ನೇತೃತ್ವದಲ್ಲಿ ಪ್ರತಿಭಟನೆ ಹಮ್ಮಿಕೊಳಲಾಗಿದೆ ತಾಲೂಕಿನ ವಿವಿಧ ಪಕ್ಷದ ಮುಖಂಡರು, ಜನಪ್ರತಿನಿಧಿಗಳು ಪಕ್ಷಾತೀತವಾಗಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಕೊರಿದ್ದಾರೆ





ಬಿಜೆಪಿ ಜಿಲ್ಲಾ ಎಸ್ ಟಿ ಮೋರ್ಚಾ ಅಧ್ಯಕ್ಷರಾದ ವೀರೇಶ ಬಾಲಪ್ಪ ನಾಯಕ ಸನ್ಮಾನ

ಸಿರವಾರ, ಫೆ.21- ರಾಯಚೂರು ಜಿಲ್ಲಾ ಬಿಜೆಪಿ ಎಸ್ ಟಿ ಮೋರ್ಚಾ ಅಧ್ಯಕ್ಷರಾಗಿ ಆಯ್ಕೆಯಾದ ವೀರೇಶ್ ನಾಯಕ್ ಮಲ್ಲೇದೇವರುಗುಡ್ಡ ಅವರನ್ನು ವಾಸುದೇವ ನಾಯಕ ಮಲೆದೇವರಗುಡ್ಡ ,

ನೀಲವಂಜಿ ಅಶೋಕ್ ಜಾಗಟಗಲ್,ಮುದುರಂಗಪ್ಪ ನಾಯಕ ನಾಗೋಲಿ, ವಿರುಪಾಕ್ಷಿ ಜಾಗಟಗಲ್,ಮೂಕಪ್ಪ ನಾಯಕ ಜಾಗಟಗಲ್, ಬಸವ ಟೈಲರ್ ಮಲ್ಲಿದೇವರಗುಡ್ಡ, ವೆಂಕಟೇಶ ಭಜಂತ್ರಿ ಅರಕೇರಿ, ಸಾತಲ್ ಮುದಿಯಪ್ಪ,ವೆಂಕಟೇಶ ಮಾಣೀಕ್ ಅರಕೇರಾ ಸನ್ಮಾನಿಸಿ ಅಭಿನಂದಿಸಿದರು.

2026-27 ನೇ ರಾಜ್ಯ ಬಜೆಟ್ ಅಲ್ಲಿ ಶಿಕ್ಷಣಕ್ಕೆ 30% ಮೀಸಲಿಡುವ ಮೂಲಕ ಗುಣಮಟ್ಟದ ಶಿಕ್ಷಣ ನೀಡಲು ಎಸ್ಎಫ್ಐ ಒತ್ತಾಯ

ಜಾಲಹಳ್ಳಿ, ರಾಜ್ಯದಲ್ಲಿ 2010 ರಲ್ಲಿ ಒಟ್ಟು 72,875 ಶಾಲೆಗಳಿದ್ದವು. ಒಟ್ಟು 2,45,337 ಶಿಕ್ಷಕರು ಕೆಲಸ ನಿರ್ವಹಿಸುತ್ತಿದ್ದರು. 2021 -22 ವೇಳೆಗೆ ರಾಜ್ಯದಲ್ಲಿ ಒಟ್ಟು 47,386 ಶಾಲೆಗಳು ಮತ್ತು 1,45,326 ಶಿಕ್ಷಕರು ಕೆಲಸ ನಿರ್ವಹಿಸುತ್ತಿದ್ದಾರೆ. ಅಂದರೆ ಕಳೆದ 11 ವರ್ಷದಲ್ಲಿ ರಾಜ್ಯದಲ್ಲಿ 25,489 ಶಾಲೆಗಳು ಮುಚ್ಚಲಾಗಿದೆ. ಮತ್ತು 1,00,011 ಶಿಕ್ಷಕ ಹುದ್ದೆಗಳು ಕುಂಟಿತಗೊಂಡಿವೆ, 2026-27 ನೇ ರಾಜ್ಯ ಬಜೆಟ್ ಅಲ್ಲಿ ಶಿಕ್ಷಣಕ್ಕೆ 30% ಮೀಸಲಿಡುವ ಮೂಲಕ ಗುಣಮಟ್ಟದ ಶಿಕ್ಷಣ ನೀಡಲು ರಾಜ್ಯ ಸರ್ಕಾರಕ್ಕೆ ಎಸ್ ಎಫ್ ಐ ಒತ್ತಾಯ ಮಾಡುತ್ತದೆ ಎಂದು ಎಸ್ ಎಫ್ ಐ ಮುಖಂಡ ಸಂತೋಷ್ ತ್ಯಾಪ್ಲಿ ಹೇಳಿದರು

ಸರ್ಕಾರ ಸರ್ಕಾರಿ ಶಾಲೆಗಳಿಗೆ ಸರಿಯಾದ ಮೂಲಭೂತ ಸೌಕರ್ಯ ಮತ್ತು ಗುಣಮಟ್ಟದ ಶಿಕ್ಷಣ ನೀಡಲು ವಿಫಲವಾದ ಕಾರಣ ದಿಂದ ಸರ್ಕಾರಿ ಶಾಲೆಗೆ ಸೇರುವ ಮಕ್ಕಳ ಪ್ರಮಾಣ ಕಡಿಮೆಯಾಗುತ್ತದೆ. 2022-23 ರಲ್ಲಿ 45.46 ಲಕ್ಷ ವಿದ್ಯಾರ್ಥಿಗಳು ಸರ್ಕಾರಿ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದ್ದರು. 2023-24 ರಲ್ಲಿ 42.94 ಲಕ್ಷ ಹಾಗೂ 2024-25 ರಲ್ಲಿ 40.74 ಲಕ್ಷ ವಿದ್ಯಾರ್ಥಿಗಳು ಸರ್ಕಾರಿ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿದಾರೆ. ಸರ್ಕಾರಿ ಶಾಲೆಗಳಲ್ಲಿ ವರ್ಷದಿಂದ ವರ್ಷಕ್ಕೆ ಶಾಲೆಗೆ ಸೇರುವವರ ಪ್ರಮಾಣ ಕಡಿಮೆಯಾಗುತ್ತಿದೆ. 5,77,00 ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗಿದೆ. ಸರ್ಕಾರಿ ಶಾಲೆಗಳಲ್ಲಿ ದಾಖಲಾತಿ ಯಾಕೆ ಕಡಿಮೆಯಾಗುತ್ತಿದೆ ಎಂದು ಅಧ್ಯಯನ ಮಾಡದೇ ದಾಖಲಾತಿ ನೆಪ ಹೇಳಿ ಸರ್ಕಾರಿ ಶಾಲೆಗಳನ್ನು ಮುಚ್ಚುತ್ತಿರುವುದು ನಾವು ಕಾಣುತ್ತಿದ್ದೇವೆ. ಹಾಗೆ ರಾಜ್ಯದಲ್ಲಿ ಕಾಲೇಜು ಶುಲ್ಕಗಳು ವಿಪರೀತ ಹೆಚ್ಚಳವಾಗಿದೆ. ಶಾಲೆ, ಕಾಲೇಜುಗಳ ಶುಲ್ಕ ಸಾವಿರದಿಂದ ಲಕ್ಷಕ್ಕೆ ಬಂದು ನಿಂತಿದೆ. ಇನ್ನು ಕೆಲವೇ ವರ್ಷಗಳಲ್ಲಿ ಕೋಟಿ ತಲುಪಿದರು ಆಶ್ಚರ್ಯಪಡುವಂತಿಲ್ಲ ಈಗಾಗಲೇ ಮೆಡಿಕಲ್ ಮತ್ತು ಎಂಜಿನಿಯರಿಂಗ್ ಕೋರ್ಸ್ ಕಾಲೇಜು ಶುಲ್ಕ ಕೋಟಿ ತಲುಪಿದೆ. ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಪ್ರವೇಶ ಶುಲ್ಕ ಮತ್ತು ಪರೀಕ್ಷಾ ಶುಲ್ಕ ಹೆಚ್ಚಳ ಮಾಡಲಾಗುತ್ತದೆ.

ಸರ್ಕಾರಗಳು ವಿಶ್ವವಿದ್ಯಾಲಯಗಳಿಗೆ ಸರಿಯಾದ ಅನುದಾನ ನೀಡುತ್ತಿಲ್ಲ ಆದರಿಂದ ವಿಶ್ವವಿದ್ಯಾಲಯಗಳು ಸಂಕಷ್ಟದಲ್ಲಿವೆ. ಸರ್ಕಾರ ಅನುದಾನ ನೀಡದ ಕಾರಣ ವಿದ್ಯಾರ್ಥಿಗಳಿಗೆ ಪ್ರವೇಶ ಶುಲ್ಕ ಮತ್ತು ಪರೀಕ್ಷಾ ಶುಲ್ಕಗಳನ್ನು ಹೆಚ್ಚಳ ಮಾಡಿ ವಿದ್ಯಾರ್ಥಿಗಳಿಂದ ವಸೂಲಿ ಮಾಡಲಾಗುತ್ತಿದೆ. ಆದರಿಂದ ರಾಜ್ಯ ವಿಶ್ವ ವಿದ್ಯಾಲಯಗಳಿಗೆ ಹೆಚ್ಚಿನ ಅನುದಾನ ನೀಡಬೇಕು ಹಾಗೂ ರಾಜ್ಯದಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಬೇಕು ಹಾಗೂ ಸಾರ್ವಜನಿಕ ಶಿಕ್ಷಣ ಉಳಿವಿಗಾಗಿ ಹೆಚ್ಚಿನ ಅನುದಾನ ನೀಡಬೇಕು ಹಾಗೂ ರಾಜ್ಯದಲ್ಲಿ ಗುಣಮಟ್ಟ ಶಿಕ್ಷಣ ನೀಡಲು ಸರ್ಕಾರ ಶಿಕ್ಷಣಕ್ಕೆ ಬಜೆಟ್ ಅಲ್ಲಿ ಹೆಚ್ಚಿನ ಹಣ ಮೀಸಲಿಡಬೇಕು.

ರಾಜ್ಯದಲ್ಲಿ ವಿದ್ಯಾರ್ಥಿನಿಲಯಗಳಲ್ಲಿ ಅರ್ಜಿ ಸಲ್ಲಿಸುವವರ ಸಂಖ್ಯೆ ಹೆಚ್ಚಳವಾಗಿದೆ. ಹಾಸ್ಟೆಲ್ ಗಳಲ್ಲಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಸರಕಾರ ಊಟದ ಭತ್ಯೆಗಾಗಿ ಮಾಸಿಕವಾಗಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ಕೇವಲ 1750 ರೂ, ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ 1850 ರೂಪಾಯಿಗಳನ್ನು ಮಾತ್ರ ನೀಡುತ್ತಿದೆ. ಅಗತ್ಯ ವಸ್ತುಗಳ ಬೆಲೆಗಳು ವಿಪರೀತವಾಗಿ ಹೆಚ್ಚುತ್ತಿರುವ ಈ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಈಗ ಸರ್ಕಾರ ನೀಡುತ್ತಿರುವ ಹಣದಲ್ಲಿ ಗುಣಮಟ್ಟದ ಪೌಷ್ಠಿಕ ಆಹಾರ ಒದಗಿಸಲಾಗುತ್ತಿಲ್ಲ. ಇದರಿಂದಾಗಿ ಹಾಸ್ಟೆಲ್ ನಲ್ಲಿ ಓದುವ ಮಕ್ಕಳು ಅಪೌಷ್ಠಿಕತೆಗೊಳಗಾಗುತ್ತಿದ್ದಾರೆ ಹಾಗಾಗಿ ಮಾಸಿಕ ಆಹಾರ ಭತ್ಯೆಯನ್ನು



ಕನಿಷ್ಠ 4500 ರೂಪಾಯಿಗಳಿಗೆ ಹೆಚ್ಚಳ ಮಾಡಬೇಕು. ಅಲ್ಲದೇ ರಾಜ್ಯದಲ್ಲಿ ವಿದ್ಯಾರ್ಥಿನಿಲಯಗಳಿಗೆ ಅರ್ಜಿ ಸಲ್ಲಿಸುತ್ತಿರುವವರ ಸಂಖ್ಯೆ ಹೆಚ್ಚಳವಾಗಿದೆ. ವಿದ್ಯಾರ್ಥಿನಿಲಯಗಳಿಗೆ ಅರ್ಜಿ ಸಲ್ಲಿಸುತ್ತಿರುವವರು ಗ್ರಾಮೀಣ ಪ್ರದೇಶದ, ರೈತ, ಕೂಲಿ ಕಾರ್ಮಿಕ, ಕಾರ್ಮಿಕ, ದಲಿತ, ಹಿಂದುಳಿದ, ಬಡ ವಿದ್ಯಾರ್ಥಿಗಳು ಹಾಸ್ಟೆಲ್ ಬಯಸಿ ಅರ್ಜಿ ಹಾಕಿದರೆ, ಅತ್ಯಂತ ಕಡಿಮೆ ಸಂಖ್ಯೆಯಿರುವ ಹಾಸ್ಟೆಲ್ ಗಳಿಂದಾಗಿ ಅವರಿಗೆ ಹಾಸ್ಟೇಲ್ ಸೌಲಭ್ಯ ಸಿಗುತ್ತಿಲ್ಲ. ಇದರ ಪರಿಣಾಮವಾಗಿ ವಿದ್ಯಾರ್ಥಿಗಳು ವಿಧ್ಯಾಭ್ಯಾಸದಿಂದ ವಂಚಿತಗೊಳ್ಳುವ ಅಪಾಯದ ಸ್ಥಿತಿಯಲ್ಲಿದ್ದಾರೆ. ಅರ್ಜಿ ಹಾಕಿರುವ ಎಲ್ಲ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸೌಲಭ್ಯ ಸಿಗುವಂತಾಗಲು, ವಿದ್ಯಾರ್ಥಿಗಳ ಸಂಖ್ಯೆಗನುಗುಣವಾಗಿ ಹಾಸ್ಟೆಲ್ ಗಳನ್ನು ಹೆಚ್ಚಿಸಬೇಕಾದ ತುರ್ತಿದೆ. ಹಾಸ್ಟೇಲ್ ವಿದ್ಯಾರ್ಥಿಗಳ ಆರೋಗ್ಯ ಭದ್ರತೆ ಸರ್ಕಾರ ಒದಗಿಸಬೇಕಿದೆ. ಎಲ್ಲಾ ಹಾಸ್ಟೆಲ್ ಹಾಗೂ ವಸತಿ ಶಾಲೆಗಳಿಗೆ ಕಾವಲುಗಾರ ಸಿಬ್ಬಂದಿ ಹಾಗೂ ಸ್ವಚ್ಛತಾ ಸಿಬ್ಬಂದಿ ನೇಮಕ ಮಾಡಿಕೊಳ್ಳಬೇಕಿದೆ. ಹಲವು ವಿದ್ಯಾರ್ಥಿನಿಲಯಗಳು ಸ್ವಂತ ಕಟ್ಟಡಗಳಿಲ್ಲದೆ ಬಾಡಿಗೆ ಕಟ್ಟಡದಲ್ಲಿದೆ. ಬಾಡಿಗೆ ಕಟ್ಟಡಗಳಿಗೆ ಲಕ್ಷ ಲಕ್ಷ ಬಾಡಿಗೆ ನೀಡಲಾಗುತ್ತಿದೆ. ವಿದ್ಯಾರ್ಥಿನಿಲಯಗಳಲ್ಲಿ ಗ್ರಂಥಾಲಯ ಸೌಲಭ್ಯ ಹಾಗೂ ಅಗತ್ಯ ಕ್ರೀಡಾ ಸಾಮಾಗ್ರಿಗಳು ದೊರೆಯಯುತ್ತಿಲ್ಲ ಹಾಗೂ ಇನ್ನೂ ಹತ್ತಾರು ಸಮಸ್ಯೆಗಳನ್ನು ಹಾಸ್ಟೆಲ್ ವಿದ್ಯಾರ್ಥಿಗಳು ಎದುರಿಸುತ್ತಿದ್ದಾರೆ. ಆದರಿಂದ ಭಾರತ ವಿದ್ಯಾರ್ಥಿ ಫೆಡರೇಷನ್, ದೇವದುರ್ಗ ತಾಲೂಕು ಸಮಿತಿ 2026-27 ನೇ ರಾಜ್ಯ ಬಜೆಟ್ ಅಲ್ಲಿ ಹೆಚ್ಚಿನ ಬಜೆಟ್ ನೀಡಬೇಕಾಗಿ ಒತ್ತಾಯ ಮಾಡುತ್ತದೆ ಎಂದರು

ಹಕ್ಕೋತಾಯಗಳು

1) ರಾಜ್ಯದ ಎಲ್ಲಾ ವಿಶ್ವ ವಿದ್ಯಾಲಯಗಳಿಗೆ ಅನುದಾನ ಬಿಡುಗಡೆ ಮಾಡಬೇಕು.

2) ಸಮರ್ಪಕ ಸಾರಿಗೆ ವ್ಯವಸ್ಥೆ ಕಲ್ಪಿಸಲು ಹಾಗೂ ಉನ್ನತ ಶಿಕ್ಷಣದವರೆಗೂ ಎಲ್ಲಾ ವರ್ಗದ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ನೀಡಬೇಕು.

3) ಬಜೆಟ್ ನಲ್ಲಿ ಶಿಕ್ಷಣಕ್ಕಾಗಿ ಕೋಟಾರಿ ಆಯೋಗದ ಶಿಫಾರಸ್ಸು ಪ್ರಕಾರ ರಾಜ್ಯ ಸರ್ಕಾರ ಶೇ 30 ರಷ್ಟು ಹಣ ಮೀಸಲಿಡಬೇಕು.

4) ರಾಜ್ಯದಲ್ಲಿ ಇರುವ ಸರ್ಕಾರಿ ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ 1750 ರೂ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿಗಳಿಗೆ 1850 ರೂ ಮಾಸಿಕವಾಗಿ ಆಹಾರ ಭತ್ಯೆ ನಿಗದಿಯಾಗಿದೆ. ಇದನ್ನು 3500 ಕ್ಕೆ ಹೆಚ್ಚಿಸಬೇಕು. ಮತ್ತು ಆರೋಗ್ಯ ಭದ್ರತೆ ಒದಗಿಸಬೇಕು ಮತ್ತು ಅರ್ಜಿ ಸಲ್ಲಿಸಿದ ಎಲ್ಲಾ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ನೀಡಬೇಕು ಹಾಗೂ ವಿದ್ಯಾರ್ಥಿಗಳಿಗೆ ಆರೋಗ್ಯ ಭದ್ರತೆ ಒದಗಿಸಬೇಕು

5) ದಿನಾಂಕ 28-02-2022 ರಂದು ವಿಶ್ವ ವಿದ್ಯಾಲಯಗಳು ಅಂಕಪಟ್ಟಿ ನೀಡಬಾರದು ಎಂದು ಅಂದಿನ ಬಿ ಜೆ ಪಿ ಸರ್ಕಾರ ಹೊರಡಿಸಿರುವ ಆದೇಶವನ್ನು ವಾಪಾಸ್ ಪಡೆದು ಬಾಕಿ ಉಳಿಸಿಕೊಂಡಿರುವ 50 ಲಕ್ಷ ಅಂಕಪಟ್ಟಿಗಳನ್ನು ತಕ್ಷಣ ರಾಜ್ಯದ ವಿದ್ಯಾರ್ಥಿಗಳಿಗೆ ನೀಡಬೇಕೆಂದು ಒತ್ತಾಯ

6) ಸರ್ಕಾರಿ ಶಾಲಾ ಕಾಲೇಜುಗಳನ್ನು ಬಳಪಡಿಸುವ ನಿಟ್ಟಿನಲ್ಲಿ ಖಾಲಿ ಇರುವ ಶಿಕ್ಷಕರು, ತಾಂತ್ರಿಕ ಉದ್ದೆಗಳು, ಭೋದಕೇತರ ಹುದ್ದೆಗಳನ್ನು ಭರ್ತಿ ಮಾಡಬೇಕು. ಶಾಲಾ ಕಾಲೇಜುಗಳಲ್ಲಿ ಮೂಲಭೂತ ಸೌಕರ್ಯ ಒದಗಿಸಬೇಕು. ಮತ್ತು ಸರ್ಕಾರ ಮುಚ್ಚಲು ಮುಂದಾಗಿರುವ ಸರ್ಕಾರಿ ಶಾಲೆಗಳನ್ನು ಮುಚ್ಚಬಾರದು, ಸರ್ಕಾರಿ ಶಾಲಾ ಕಾಲೇಜುಗಳನ್ನು ಬಳಪಡಿಸಬೇಕು ಹಾಗೂ ಪದವಿ ಶಿಕ್ಷಣದ ಉಚಿತ ಕಡ್ಡಾಯ ಶಿಕ್ಷಣ ನೀಡಬೇಕು.

7) ರಾಜ್ಯದಲ್ಲಿ ಪ್ರತಿಯೊಂದು ಜಿಲ್ಲೆಯಲ್ಲಿ ಸರ್ಕಾರಿ ಕಾನೂನು ಕಾಲೇಜು, ಇಂಜಿನಿಯರಿಂಗ್ ಕಾಲೇಜು, ವೈದ್ಯಕೀಯ ಕಾಲೇಜು ಮತ್ತು ನರ್ಸಿಂಗ್ ಸರ್ಕಾರಿ ಕಾಲೇಜುಗಳನ್ನು ತೆರೆಯಬೇಕು

8) 2006-07 ರಿಂದ ಗ್ರಾಮೀಣ ಪ್ರದೇಶದ 8 ನೇ ತರಗತಿ ವಿದ್ಯಾರ್ಥಿಗಳಿಗೆ ನೀಡುವ ಸೈಕಲ್ ಗಳನ್ನು ಯೋಜನೆಯನ್ನು 2018 ರಿಂದ ನಿಲ್ಲಿಸಲಾಗಿದೆ.ಅದನ್ನು ಮರು ಜಾರಿ ಮಾಡಿ. 8 ನೇ ತರಗತಿ ವಿದ್ಯಾರ್ಥಿಗಳಿಗೆ ಸೈಕಲ್ ನೀಡಬೇಕು.

9) ರಾಜ್ಯದಲ್ಲಿ ಸಂಶೋಧನೆ () ಮಾಡುತ್ತಿರುವ ವಿದ್ಯಾರ್ಥಿಗಳಿಗೆ 25000 ಮಾಸಿಕ ಆರ್ಥಿಕ ಸಹಾಯ ದನ ನೀಡಬೇಕು.

10) ಡಿಗ್ರಿ ವಿದ್ಯಾರ್ಥಿಗಳಿಗೆ ಈ ಹಿಂದೆ ನೀಡುತ್ತಿದ್ದ ಲ್ಯಾಪ್ ಟಾಪ್ ಗಳನ್ನು ವಿದ್ಯಾರ್ಥಿಗಳಿಗೆ ನೀಡಬೇಕು.

11) ರಾಜ್ಯದಲ್ಲಿ ಖಾಸಗಿ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಪೈಕಿ ಮ್ಯಾನೇಜ್ಮೆಂಟ್‌ನ ಶೀಟುಗಳ ಪಡೆದು ಅಧ್ಯಯನ ಮಾಡುವ ವೃತ್ತಿಪರ ವಿದ್ಯಾರ್ಥಿಗಳಿಗೆ ಶಿಷ್ಯ ವೇತನ (ಸ್ಕಾಲರ್ಷಿಪ್) ನೀಡುತ್ತಿಲ್ಲ ಆದರಿಂದ ರಾಜ್ಯದಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಶಿಷ್ಯ ವೇತನ (ಸ್ಕಾಲರ್ಷಿಪ್) ನೀಡಬೇಕು.

12) ಬೆಂಗಳೂರು ಮೆಟ್ರೋದಲ್ಲಿ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ವಿದ್ಯಾರ್ಥಿಗಳಿಗೆ ಬಸ್ ಪಾಸ್ ಮಾದರಿಯಲ್ಲಿ ವಿದ್ಯಾರ್ಥಿಗಳಿಗೆ ಮೆಟ್ರೋ ರಿಯಾಯಿತಿ ಪಾಸ್ ನೀಡಬೇಕು.

13) ರಾಜ್ಯದಲ್ಲಿ ಖಾಲಿ ಇರುವ 2,70,000 ಕ್ಕೂ ಹೆಚ್ಚು ಹುದ್ದೆಗಳನ್ನು ಭರ್ತಿ ಮಾಡಬೇಕು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR